ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೫

**ಪಟ್ಟಿ – ೧೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಮಂಗಳವಾರ, ದಿನಾಂಕ : ೦೬ನೇ ಜೂನ್, ೨೦೧೭

---

**ಸಮೂಹ – II**

೧. ಇಂಧನ ಸಚಿವರು.

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೪. ಕೃಷಿ ಸಚಿವರು.

೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು.

೬. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

---

# ೩೭೧ (ಜೆ) ಪ್ರಕಾರ ಇಂಧನ ಇಲಾಖೆಯಲ್ಲಿ ಹೈದ್ರಾಬಾದ್–ಕರ್ನಾಟಕ ಭಾಗದವರಿಗೆ ನೇಮಕಾತಿ ಹಾಗೂ ಬಡ್ತಿಗಳಲ್ಲಿ ಮೀಸಲಾತಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೪೮ (೨೦೫೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸಂವಿಧಾನದ ಕಲಂ ೩೭೧ (ಜೆ) ಪ್ರಕಾರ ಇಂಧನ ಇಲಾಖೆ ಅಡಿಯ ಜೆಸ್ಕಾಂ, ಬೆಸ್ಕಾಂ, ಕೆ.ಪಿ.ಟಿ.ಸಿ.ಎಲ್‌ನಲ್ಲಿ ಹೈದ್ರಾಬಾದ್ – ಕರ್ನಾಟಕ ಭಾಗದವರಿಗೆ ನೇಮಕಾತಿ ಹಾಗೂ ಬಡ್ತಿಗಳಲ್ಲಿ ಮೀಸಲಾತಿ ಕಲ್ಪಿಸಲಾಗಿದೆಯೇ ; ಹಾಗಿದ್ದರೆ, ನೇಮಕಾತಿಗಾಗಿ ಹಾಗೂ ಬಡ್ತಿಗಳಿಗಾಗಿ ಮೀಸಲಿರಿಸಿದ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಇಂಜಿನಿಯರ್ (ವಿದ್ಯುತ್)/(ಕಾಮಗಾರಿ) ಪದವೃಂದ ಹುದ್ದೆಯಿಂದ ಸಹಾಯಕ ಇಂಜಿನಿಯರ್ (ವಿದ್ಯುತ್)/(ಕಾಮಗಾರಿ) ಪದವೃಂದದ ಹುದ್ದೆಗಳಿಗೆ ಇತ್ತೀಚೆಗೆ ಬಡ್ತಿ ನೀಡಲಾಗಿರುವ ವಿಷಯು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಜೇಷ್ಠತಾ ಪಟ್ಟಿ ತಯಾರಿಸಿ ೩೭೧ (ಜೆ) ಅಡಿಯಲ್ಲಿ ಹೈದ್ರಾಬಾದ್ – ಕರ್ನಾಟಕ ಭಾಗದ ಹುದ್ದೆಗಳಿಗೆ ಬಡ್ತಿ ನೀಡಲಾಗಿದೆಯೇ ; (ಹುದ್ದೆವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನಿಯಂತ್ರಣದಲ್ಲಿರುವ ಜೆಸ್ಕಾಂ, ಬೆಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳನ್ನು ಹೈದ್ರಾಬಾದ್–ಕರ್ನಾಟಕ ಮೀಸಲಾತಿಯಿಂದ ಹೊರತುಪಡಿಸಿ ಅಧಿಸೂಚಿಸಲು ಕಾರಣವೇನು ; (ವಿವರ ನೀಡುವುದು)

(ಈ) ಜೆಸ್ಕಾಂ, ಬೆಸ್ಕಾಂನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಅಭಿಯಂತರರ ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಹುದ್ದೆಗಳನ್ನು ಅನುಚ್ಛೇಧ ೩೭೧ (ಜೆ) ಹೈದ್ರಾಬಾದ್ – ಕರ್ನಾಟಕ ಮೀಸಲಾತಿ ಅಡಿಯಲ್ಲಿ ಜೇಷ್ಠತಾ ಪಟ್ಟಿಗಳನ್ನು ಸಿದ್ಧಗೊಳಿಸಲಾಗಿದೆಯೇ ; (ಇದ್ದರೆ ಜೇಷ್ಠತಾ ಪಟ್ಟಿಯನ್ನು ನೀಡುವುದು)

(ಉ) ಜೆಸ್ಕಾಂ ಹಾಗೂ ಬೆಸ್ಕಾಂಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಹಾಯಕ ಅಭಿಯಂತರರ ಮತ್ತು ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರ ಹುದ್ದೆಗಳ ಸೇವಾ ಜೇಷ್ಠತಾ ಪಟ್ಟಿಯನ್ನು ಅನುಚ್ಛೇಧ ೩೭೧ (ಜೆ) ಪ್ರಕಾರ ತಯಾರಿಸುವ ಅಧಿಕಾರ ಜೆಸ್ಕಾಂ ಹಾಗೂ ಬೆಸ್ಕಾಂಗಳಿಗೆ ನೀಡಲಾಗಿದೆಯೇ ; (ಮಾಹಿತಿ ನೀಡುವುದು)

(ಊ) ಜೆಸ್ಕಾಂ, ಬೆಸ್ಕಾಂ, ಹೆಸ್ಕಾಂ, ಮೆಸ್ಕಾಂ, ಸೆಸ್ಕಾಂ ನಲ್ಲಿ ಸಹಾಯಕ ಅಭಿಯಂತರರ ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಂಪನಿವಾರು ಜೇಷ್ಠತಾ ಪಟ್ಟಿ ಇದೆಯೇ ; ಇದ್ದಲ್ಲಿ, ಕಂಪನಿವಾರು ಜೇಷ್ಠತಾ ಪಟ್ಟಿ ನೀಡುವುದು ?

## ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಬೆಳೆದ ತೊಗರಿ ಬೆಳೆಗೆ ಬೆಂಬಲ ಬೆಲೆ ನೀಡುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೪೯ (೨೦೫೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಸಾಲಿನಲ್ಲಿ ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಬೆಳೆದಂತಹ ತೊಗರಿ ಬೆಳೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ತೊಗರಿ ಬೆಲೆ ಮಾರುಕಟ್ಟೆಯಲ್ಲಿ ಕುಸಿತ ಕಂಡು ರೈತರು ಕಂಗಾಲಾಗಿದ್ದು, ಸರ್ಕಾರ ಬೆಂಬಲ ಬೆಲೆ ನೀಡಿ ತೊಗರಿ ಖರೀದಿಸಿದೆಯೇ ; ಇದ್ದರೆ, ಕೇಂದ್ರದ ಮತ್ತು ರಾಜ್ಯದ ನಿಗದಿಪಡಿಸಿದ ಬೆಂಬಲ ಬೆಲೆ ಎಷ್ಟು ; ಇದರ ಮಾರ್ಗಸೂಚಿಗಳೇನು ಹಾಗೂ ಇದರ ಅಡಿಯಲ್ಲಿ ನೋಂದಣಿ ಮಾಡಿದ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳಲ್ಲಿ ತೊಗರಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆಯೇ ; ಹಾಗಿದ್ದರೆ, ಸದರಿ ಕೇಂದ್ರಗಳಿಂದ ಖರೀದಿಸಿದ ತೊಗರಿ ಪ್ರಮಾಣ ಎಷ್ಟು ? (ಖರೀದಿ ಕೇಂದ್ರಗಳ ಹಾಗೂ ರೈತರ ಸಂಖ್ಯೆಯೊಂದಿಗೆ ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ವಿಮಾನ ನಿಲ್ದಾಣದ ಕಾಮಗಾರಿ ವೆಚ್ಚದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೫೦ (೨೦೫೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ವಿಮಾನ ನಿಲ್ದಾಣದ ಕಾಮಗಾರಿ ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿದೆಯೇ ; ಹಾಗಾದರೆ, ಸದರಿ ಯೋಜನೆಯ ನಕಾಶೆಯೊಂದಿಗೆ ಸಂಪೂರ್ಣ ವಿವರ ನೀಡುವುದು ;

(ಆ) ಸದರಿ ಯೋಜನೆಯಲ್ಲಿ ಇಲಾಖೆಗೆ ವಹಿಸಿದ ಕಾಮಗಾರಿಗಳು ಯಾವುವು ; ಕಾಮಗಾರಿಗಳ ಪ್ರತ್ಯೇಕ ಮಾಹಿತಿ ಯೋಜನಾ ವೆಚ್ಚದೊಂದಿಗೆ ವಿವರ ನೀಡುವುದು ;

(ಇ) ಸದರಿ ಯೋಜನೆಯನ್ನು ಲೋಕೋಪಯೋಗಿ ಇಲಾಖೆಗೆ ವಹಿಸುವುದಕ್ಕಿಂತ ಮೊದಲು ಆದಂತಹ ಕಾಮಗಾರಿಗಳು ಯಾವುವು ; ಕಾಮಗಾರಿಗಳವಾರು ವೆಚ್ಚದ ವಿವರದೊಂದಿಗೆ ಮಾಹಿತಿ ನೀಡುವುದು ;

(ಈ) ಸದರಿ ಯೋಜನೆಯ ಭೌತಿಕ ಹಾಗೂ ಆರ್ಥಿಕ ಗುರಿಗಳೇನು ; ಇಲ್ಲಿಯವರೆಗೆ ಸಾಧಿಸಿದ ಭೌತಿಕ ಹಾಗೂ ಆರ್ಥಿಕ ಪ್ರಗತಿ ಎಷ್ಟು ? (ಪ್ರತ್ಯೇಕ ಮಾಹಿತಿ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಲೆಕ್ಕಶೀರ್ಷಿಕೆ ೨೦೫೯, ೨೨೧೬, ೩೦೫೪ ಮತ್ತು ೫೦೫೪ ಗಳ ಕಾಮಗಾರಿಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೧೫೧ (೨೦೫೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ೬ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ೨೦೫೯, ೨೨೧೬, ೩೦೫೪ ಮತ್ತು ೫೦೫೪

ಲೆಕ್ಕಶೀರ್ಷಿಕೆ ಅಡಿಯಲ್ಲಿ ಕಾಮಗಾರಿಗಳ ಗುತ್ತಿಗೆಗಳನ್ನು ನೀಡಲಾಗುತ್ತಿದೆಯೇ ; ಹಾಗಿದ್ದರೆ, ಪಾರದರ್ಶಕತೆ ಕಾಯಿದೆ ಅಡಿಯಲ್ಲಿ ಇ-ಪ್ರಕ್ಯೂರ್ಮೆಂಟ್ ಅಥವಾ ಮ್ಯಾನುವಲ್ ಟೆಂಡರ್ ಮೂಲಕ ಕಾಮಗಾರಿಗಳನ್ನು ಗುತ್ತಿಗೆ ನೀಡಲಾಗಿದೆಯೇ ; ಹೌದಾದರೆ, ಜಿಲ್ಲಾವಾರು ೨೦೧೩-೧೪ನೇ ಸಾಲಿನಿಂದ ವರ್ಷಾವಾರು ಮಾಹಿತಿ ನೀಡುವುದು ;

(ಆ) ಸದರಿ ಇಲಾಖೆಯಲ್ಲಿ ೨೦೫೯, ೨೨೧೬, ೩೦೫೪ ಮತ್ತು ೫೦೫೪ ಲೆಕ್ಕಶೀರ್ಷಿಕೆ ಅಡಿಯಲ್ಲಿ ೨೦೧೩-೧೪ರಿಂದ ನಡೆದ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿ ಅಕ್ರಮವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಲೆಕ್ಕಶೀರ್ಷಿಕೆವಾರು, ಜಿಲ್ಲಾವಾರು ಆದಂತಹ ಅಕ್ರಮಗಳು ಯಾವುವು ; (ಸವಿವರ ಮಾಹಿತಿ ನೀಡುವುದು)

(ಇ) ಸದರಿ ಟೆಂಡರ್ ಗೋಲ್‌ಮಾಲ್/ಅಕ್ರಮಗಳ ಬಗ್ಗೆ ಇಲಾಖೆಯ ಕಾಮಗಾರಿ ಉಸ್ತುವಾರಿ ಕೋಶ ಈ ನಿಟ್ಟಿನಲ್ಲಿ ವರದಿ ನೀಡಿರುವ ವಿಷಯ ಸರ್ಕಾರದ ಗಮನಕ್ಕೆ ಇದೆಯೇ ; ಇದ್ದರೆ, ವರದಿಯ ವಿವರ ನೀಡುವುದು ;

(ಈ) ಸದರಿ ಟೆಂಡರ್ ಗೋಲ್‌ಮಾಲ್/ಅಕ್ರಮಗಳಲ್ಲಿ ಭಾಗಿಯಾದಂತಹ ವ್ಯಕ್ತಿಗಳು ಯಾರು ಹಾಗೂ ಈ ತಪ್ಪಿತಸ್ಥ ವ್ಯಕ್ತಿಗಳ ಮೇಲೆ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಕಲಬುರಗಿ ತಾಲ್ಲೂಕಿನ ಮಹಾಗಾಂವ ಗ್ರಾಮದಲ್ಲಿ ಹೈನುಗಾರಿಕೆ ಮಹಾವಿದ್ಯಾಲಯ ಕಾಮಗಾರಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):-**

೨೧೫೨ (೨೦೫೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ತಾಲ್ಲೂಕಿನ ಮಹಾಗಾಂವ ಗ್ರಾಮದ ಹತ್ತಿರ ಇರುವ ಹೈನುಗಾರಿಕೆ ಮಹಾವಿದ್ಯಾಲಯ ಭಾರತೀಯ ಕೃಷಿ ಅನುಸಂಧಾನ ಪರಿಷತ್ತು, ನವದೆಹಲಿ ಮಾರ್ಗಸೂಚಿ ಪ್ರಕಾರ ಯೋಜನೆಯನ್ನು ಕೈಗೊಳ್ಳಲಾಗಿದೆಯೇ ; ಹಾಗಿದ್ದರೆ, ಸಂಪೂರ್ಣ ವಿವರವಾದ ಮಾಹಿತಿಯನ್ನು ಅಂದಾಜು ವೆಚ್ಚಗಳ ಮಾಹಿತಿಯೊಂದಿಗೆ ನೀಡುವುದು ;

(ಆ) ಇಲ್ಲಿಯವರೆಗೆ ಸದರಿ ಮಹಾವಿದ್ಯಾಲಯದ ಪೂರ್ಣಗೊಂಡ ಕಾಮಗಾರಿಗಳು ಯಾವುವು ಮತ್ತು ವೆಚ್ಚ ಎಷ್ಟು ;

(ಇ) ಸದರಿ ಮಹಾವಿದ್ಯಾಲಯಕ್ಕೆ ವಿದ್ಯುತ್ ಸಂಪರ್ಕ ಎಚ್.ಟಿ. ಲೈನ್ ಸಂಪರ್ಕ ಪಡೆಯಲಾಗಿದೆಯೇ ; ಇದ್ದರೆ ಪೂರ್ಣ ಮಾಹಿತಿ ನೀಡುವುದು ;

(ಈ) ಸದರಿ ಮಹಾವಿದ್ಯಾಲಯಕ್ಕೆ ಮಂಜೂರಾದ, ಕಾರ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಬೋಧಕ, ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ವಿಜಯಪುರ, ಬಾಗಲಕೋಟೆ ಹಾಗೂ ಬೆಳಗಾವಿ ಜಿಲ್ಲೆಗಳ ಪಟ್ಟಣ ಪಂಚಾಯ್ತಿ ಪುರಸಭೆಗಳಲ್ಲಿ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೧೫೩ (೨೧೦೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೇ:–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಪುರಸಭೆಯಡಿಯಲ್ಲಿ ಪ್ರತಿ ಪಟ್ಟಣ ಪಂಚಾಯಿತಿ ಹಾಗೂ ನಗರ ಸಭೆಗಳಲ್ಲಿ ಮಾರ್ಚ್, ಏಪ್ರಿಲ್, ಮೇ ಈ ಮೂರು ತಿಂಗಳಿನ ಪ್ರಸ್ತುತ ಕುಡಿಯುವ ನೀರಿನ ಪರಿಸ್ಥಿತಿ ಏನು ; (ವಿವರ ನೀಡುವುದು)

(ಆ) ನೀರು ಒದಗಿಸುತ್ತಿರುವ ಜಲಮೂಲಗಳು ಯಾವುವು ; (ಪ್ರತಿ ಸಂಘ, ಸ್ಥಳೀಯ ಸಂಸ್ಥೆವಾರು ವಿವರ ನೀಡುವುದು)

(ಇ) ಮುಂದಿನ ೧೦ ವರ್ಷಗಳಲ್ಲಿ ಈ ಪಟ್ಟಣಗಳಿಗೆ, ನಗರಗಳಿಗೆ ನೀರು ಒದಗಿಸುವ ಕುರಿತು ಕೈಗೊಂಡಿರುವ ಯೋಜನೆಗಳು ಯಾವುವು ; ಗುರುತಿಸಿರುವ ಜಲಮೂಲಗಳಾವುವು ; ಅದಕ್ಕಿರುವ ಯೋಜನೆಗಳೇನು ; ಈ ಬರ ಪರಿಹಾರದಡಿ ತೆಗೆದುಕೊಂಡಿರುವ ಕಾಮಗಾರಿಗಳು, ಕೊರೆಸಿರುವ ಬೋರ್‌ವೆಲ್‌ಗಳು, ಯಶಸ್ವಿಯಾದ ಬೋರ್‌ವೆಲ್‌ಗಳು, ಕಾರ್ಯನಿರ್ವಹಿಸುತ್ತಿರುವ ಬೋರ್‌ವೆಲ್‌ಗಳು ಎಷ್ಟು ; ಅದಕ್ಕಾಗಿ ಆಗಿರುವ ಖರ್ಚೆಷ್ಟು ? (ವಿವರ ನೀಡುವುದು)

## ವಿಜಯಪುರ, ಬಾಗಲಕೋಟೆ ಹಾಗೂ ಬೆಳಗಾವಿ ಜಿಲ್ಲೆಗಳ ಸಂಘ ಸಂಸ್ಥೆಗಳಿಗೆ ಒದಗಿಸಿದ ಅನುದಾನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೧೫೪ (೨೧೦೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ನಗರೋತ್ಥಾನ ಯೋಜನೆಯಡಿಯಲ್ಲಿ ಹಾಗೂ ವಿವಿಧ ವಿಶೇಷ ಯೋಜನೆಯಡಿ ಕಳೆದ ೩ ವರ್ಷಗಳಲ್ಲಿ ಅನುದಾನಗಳನ್ನು ಒದಗಿಸಿದ್ದೆಷ್ಟು ; (ಪ್ರತಿ ಸಂಘ ಸಂಸ್ಥೆವಾರು ವಿವರ ನೀಡುವುದು)

(ಆ) ಘೋಷಿಸಿದ ಅನುದಾನ ಎಷ್ಟು ; ಒದಗಿಸಿರುವ ಅನುದಾನ ಎಷ್ಟು ; ಬಳಕೆಯಾದ ಅನುದಾನ ಎಷ್ಟು ; ಬಳಕೆಯಾಗದೆ ಉಳಿದ ಅನುದಾನ ಎಷ್ಟು ;

(ಇ) ತೆಗೆದುಕೊಂಡ ಕಾಮಗಾರಿಗಳು ಯಾವುವು ; (ವಿವರ ನೀಡುವುದು) ಕಾಮಗಾರಿಗಳು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಕೃಷಿ ಯಂತ್ರೋಪಕರಣಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೫೫ (೨೧೩೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೪–೧೫ನೇ ಸಾಲಿನಿಂದ ಈವರೆಗೂ ಕೃಷಿ ಇಲಾಖೆ ವತಿಯಿಂದ ರೈತ ಉತ್ಪಾದಕ ಸಂಸ್ಥೆಗಳು (Farmer Producer Organization) ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳ ರೂಪುರೇಷೆಗಳೇನು ;

(ಆ) ರೈತ ಉತ್ಪಾದಕ ಸಂಸ್ಥೆಗಳು ಇಲಾಖೆಯ ಸಹಭಾಗಿತ್ವದಲ್ಲಿ ಸಂಪನ್ಮೂಲ ಕೇಂದ್ರಗಳೊಂದಿಗೆ ಕಾರ್ಯನಿರ್ವಹಿಸುತ್ತಿದ್ದು, ಈ ಸಂಸ್ಥೆಗಳ ಪಾತ್ರವೇನು ; ಈ ಸಂಸ್ಥೆಗಳಿಗೆ ೨೦೧೪–೧೫ ರಿಂದ ೨೦೧೬–೧೭ನೇ ಸಾಲಿನ ವರೆಗೆ ಬಿಡುಗಡೆಯಾದ ಅನುದಾನವೆಷ್ಟು ;

(ಇ) ರೈತ ಉತ್ಪಾದಕ ಸಂಸ್ಥೆಯವರು ಯಾಂತ್ರೀಕರಣ ಯೋಜನೆಯಡಿ ಖರೀದಿಸಿರುವ ಯಂತ್ರೋಪಕರಣಗಳು ಯಾವ ಸಂಸ್ಥೆ ಅಥವಾ ಯಾವ ಕಂಪನಿಯಿಂದ ಖರೀದಿ ಮಾಡಲಾಗಿದೆ ; ಇದಕ್ಕೆ ಇಲಾಖೆ ನೀಡಿರುವ ಅನುದಾನ ಎಷ್ಟು ; ಯಂತ್ರೋಪಕರಣಗಳನ್ನು ಯಾವ ರೀತಿ ರೈತರಿಗೆ ಒದಗಿಸಲಾಗುತ್ತಿದೆ ?

## ಮೈಸೂರು–ಬೆಂಗಳೂರು ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೫೬ (೨೧೨೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿ ಪ್ರಾರಂಭವಾಗಿದೆಯೇ ; ಪ್ರಾರಂಭವಾಗಿದ್ದರೆ, ಯಾವಾಗ ಯಾವ ಸ್ಥಳದಿಂದ ಪ್ರಾರಂಭವಾಗಿದೆ ; ಸದರಿ ಕಾಮಗಾರಿಗೆ ತಗುಲುವ ಅಂದಾಜು ವೆಚ್ಚ ಎಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಕಾಮಗಾರಿ ಪ್ರಾರಂಭವಾದರೆ ಸಾರ್ವಜನಿಕರಿಗೆ ಈ ನಗರಗಳ ಮಧ್ಯೆ ಸಂಚರಿಸಲು ತೊಂದರೆಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರ ವಾಹನಗಳು ಸಂಚರಿಸಲು ಪರ್ಯಾಯ ಮಾರ್ಗಗಳನ್ನು ಕಲ್ಪಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆಯೇ ;

(ಈ) ಹಾಗಿದ್ದಲ್ಲಿ, ಸಾರ್ವಜನಿಕರಿಗೆ ಯಾವ ಪರ್ಯಾಯ ಮಾರ್ಗದಿಂದ ಸಂಚರಿಸಲು ಅನುಕೂಲ ಮಾಡಿಕೊಡಲಾಗುವುದು ?

## LED ಬಲ್ಬ್‌ಗಳನ್ನು ಸರಬರಾಜು ಮಾಡುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೫೭ (೨೧೩೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗ್ರಾಹಕರಿಗೆ ಇಂಧನ ಇಲಾಖೆ ವತಿಯಿಂದ ವಿದ್ಯುತ್ ಉಳಿಸಲು ಕೆಲವು ವಿದ್ಯುತ್ (LED ಬಲ್ಬ್ ಮತ್ತು ಫ್ಯಾನ್‌ಗಳನ್ನು) ಸಾಮಾಗ್ರಿಗಳನ್ನು ನೀಡಲಾಗುತ್ತಿದೆಯೇ ;

(ಆ) ನೀಡಲಾಗುತ್ತಿದ್ದರೆ, ಇತ್ತೀಚಿನ ದಿನಗಳಲ್ಲಿ LED ಬಲ್ಬ್‌ಗಳನ್ನು ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, LED ಬಲ್ಬ್ ಹಾಗೂ ವಿದ್ಯುತ್ ರಿಯಾಯಿತಿ ದರದಲ್ಲಿ ಉಳಿತಾಯವಾಗುವಂತಹ ವಿದ್ಯುತ್ ಸಾಮಾಗ್ರಿಗಳನ್ನು ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ? (ಪೂರ್ಣ ಮಾಹಿತಿ ನೀಡುವುದು)

## ರೈತರ ಆತ್ಮಹತ್ಯೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೫೮ (೨೧೩೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೪ ವರ್ಷದಿಂದ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಪರಿಹಾರ ನೀಡಲಾಗಿದೆಯೇ ;

(ಇ) ನೀಡಲಾಗಿದ್ದರೆ ಯಾವ ರೀತಿಯ ಪರಿಹಾರ ನೀಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಇದುವರೆಗೂ ಎಷ್ಟು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ; ಎಷ್ಟು ರೈತರಿಗೆ ಪರಿಹಾರ ಒದಗಿಸಲಾಗಿದೆ ? (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

## ತೋಟಗಾರಿಕೆ ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೫೯ (೨೧೩೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಭಾಗ್ಯದಂತೆ, ತೋಟಗಾರಿಕೆ ಭಾಗ್ಯ ಯೋಜನೆ ಪ್ರಾರಂಭಿಸಿರುವ ಇಲಾಖೆ ಈ ಕಾರ್ಯಕ್ರಮದಲ್ಲಿ ಯಾವ ಯಾವ ಯೋಜನೆಗಳನ್ನು ಒಳಗೊಂಡಿದೆ ;

(ಆ) ಯೋಜನೆಯಿಂದ ರೈತರಿಗೆ ಆಗಿರುವ ಉಪಯೋಗವೇನು ? (ಪೂರ್ಣ ಮಾಹಿತಿ ನೀಡುವುದು)

## ದೇವದುರ್ಗ ತಾಲ್ಲೂಕಿನ Appendix-E ಕಾಮಗಾರಿ ಸ್ಥಗಿತ ಬಗ್ಗೆ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೬೦ (೨೦೪೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ Appendix-E ನಲ್ಲಿ ಮಂಜೂರಾದ ಗೂಗಲ್–ದೇವದುರ್ಗ ರಸ್ತೆ ಮತ್ತು ಜಾಲಹಳ್ಳಿ–ಅರಕೇರಾ– ಸುಂಕೇಶರಾಳ ಗೂಗಲ್ ರಸ್ತೆ ಅರ್ಧಕ್ಕೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ರಸ್ತೆಗಳನ್ನು ಪೂರ್ಣಗೊಳಿಸಲು ತೆಗೆದುಕೊಂಡ ಕ್ರಮವೇನು ;

(ಇ) ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ ?

## ರೈತರಿಗೆ ಬೇಕಾಗಿರುವ ವಿವಿಧ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೬೧ (೨೦೬೬) ಮಾನ್ಯ ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭-೧೮ನೇ ಸಾಲಿನಲ್ಲಿ ರೈತರಿಗೆ ಬೇಕಾಗಿರುವ ವಿವಿಧ ಬೀಜ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ೨೦೧೭-೧೮ನೇ ಸಾಲಿನಲ್ಲಿ ರೈತರಿಗೆ ಸರಿಯಾದ ಸಮಯಕ್ಕೆ ರಸಗೊಬ್ಬರ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಇಲ್ಲಿವರೆಗೂ ಮಂಜೂರಾಗಿರುವ ಕೃಷಿ ಹೊಂಡಗಳು ಎಷ್ಟು ;

(ಈ) ೨೦೧೭-೧೮ನೇ ಸಾಲಿನಲ್ಲಿ ಇನ್ನು ಎಷ್ಟು ಕೃಷಿ ಹೊಂಡಗಳ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ ?

## ರಾಯಚೂರು ಜಿಲ್ಲೆಯಲ್ಲಿನ ಕೃಷಿ ಮಾರುಕಟ್ಟೆ ಅಭಿವೃದ್ಧಿ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೬೧(A) (೨೦೬೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೭-೧೮ ರಲ್ಲಿ ರಾಯಚೂರು ಜಿಲ್ಲೆಯ ವಿವಿಧ ಕೃಷಿ ಮಾರುಕಟ್ಟೆ ಅಭಿವೃದ್ಧಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿರುವ ರಾಷ್ಟ್ರೀಯ ಹೆದ್ದಾರಿಯ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೬೨ (೨೦೬೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ ಹಾದು ಹೋಗುವ ಎಸ್‌ಹೆಚ್–೨೦ (ರಾಯಚೂರು –ಬೆಳಗಾವಿ ರಸ್ತೆ) ರಾಷ್ಟ್ರೀಯ ಹೆದ್ದಾರಿಯಾಗಿ ಪರಿವರ್ತನೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ಎಸ್‌ಹೆಚ್–೨೩ ಕಲಾಲ ಕ್ರಾಸ್‌ದಿಂದ ಗಿಣಿಗೇರಿ ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿ (ಎನ್‌ಹೆಚ್)ಗೆ ಹಸ್ತಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ೨೦೧೭–೧೮ರ ಎಸ್‌ಹೆಚ್‌ಡಿಪಿ ಯೋಜನೆಯಲ್ಲಿ ರಾಯಚೂರು ಜಿಲ್ಲೆಯಲ್ಲಿ ತೆಗೆದುಕೊಂಡ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ;

(ಈ) ೨೦೧೭–೧೮ರಲ್ಲಿ ಅಪೆಂಡಿಕ್ಸ್–ಸಿ ಯೋಜನೆಯಲ್ಲಿ ರಾಯಚೂರು ಜಿಲ್ಲೆಗೆ ಮೀಸಲಿಟ್ಟಿರುವ ಅನುದಾನ ಎಷ್ಟು ?

(ಉ) ೨೦೧೭–೧೮ರಲ್ಲಿ ಸಿ.ಆರ್ ಎಷ್ಟು ಯೋಜನೆಯಲ್ಲಿ ರಾಯಚೂರು ಜಿಲ್ಲೆಗೆ ಒದಗಿಸಿರುವ ಅನುದಾನ ಎಷ್ಟು ?

## ಸರ್ಕಾರದ ಅಧೀನದಲ್ಲಿರುವ ವಿದ್ಯುತ್ ಕಂಪನಿ ಹಾಗೂ ಖಾಸಗಿ ಕಂಪನಿಗಳಿಂದ ಖರೀದಿಸಿರುವ ವಿದ್ಯುತ್ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೬೩ (೨೦೬೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸರ್ಕಾರದ ಅಧೀನದಲ್ಲಿರುವ ವಿವಿಧ ಯೋಜನೆಗಳ ಮುಖಾಂತರ ಉತ್ಪತ್ತಿಯಾಗುತ್ತಿರುವ ವಿದ್ಯುತ್ ಎಷ್ಟು ;

(ಆ) ೨೦೧೬–೧೭ನೇ ಸಾಲಿನಲ್ಲಿ ಖಾಸಗಿ ಕಂಪನಿಗಳಿಂದ ಖರೀದಿಸಿರುವ ವಿದ್ಯುತ್‌ನ ಮೆಗಾವ್ಯಾಟ್ ಎಷ್ಟು ; (ವಿವರ ಒದಗಿಸುವುದು)

(ಇ) ೨೦೧೩-೧೪ ಮತ್ತು ೨೦೧೬-೧೭ನೇ ಸಾಲಿನಲ್ಲಿ ರೈತರಿಗೆ ಉಚಿತವಾಗಿ ಸರಬರಾಜು ಮಾಡಿರುವ ವಿದ್ಯುತ್‌ನ ಪ್ರಮಾಣ ಎಷ್ಟು ; ಇದರ ಅಂದಾಜು ವೆಚ್ಚ ಎಷ್ಟು ;

(ಈ) ರಾಯಚೂರು ಜಿಲ್ಲೆಯಲ್ಲಿ ೧೧೦.ಕೆ.ವಿ. ಉಪ ಕೇಂದ್ರಗಳನ್ನು ನಿರ್ಮಾಣ ಮಾಡಲು ಬಂದಿರುವ ಪ್ರಸ್ತಾವನೆಯನ್ನು ಕಾರ್ಯರೂಪಕ್ಕೆ ತರಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

(ಉ) ರಾಯಚೂರು ಜಿಲ್ಲೆಯಲ್ಲಿ ಬರುವ ಮಲ್ಲಟ ಗ್ರಾಮದ ಹತ್ತಿರ ನಿರ್ಮಾಣ ಹಂತದಲ್ಲಿರುವ ೨೨೦.ಕೆ.ವಿ. ಉಪ ಕೇಂದ್ರ ಪೂರ್ತಿ ಪ್ರಮಾಣದಲ್ಲಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಲೋಕೋಪಯೋಗಿ ಇಲಾಖೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೧೬೪ (೨೦೬೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಗೆ ಬಿಡುಗಡೆಯಾದ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನವೆಷ್ಟು ; (ವರ್ಷವಾರು ಯೋಜನಾವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ಖರ್ಚು ಮಾಡಿದ ಅನುದಾನವೆಷ್ಟು ; (ವರ್ಷವಾರು ಹಾಗೂ ಯೋಜನಾವಾರು ವಿವರ ನೀಡುವುದು)

(ಇ) ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಬಳಸಿಕೊಳ್ಳಲಾಗಿದೆ ? (ವರ್ಷವಾರು ಹಾಗೂ ಯೋಜನಾವಾರು ವಿವರ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಕರಗಳ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೬೫ (೨೦೭೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಯಾವ ಯಾವ ಕರಗಳನ್ನು ವಸೂಲಿ ಮಾಡಲಾಗುತ್ತಿದೆ ; ಅವುಗಳ ದರವೇನು ; (ವಿವರ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ವಸೂಲಿ ಮಾಡಿರುವ ಕರವೆಷ್ಟು ; (ವಿವರ ಒದಗಿಸುವುದು)

(ಇ) ವಸೂಲಿ ಮಾಡಿದ ಕರಗಳನ್ನು ಸಂಬಂಧಿಸಿದ ಇಲಾಖೆಗಳಿಗೆ ಪಾವತಿಸಲಾಗಿದೆಯೇ ; ಪಾವತಿಸಿದಲ್ಲಿ ಅವುಗಳ ವಿವರ ಹಾಗೂ ಬಾಕಿ ಮೊತ್ತದ ವರ್ಷವಾರು ವಿವರ ಒದಗಿಸುವುದು ?

## ನಗರ ಸ್ಥಳೀಯ ಸಂಸ್ಥೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೬೬ (೨೦೭೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು ಹಾಗೂ ಯೋಜನಾವಾರು ವಿವರ ಒದಗಿಸುವುದು)

(ಆ) ಬಿಡುಗಡೆಯಾದ ಅನುದಾನದಲ್ಲಿ ವೆಚ್ಚ ಮಾಡಿದ ಅನುದಾನವೆಷ್ಟು; (ವರ್ಷವಾರು ಹಾಗೂ ಯೋಜನಾವಾರು ವಿವರ ಒದಗಿಸುವುದು)

(ಇ) ಬಿಡುಗಡೆಯಾದ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ಬಳಸಿಕೊಳ್ಳಲಾಗಿದೆ? (ವರ್ಷವಾರು ಮತ್ತು ಯೋಜನಾವಾರು ವಿವರ ಒದಗಿಸುವುದು)

## ಕೋಲ್ಡ್ ಸ್ಟೋರೇಜ್‌ಗಳ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೬೭ (೨೦೩೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಕೋಲ್ಡ್ ಸ್ಟೋರೇಜ್‌ಗಳ ಸಂಖ್ಯೆ ಎಷ್ಟು; ಇವುಗಳಿಗೆ ಸರ್ಕಾರವು ನಿಗಧಿಪಡಿಸಿದ ಅನುದಾನವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿಜಯಪುರ ಜಿಲ್ಲೆಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ೨೦೧೧–೧೨ ನೇ ಸಾಲಿನಲ್ಲಿ ಹಾಪ್‌ಕಾಮ್ಸ್ ಮೂಲಕ ಒಣದ್ರಾಕ್ಷಿ ಶೇಖರಣೆ ಕೋಲ್ಡ್ ಸ್ಟೋರೇಜ್‌ಗೆ ಮಂಜೂರಾದ ಮೊತ್ತವೆಷ್ಟು ; ಮಂಜೂರಾಗಿದ್ದರೆ, ಈ ಕಾಮಗಾರಿಯ ವಿಳಂಬಕ್ಕೆ ಕಾರಣವೇನು ; ಈ ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)

## ವಿಜಯಪುರದಿಂದ ಸೋಲಾಪುರ ರಸ್ತೆ ನಾಲ್ಕು ಪಥವನ್ನಾಗಿ ಪರಿವರ್ತಿಸುವ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೬೮ (೨೦೩೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಷ್ಟ್ರೀಯ ಹೆದ್ದಾರಿ ೫೦ ವಿಜಯಪುರದಿಂದ ಸೋಲಾಪುರ ರಸ್ತೆ ನಾಲ್ಕು ಪಥವನ್ನಾಗಿ ಪರಿವರ್ತಿಸುವ ಕಾಮಗಾರಿಗೆ ಮಂಜೂರಾತಿ ದೊರಕಿದ್ದು ಯಾವಾಗ, ಮಂಜೂರಾತಿ ದೊರಕಿದ್ದಲ್ಲಿ, ವಿಳಂಬವಾಗುವುದಕ್ಕೆ ಕಾರಣಗಳೇನು ; ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಆ) ಈ ರಸ್ತೆ ನಿರ್ಮಾಣ ಕಾಮಗಾರಿಗೆ ನಿಗಧಿಪಡಿಸಿದ ಅನುದಾನವೆಷ್ಟು; ಈ ಅನುದಾನದಲ್ಲಿ ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಅನುದಾನ ಎಷ್ಟು ; ಈ ಅನುದಾನವನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಬಿಡುಗಡೆಗೊಳಿಸಿವೆಯೇ ; (ವಿವರವಾದ ಮಾಹಿತಿ ನೀಡುವುದು)

(ಇ) ಹೊಸಪೇಟೆಯಿಂದ ಚಿತ್ರದುರ್ಗ ನಾಲ್ಕು ಪಥ ರಸ್ತೆ ಕಾಮಗಾರಿಯು ಯಾವ ಹಂತದಲ್ಲಿದೆ ; ಈ ಕಾಮಗಾರಿಯು ನಿಧಾನಗತಿಯಲ್ಲಿ ಸಾಗುತ್ತಿದೆ ಎಂಬ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗಾಗಿ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ; ಈ ಕಾಮಗಾರಿಗೆ ಮೀಸಲಿರಿಸಿದ ಅನುದಾನವೆಷ್ಟು ? (ವಿವರವಾದ ಮಾಹಿತಿ ನೀಡುವುದು)

## ಕೈಗಾ ವಿದ್ಯುತ್ ಸ್ಥಾವರದಿಂದ ವಿದ್ಯುತ್ ಉತ್ಪಾದನೆ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೬೯ (೨೦೩೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೈಗಾ ವಿದ್ಯುತ್ ಸ್ಥಾವರದಿಂದ ವರ್ಷಕ್ಕೆ ಎಷ್ಟು ವಿದ್ಯುತ್ ಉತ್ಪಾದನೆಯಾಗುತ್ತಿದೆ ; ಇದರಿಂದ ಉತ್ತರ ಕನ್ನಡ ಜಿಲ್ಲೆ ರೈತರಿಗೆ ದಿನದ ೨೪ ಗಂಟೆ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆಯೇ ; (ಈ ಬಗ್ಗೆ ವಿವರವಾದ ಮಾಹಿತಿ ನೀಡುವುದು)

(ಆ) ವಿಜಯಪುರ ಜಿಲ್ಲೆ, ಕೂಡಗಿ ವಿದ್ಯುತ್ ಸ್ಥಾವರದಿಂದ ಎಷ್ಟು ವಿದ್ಯುತ್ ಘಟಕಗಳು ಕಾರ್ಯಾರಂಭವಾಗಿವೆ ; ಸದ್ಯ ಈ ಘಟಕಗಳಿಂದ ಉತ್ಪಾದನೆಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ; ಸದರಿ ಉತ್ಪಾದನೆಯಾದ ವಿದ್ಯುತ್‌ನಲ್ಲಿ ವಿಜಯಪುರ ಜಿಲ್ಲೆ ಎಷ್ಟು ಪ್ರಮಾಣದ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ; ಉಳಿದ ವಿದ್ಯುತ್ ಪ್ರಮಾಣವನ್ನು ಬೇರೆ ಯಾವ ಘಟಕಗಳಿಗೆ ಪೂರೈಕೆ ಮಾಡಲಾಗುತ್ತಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ವಿಜಯಪುರ ಜಿಲ್ಲೆಯಲ್ಲಿ ಈ ವಿದ್ಯುತ್ ಸ್ಥಾವರ ಸ್ಥಾಪನೆ ಮಾಡುವ ಸಲುವಾಗಿ ಈ ಭಾಗದ ಬಡ ರೈತರು ಸಾಕಷ್ಟು ಫಲವತ್ತಾದ ಜಮೀನನ್ನು ಕಳೆದುಕೊಂಡಿರುವುದರಿಂದ, ಈ ರೈತರ ಅನುಕೂಲಕ್ಕಾಗಿ ದಿನದ ೨೪ ಗಂಟೆ ವಿದ್ಯುತ್ ಪೂರೈಕೆ ಮಾಡುವ ಯಾವುದಾದರೂ ಯೋಜನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಈ ಪ್ರಕ್ರಿಯೆಯು ಯಾವಾಗಿನಿಂದ ಜಾರಿಗೆ ಬರುವುದು? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದ ರೈತ ಸಂಪರ್ಕ ಕೇಂದ್ರಗಳ ಕುರಿತು

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೭೦ (೨೦೨೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಎಷ್ಟು ರೈತ ಸಂಪರ್ಕ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಈಗಾಗಲೇ ಕಾರ್ಯನಿರ್ವಹಿಸುತ್ತಿದ್ದಲ್ಲಿ, ಅಂತಹ ರೈತ ಸಂಪರ್ಕ ಕೇಂದ್ರಗಳನ್ನು ಇನ್ನಷ್ಟು ರೈತ ಸ್ನೇಹಿಯಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ;

(ಇ) ರೈತ ಸಂಪರ್ಕ ಕೇಂದ್ರಗಳಲ್ಲಿ ಕೃಷಿ ಇಲಾಖೆ ಅಧಿಕಾರಿಗಳು, ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಹಾಗೂ ರೇಷ್ಮೆ ಇಲಾಖೆಯ ಅಧಿಕಾರಿಗಳನ್ನು ಒಂದೇ ಸೂರಿನಡಿ ಕಾರ್ಯನಿರ್ವಹಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಈ) ಕೈಗೊಳ್ಳದೇ ಇದ್ದಲ್ಲಿ, ಇನ್ನು ಮುಂದೆ ಯಾವ ರೀತಿಯ ಸಮರ್ಪಕ ಕ್ರಮ ಕೈಗೊಳ್ಳಲು ಚಿಂತನೆ ನಡೆಸಿದೆ ;

(ಉ) ಇಂತಹ ಯಾವುದೇ ಕ್ರಮ ಕೈಗೊಳ್ಳದೇ ಇದ್ದಲ್ಲಿ, ಅದಕ್ಕೆ ಕಾರಣವೇನು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಊ) ರಾಜ್ಯದಲ್ಲಿರುವ ರೈತ ಸಂಪರ್ಕ ಕೇಂದ್ರಗಳು ಕೇವಲ ವ್ಯಾಪಾರಿ ಕೇಂದ್ರಗಳಾಗಿ ಪರಿವರ್ತನೆಗಳಾಗುತ್ತಿವೆ ಎಂಬ ಆರೋಪಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಆರೋಪಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಮಾಹಿತಿ ನೀಡುವುದು)

(ಋ) ರಾಜ್ಯದಲ್ಲಿರುವ ರೈತ ಸಂಪರ್ಕ ಕೇಂದ್ರಗಳು ರೈತರಿಗೆ ತಾಂತ್ರಿಕತೆ ಉಪಯೋಗಿಸಿ ಮಾಹಿತಿ ವರ್ಗಾವಣೆ ಮಾಡುತ್ತಿವೆಯೇ ; ಹಾಗಿದ್ದಲ್ಲಿ, ಅದಕ್ಕಾಗಿ ಸರಕಾರ / ಇಲಾಖೆ ಯಾವ ರೀತಿಯಾದ ಕೃಷಿ ಪರಿಣಿತರನ್ನು ಉಪಯೋಗಿಸಿಕೊಳ್ಳುತ್ತಿದೆ ; ಅಥವಾ ಬೇರೆ ಇನ್ಯಾವುದೇ ರೀತಿಯ ಮಾರ್ಗಗಳಲ್ಲಿ ಮಾಹಿತಿ ರವಾನೆ ಮಾಡುತ್ತಿದೆಯೇ ? (ಮಾಹಿತಿ ನೀಡುವುದು)

## ರಾಜ್ಯದ ರೈತರಿಗೆ ಸುಧಾರಿತ ತಂತ್ರಜ್ಞಾನ ಅಳವಡಿಸಿಕೊಳ್ಳಲು ಪ್ರೋತ್ಸಾಹಧನ ನೀಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೧೭೧ (೨೮೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರಿಗೆ ಸುಧಾರಿತ ತಂತ್ರಜ್ಞಾನ ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪ್ರೋತ್ಸಾಹಧನ ಕೊಡುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಸುಧಾರಿತ ತಂತ್ರಜ್ಞಾನ ಯೋಜನೆಯ ರೂಪುರೇಷೆಗಳೇನು; (ವಿವರವಾದ ಮಾಹಿತಿಯನ್ನು ಒದಗಿಸುವುದು)

(ಇ) ಈ ತಂತ್ರಜ್ಞಾನ ಉತ್ತೇಜನ ಯೋಜನೆಗೆ ಮೀಸಲಿಟ್ಟಿರುವ ಹಣವೆಷ್ಟು?

## ರಾಜ್ಯದ ತೊಗರಿ ಬೆಳೆಯುವ ರೈತರಿಗೆ ಬೆಂಬಲ ಬೆಲೆ ನೀಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೧೭೨ (೨೮೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ತೊಗರಿ ಬೆಳೆಯುವ ರೈತರಿಗೆ ಬೆಂಬಲ ಬೆಲೆ ನೀಡುವ ಉದ್ದೇಶದಿಂದ ಸರ್ಕಾರ ಮುಂದಾಗಿದ್ದರೂ, ರೈತರಿಗೆ ಯಾವುದೇ ಪರಿಹಾರ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದಲ್ಲಿ ಎಷ್ಟು ತೊಗರಿ ಖರೀದಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ ;

(ಇ) ಈ ಕೇಂದ್ರಗಳಿಂದ ಒಟ್ಟು ಖರೀದಿ ಮಾಡಲಾದ ತೊಗರಿಯ ಪ್ರಮಾಣವೆಷ್ಟು ;

(ಈ) ತೊಗರಿ ಖರೀದಿ ಕೇಂದ್ರದಲ್ಲಿ ಖರೀದಿ ಪ್ರಕ್ರಿಯೆ ವಿಳಂಭವಾಗುತ್ತಿದ್ದು, ರೈತರು ತಮ್ಮ ಕೃಷಿ ಚಟುವಟಿಕೆಯನ್ನು ಬಿಟ್ಟು ಹಗಲಿರುಳು ಈ ಕೇಂದ್ರಗಳಲ್ಲಿ ಕ್ಯೂನಲ್ಲಿ ನಿಂತು ವಾರಗಟ್ಟಲೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಇದರ ಪರಿಹಾರವಾಗಿ ಸರ್ಕಾರ ತೆಗೆದುಕೊಂಡ ಕ್ರಮ ಏನು ?

## ರಾಜ್ಯದಲ್ಲಿ ಮಾವಿನ ಹಣ್ಣಿನ ಉತ್ಪಾದನೆ, ಸಂರಕ್ಷಣೆ, ರಫ್ತು ಮಾಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೧೭೩ (೭೯೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೆಳೆಯುವ ಮಾವಿನ ಹಣ್ಣನ್ನು ಯಾವ ಯಾವ ದೇಶಗಳಿಗೆ ರಫ್ತು ಮಾಡಲಾಗುತ್ತಿದೆ ;

(ಆ) ರಾಜ್ಯದಲ್ಲಿ ಬೆಳೆಯುವ ಮಾವಿಗೆ ವಿವಿಧ ದೇಶಗಳಲ್ಲಿ ಬೇಡಿಕೆ ಇರುವುದರ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ರಾಜ್ಯದಲ್ಲಿ ಬೆಳೆಯುವ ಮಾವಿನ ಹಣ್ಣಿನಲ್ಲಿ ವ್ಯವಸ್ಥಿತವಾದ ಉಗ್ರಾಣದ ಸೌಲಭ್ಯದ ಕೊರತೆಯಿಂದ ಪ್ರತಿಶತ ಎಷ್ಟು ಹಣ್ಣು ಹಾಳಾಗುತ್ತಿದೆ ;

(ಈ) ರಾಜ್ಯದಲ್ಲಿ ಯಾವ ಯಾವ ತಳಿಯ ಮಾವಿನ ಹಣ್ಣುಗಳನ್ನು ಬೆಳೆಯಲಾಗುತ್ತದೆ; ಮತ್ತು ಅತೀ ಹೆಚ್ಚು ಬೇಡಿಕೆ ಇರುವ ಹಣ್ಣು ಯಾವುವು ;

(ಉ) ರಾಜ್ಯದಿಂದ ವಿವಿಧ ದೇಶಗಳಿಗೆ ಕಳೆದ ೩ ವರ್ಷಗಳಲ್ಲಿ ರಫ್ತು ಮಾಡಿದ ಮಾವಿನ ತಳಿ ಮತ್ತು ಪ್ರಮಾಣ ಹಾಗೂ ಅದರಿಂದ ಬಂದ ವಿದೇಶಿ ವಿನಿಮಯ ಎಷ್ಟು ? (ಮಾಹಿತಿಯನ್ನು ಒದಗಿಸುವುದು)

## ರೇಷ್ಮೆ ಇಲಾಖೆಯಡಿ ಬರುವ ಪ್ರಾಧಿಕಾರಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೨೧೭೪ (೨೧೧೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೇಷ್ಮೆ ಇಲಾಖೆಯಡಿ ಬರುವ ನಿಗಮ, ಮಂಡಳಿ, ಪ್ರಾಧಿಕಾರಗಳು ಯಾವುವು ; (ವಿವರವಾದ ಮಾಹಿತಿ ಕೊಡುವುದು)

(ಆ) ಇಲಾಖೆ ಹಾಗೂ ಅಂಗ ಸಂಸ್ಥೆಗಳಲ್ಲಿ ಇಲ್ಲಿಯವರೆಗೂ ಬಾಕಿ ಇರುವ ಅನುಕಂಪ ಆಧಾರಿತ ಕೆಲಸ ಕೋರಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಮೃತ ನೌಕರನ ಹೆಸರು, ಅರ್ಜಿ ಸಲ್ಲಿಸಿರುವ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಇಲಾಖೆಯಡಿ ಬರುವ ಅಂಗ ಸಂಸ್ಥೆಗಳ ಸೇವಾ (Work Man) ನಿಯಮ ಏನು ; ಇದರ ಸಂಬಂಧ ಅನುಕಂಪ ಆಧಾರಿತ ಹುದ್ದೆಗಳನ್ನು ನೀಡಲು ಇರುವ ನಿಯಮಗಳೇನು ;

(ಈ) ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಸರ್ಕಾರ ತುಂಬಲಾಗುವುದು ?

## ತೋಟಗಾರಿಕೆ ಇಲಾಖೆಯ ಯೋಜನೆಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೧೭೫ (೨೦೮೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಬೆಳೆಗಳಿಗೆ ಸಂಬಂಧಿಸಿದಂತೆ ಇರುವ ಯೋಜನೆಗಳು ಮತ್ತು ಸಹಾಯ ಸವಲತ್ತುಗಳು ಯಾವುವು ;

(ಆ) ಇವುಗಳ ವಿವರಗಳನ್ನು ರೈತರಿಗೆ ತಿಳಿಸಲು ಯಾವ ರೀತಿಯ ಪ್ರಚಾರ ನೀಡಲಾಗಿದೆ ; ಪ್ರಚಾರದ ಕೊರತೆಯಿಂದ ಯೋಜನೆಗಳ ವಿವರ, ಸವಲತ್ತುಗಳು ತಿಳಿಯದೆ ರೈತರು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಿಗೆ ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಡಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ? (ಕಳೆದ ೩ ವರ್ಷಗಳ ವಿವರ ನೀಡುವುದು)

## ಕೃಷಿ ಭಾಗ್ಯ ಯೋಜನೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭೬ (೨೦೮೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಭಾಗ್ಯ ಯೋಜನೆಯನ್ನು ಪ್ರಾರಂಭಿಸಿದ್ದು ಯಾವಾಗ ;

(ಆ) ಈ ಯೋಜನೆಯಡಿ ಯಾವ ಯಾವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ;

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ರೈತರನ್ನು ಫಲಾನುಭವಿಗಳಾಗಿ ಆಯ್ಕೆ ಮಾಡಲಾಗಿದೆ ; ಆಯ್ಕೆ ಮಾಡುವಾಗ ಅನುಸರಿಸುವ ಮಾನದಂಡಗಳೇನು ?

## ಬೆಂಗಳೂರಿನಲ್ಲಿರುವ ಆಸ್ತಿಯಲ್ಲಿ ಬೆಳೆದಿರುವ ಬೆಳೆಗಳ ಬಗ್ಗೆ

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೧೭೭ (೨೦೭೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ವ್ಯಾಪ್ತಿಯಲ್ಲಿರುವ ತೋಟಗಾರಿಕೆ ಇಲಾಖೆಗೆ ಸೇರಿದ ಆಸ್ತಿಯ ಪ್ರಮಾಣವೆಷ್ಟು ; ಯಾವ ಯಾವ ವಿಧಾನಸಭಾ ಕ್ಷೇತ್ರಗಳಲ್ಲಿ ಎಷ್ಟೆಷ್ಟು ಆಸ್ತಿ ಇದೆ ; ಈ ಆಸ್ತಿಯಲ್ಲಿ ಬೆಳೆದಿರುವ ಬೆಳೆಗಳು ಯಾವುವು ;

(ಆ) ತೋಟಗಾರಿಕೆ ಇಲಾಖೆಯಿಂದ ಯಾವ ಯಾವ ಸೌಲಭ್ಯಗಳನ್ನು ರೈತರಿಗೆ ಅನುಕೂಲವಾಗುವಂತೆ ಒದಗಿಸಲಾಗುತ್ತಿದೆ ಹಾಗೂ ರಿಯಾಯಿತಿ ದರದಲ್ಲಿ ರೈತರಿಗೆ ಕೊಡುತ್ತಿರುವ ಸಸಿಗಳು ಯಾವುವು;

(ಇ) ಕಳೆದ ೦೩ ವರ್ಷಗಳಿಂದ ತೋಟಗಾರಿಕೆ ಇಲಾಖೆಗೆ ಸಹಾಯಧನ ಹಾಗೂ ವಿವಿಧ ಸವಲತ್ತುಗಳನ್ನು ಕೋರಿ ರೈತರುಗಳು ಸಲ್ಲಿಸಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇಲ್ಲಿಯವರೆಗೆ ಪರಿಗಣಿಸಲಾಗಿರುವ ಅರ್ಜಿಗಳ ಸಂಖ್ಯೆ ಹಾಗೂ ಬಾಕಿಯಿರುವ ಅರ್ಜಿಗಳನ್ನು ವಿಲೇವಾರಿ ಮಾಡಲು ಸರ್ಕಾರದ ಕ್ರಮವೇನು ?

## ದ್ವಿದಳ ಧಾನ್ಯಗಳ ವಿವರ

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೧೭೮ (೨೦೭೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೨–೧೩ನೇ ಸಾಲಿನಿಂದ ಇದುವರೆವಿಗೂ ಸಂಗ್ರಹವಾಗಿರುವ ದ್ವಿದಳ ಧಾನ್ಯ ಬೆಳೆಗಳಾದ ರಾಗಿ, ಜೋಳ ಹುರಳಿ, ಹಾಗೂ ತೊಗರಿ ಬೇಳೆಗಳ ಪ್ರಮಾಣ ಎಷ್ಟು ; (ಮೆಟ್ರಿಕ್ ಟನ್ ಆಧಾರದ ಮೇಲೆ ವಿವರ ಒದಗಿಸುವುದು)

(ಆ) ೨೦೧೨–೧೩ನೇ ಸಾಲಿನಿಂದ ಇದುವರೆವಿಗೂ ಮಾರಾಟವಾದ ರಸ ಗೊಬ್ಬರದ ಪ್ರಮಾಣ ಎಷ್ಟು ? (ಜಿಲ್ಲಾವಾರು ವಿವರ ಒದಗಿಸುವುದು)

## ಬೆಂಗಳೂರಿನ ಸುತ್ತಮುತ್ತಲಿನಲ್ಲಿ ಬೆಳೆದಿರುವ ಔಷಧಿ ಗುಣಗಳುಳ್ಳ ಸಸ್ಯಗಳ ಬಗ್ಗೆ

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೧೭೯ (೨೦೭೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಹಾಗೂ ಸುತ್ತಮುತ್ತಲಿನ ಯಾವ ಯಾವ ಪ್ರದೇಶಗಳಲ್ಲಿ ಔಷಧ ಗುಣಗಳ್ಳುಳ್ಳ ಸಸ್ಯಗಳನ್ನು ಬೆಳೆಸಲಾಗುತ್ತಿದೆ ;

(ಆ) ಕಳೆದ ೩ ವರ್ಷಗಳಿಂದ ಔಷಧಿ ಗುಣಗಳನ್ನು ಹೊಂದಿರುವ ಸಸ್ಯಗಳ ಸಂರಕ್ಷಣೆಗೆ ಸರ್ಕಾರವು ಕೈಗೊಂಡಿರುವ ಯೋಜನೆಗಳಾವುವು ; ಇನ್ನು ಹೆಚ್ಚು ಹೆಚ್ಚಿನ ಔಷಧ ಗುಣಗಳ್ಳುಳ್ಳ ಸಸ್ಯಗಳನ್ನು ಬೆಳೆಸಲು ಸರ್ಕಾರದ ಕ್ರಮಗಳೇನು ;

(ಇ) ಔಷಧಿ ಗುಣಗಳ್ಳುಳ್ಳ ಸಸ್ಯಗಳನ್ನು ಬೆಳೆಯಲು ಕಳೆದ ೩ ವರ್ಷಗಳಿಂದ ಸರ್ಕಾರವು ಬಿಡುಗಡೆಗೊಳಿಸಲಾಗಿರುವ ಅನುದಾನವೆಷ್ಟು ; ಪ್ರಸ್ತುತ ಸಾಲಿನಲ್ಲಿ ನಿಗಧಿ ಮಾಡಿದ ಅನುದಾನವೆಷ್ಟು ?

## ಬಿತ್ತನೆ ಬೀಜ ವಿತರಣೆ ಕುರಿತು

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೧೮೦ (೨೦೭೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಶೇ.೫೦ರಷ್ಟು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜವನ್ನು ವಿತರಿಸಿದ ಕಾರ್ಯಕ್ರಮವನ್ನು ಸರ್ಕಾರವು ಹಮ್ಮಿಕೊಂಡಿದೆಯೇ ;

(ಆ) ಕಳೆದ ೩ ವರ್ಷಗಳಿಂದ ಈ ಯೋಜನೆಗೆ ಮೀಸಲಿಟ್ಟ ಹಣದ ಮೊತ್ತವೆಷ್ಟು ; ಮತ್ತು ರಾಜ್ಯದಲ್ಲಿ ಎಷ್ಟು ಜನ ರೈತ ಬಾಂಧವರು ಈ ಯೋಜನೆಯ ಲಾಭವನ್ನು ಪಡೆದುಕೊಂಡಿರುತ್ತಾರೆ ;

(ಇ) ಈ ಸಾಲಿನಲ್ಲಿ ಎಷ್ಟು ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು ಇದೆ ; ಈ ದಾಸ್ತಾನು ರೈತರ ಬೇಡಿಕೆಯುನ್ನು ಪೂರೈಸಲು ಸಾಕಾಗುತ್ತಿದೆಯೇ?

## ಕೃಷಿ ಭಾಗ್ಯ ಯೋಜನೆಯಡಿ ತೆರೆದ ಕೃಷಿ ಹೊಂಡಗಳ ಕುರಿತು

**ಡಾ : ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೨೧೮೧ (೨೦೭೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆಯಡಿ ತೆರೆದಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; ಕೃಷಿ ಹೊಂಡಗಳಲ್ಲಿ ಬಿದ್ದು ಮರಣ ಹೊಂದಿರುವ ರೈತರುಗಳ ಸಂಖ್ಯೆ ಎಷ್ಟು ; ಮೃತಪಟ್ಟ ರೈತರ ಕುಟುಂಬಗಳಿಗೆ ವಿತರಿಸಲಾದ ಪರಿಹಾರ ಧನ ಎಷ್ಟು ;

(ಆ) ಸುರಕ್ಷತೆಯ ದೃಷ್ಟಿಯಿಂದ ಕೃಷಿ ಹೊಂಡಗಳಿಗೆ ತಡೆಗೋಡೆಗಳನ್ನು ನಿರ್ಮಿಸಲಾಗಿದೆಯೇ ; ಇನ್ನು ಎಷ್ಟು ಹೊಂಡಗಳಿಗೆ ತಡೆಗೋಡೆಗಳನ್ನು ನಿರ್ಮಿಸಬೇಕಾಗಿದೆ ; ತ್ವರಿತಗತಿಯಲ್ಲಿ ಇನ್ನು ಹೆಚ್ಚಿನ ರೀತಿಯಲ್ಲಿ ರೈತರಿಗೆ ಸುರಕ್ಷತೆಯನ್ನು ನೀಡಲು ಸರ್ಕಾರದ ಕ್ರಮಗಳೇನು ?

## ಅಮೃತ್ ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೮೨ (೨೦೨೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ನಗರ ಸಭೆಗಳಿಗೆ/ ತುಮಕೂರು ಮಹಾನಗರ ಪಾಲಿಕೆಗೆ/ಪಟ್ಟಣ ಪಂಚಾಯತಿಗಳಿಗೆ/ ಪುರಸಭೆಗಳಿಗೆ ಅಮೃತ್ ಯೋಜನೆಯನ್ನು ಮಂಜೂರು ಮಾಡಲಾಗಿದೆ ;

(ಆ) ಈ ಅಮೃತ್ ಯೋಜನೆ ಮಂಜೂರಾಗಿದ್ದಲ್ಲಿ, ಈ ಯೋಜನೆಯ ಉದ್ದೇಶ ಹಾಗೂ ಈ ಯೋಜನೆಯಡಿ ತುಮಕೂರು ಜಿಲ್ಲೆಯಲ್ಲಿ ಇಲ್ಲಿಯ ತನಕ ಖರ್ಚು ಮಾಡಿರುವ ಹಣವೆಷ್ಟು ; (ವಿವರ ನೀಡುವುದು)

(ಇ) ಈ ಯೋಜನೆಗೆ ಕೇಂದ್ರ ಸರ್ಕಾರದಿಂದ ಬರುವ ಅನುದಾನವೆಷ್ಟು ಮತ್ತು ರಾಜ್ಯ ಸರ್ಕಾರದ ಪಾಲಿನ ಹಣವೆಷ್ಟು ; (ವಿವರ ನೀಡುವುದು)

(ಈ) ಈ ಯೋಜನೆಯನ್ನು ಯಾವ ವರ್ಷದಿಂದ ಪ್ರಾರಂಭಿಸಿ, ಯಾವ ವರ್ಷದಲ್ಲಿ ಮುಕ್ತಾಯಗೊಳಿಸಲಾಗುವುದು ? (ವಿವರ ನೀಡುವುದು)

## ಹಳ್ಳಿ ಸಂತೆ ಯೋಜನೆಯಡಿ ಮಾರುಕಟ್ಟೆ ಮತ್ತು ಪ್ರಾಂಗಣ ನಿರ್ಮಿಸುವ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೮೩ (೨೦೨೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಆಯ್ಕೆ ಮಾಡಿದ ಎಷ್ಟು ಗ್ರಾಮಗಳಲ್ಲಿ "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ಹಾಗೂ ಪ್ರಾಂಗಣವನ್ನು ನಿರ್ಮಿಸಲಾಗಿದೆ ;

(ಆ) ಆಯ್ಕೆ ಮಾಡಿರುವ ಜಿಲ್ಲೆಗಳು ಮತ್ತು ಗ್ರಾಮಗಳು ಯಾವುವು ; (ಹೆಸರುಗಳನ್ನು ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗ್ರಾಮದ "ಹಳ್ಳಿ ಸಂತೆ" ಯೋಜನೆಯಡಿ ಈ ಸೌಲಭ್ಯಕ್ಕಾಗಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಈ) ಬಿಡುಗಡೆ ಮಾಡಿದ ಅನುದಾನದಲ್ಲಿ ಈಗಾಗಲೇ ಕಾಮಗಾರಿ ಪ್ರಾರಂಭ ಮಾಡಲಾಗಿದೆಯೇ ಮಾಡಿದಲ್ಲಿ, ಈ ಕಾಮಗಾರಿಗಳನ್ನು ಯಾವ ರೀತಿ ಅನುಷ್ಠಾನಗೊಳಿಸಲಾಗುತ್ತಿದೆ ; (ವಿವರ ನೀಡುವುದು)

(ಉ) ಮಾರುಕಟ್ಟೆ ಮತ್ತು ಪ್ರಾಂಗಣದ ಬಳಿ ಒದಗಿಸಿರುವ ಮೂಲಭೂತ ಸೌಕರ್ಯಗಳೇನು ; (ವಿವರ ನೀಡುವುದು)

(ಊ) ಈ ಗ್ರಾಮದ "ಹಳ್ಳಿ ಸಂತೆ" ಯೋಜನೆಯಡಿ ಮಾರುಕಟ್ಟೆ ಪ್ರಾಂಗಣವನ್ನು ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರಗಳಿಗೂ ವಿಸ್ತರಿಸುವ ಯೋಚನೆ ಸರ್ಕಾರಕ್ಕಿದೆಯೇ ; (ವಿವರ ನೀಡುವುದು)

(ಋ) ಇದ್ದಲ್ಲಿ, ಇದನ್ನು ಯಾವಾಗ ಜಾರಿಗೆ ತರಲಾಗುವುದು ? (ವಿವರ ನೀಡುವುದು)

## ಹನಿ ನೀರಾವರಿ ಯೋಜನೆಯ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೮೪ (೨೦೨೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯಲ್ಲಿ ಹನಿ ನೀರಾವರಿ ಯೋಜನೆಯನ್ನು ಜಾರಿಗೆ ತರಲಾಗಿದೆಯೇ ;

(ಆ) ಹಾಗಿದ್ದಲ್ಲಿ, ತೋಟಗಾರಿಕೆ ಬೆಳೆಗಳಾದ ಯಾವ ಯಾವ ಬೆಳೆಗೆ ಈ ಯೋಜನೆಯಡಿ ಸಹಾಯಧನವನ್ನು ನೀಡಲಾಗುತ್ತಿದೆ ; ಎಷ್ಟು ಹೆಕ್ಟೇರ್ ತನಕ ನೀಡಲಾಗುತ್ತಿದೆ ;

(ಇ) ಈ ಸಹಾಯಧನ ನೀಡಲು ಕೇಂದ್ರ ಸರ್ಕಾರದಿಂದ ಮತ್ತು ರಾಜ್ಯ ಸರ್ಕಾರದಿಂದ ಒಂದು ಎಕರೆಗೆ ಕೊಡುತ್ತಿರುವ ಹಣವೆಷ್ಟು;

(ಈ) ಎಲ್ಲಾ ರೈತ ವರ್ಗಕ್ಕೂ ಈ ಸಹಾಯಧನ ಯೋಜನೆಯನ್ನು ಅಳವಡಿಸಿಕೊಳ್ಳಲು ಅವಕಾಶವಿದೆಯೇ ; (ವಿವರ ನೀಡುವುದು)

(ಉ) ಸಹಾಯಧನ ನೀಡಲು ಅನುಸರಿಸುತ್ತಿರುವ ಮಾನದಂಡಗಳೇನು; (ವಿವರ ನೀಡುವುದು)

(ಊ) ತುಮಕೂರು ಜಿಲ್ಲೆಯಲ್ಲಿ ಹನಿ ನೀರಾವರಿ ಅಳವಡಿಸಿಕೊಂಡಿರುವ ಮತ್ತು ತೋಟಗಾರಿಕೆ ಬೆಳೆಯನ್ನು ಬೆಳೆಯುತ್ತಿರುವ ರೈತರ ಸಂಖ್ಯೆ ಎಷ್ಟು ; ೨೦೧೬-೧೭ನೇ ಸಾಲಿನಲ್ಲಿ ಸಹಾಯಧನ ಕೋರಿ ಬಂದ ಫಲಾನುಭವಿಗಳಿಗೆಲ್ಲಾ ಧನ ಸಹಾಯವನ್ನು ನೀಡಲಾಗಿದೆಯೇ ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು)

(ಋ) ಈ ಜಿಲ್ಲೆಯಲ್ಲಿ, ಈ ಯೋಜನೆಯಡಿ ಸಹಾಯಧನ ಕೋರಿ ೨೦೧೭-೧೮ನೇ ಸಾಲಿನಲ್ಲಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯ ಅಷ್ಟಪಥ ಕಾಮಗಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-**

೨೧೮೫ (೨೦೪೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರಿ ದಟ್ಟಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದ ಪ್ರಯಾಣಿಕರಿಗೆ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರಸ್ತೆಯನ್ನು ಅಷ್ಟಪಥ ರಸ್ತೆಯನ್ನಾಗಿ ಅಗಲೀಕರಣ ಮಾಡುವ ಬಗ್ಗೆ ಸರ್ಕಾರ ನಿರ್ಧಾರ ಮಾಡಿದೆಯೇ ;

(ಈ) ಮಾಡಿದ್ದಲ್ಲಿ, ಯಾವಾಗ ಕಾಮಗಾರಿ ಆರಂಭವಾಗುವುದು ;

(ಉ) ಯಾವಾಗ ಈ ಕಾಮಗಾರಿ ಮುಗಿಯಲಿದೆ ; ತಗಲುವ ವೆಚ್ಚ ಎಷ್ಟು ;

(ಊ) ಈ ಕಾಮಗಾರಿಯನ್ನು ಪ್ರಾರಂಭಿಸಿದಾಗ ಉಂಟಾಗುವ ಸಂಚಾರಿ ತೊಂದರೆಗೆ ಪರ್ಯಾಯ ವ್ಯವಸ್ಥೆ ಮಾಡಲು ಸರ್ಕಾರ ಆಲೋಚಿಸಿದೆಯೇ ?

## ಬೆಳಗಾವಿ ಜಿಲ್ಲೆಯಲ್ಲಿ ರಾಸಾಯನಿಕ ಮಿಶ್ರಿತ ಕೃತ್ರಿಮ ಮಾವು ಮಾರಾಟವಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೮೬ (೨೧೦೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯಲ್ಲಿ ರಾಸಾಯನಿಕ ಮಿಶ್ರಿತ ಕೃತ್ರಿಮ ಮಾವು ಅವಾಹತವಾಗಿ ಮಾರಾಟವಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ, ಹಾಪ್ ಕಾಮ್ಸ್‌ಗಳಲ್ಲೂ ಮಾರಾಟವಾಗುತ್ತಿರುವ ರಾಸಾಯನಿಕ ಮಿಶ್ರಿತ ಕೃತ್ರಿಮ ಮಾವಿನ ಹಣ್ಣುಗಳ ಮಾರಾಟವನ್ನು ನಿಯಂತ್ರಿಸಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ;

(ಇ) ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಈ ಕೃತ್ರಿಮ ಮಾವಿನ ಹಣ್ಣುಗಳ ಮಾರಾಟ ದಂಧೆ ನಡೆಸಲಾಗುತ್ತಿದೆ, ಸಾರ್ವಜನಿಕರ ಆರೋಗ್ಯದ ಮೇಲೆ ಆಟವಾಡುತ್ತಿರುವ ಇವರ ಮೇಲೆ ಸರ್ಕಾರ ಏನು ಕ್ರಮಗಳನ್ನು ತೆಗೆದುಕೊಳ್ಳುವುದು;

(ಈ) ಸರ್ಕಾರವು ಮಾವಿನಹಣ್ಣು ರಫ್ತು ಮಾರಾಟವನ್ನು ನಿಷೇಧಿಸಲು ಕಾರಣಗಳೇನು ; (ವಿವರ ನೀಡುವುದು)

## ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸಲು ಮುಂದಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೮೭ (೨೧೦೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ರೈತರ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಮೀಟರ್ ಅಳವಡಿಸಲು ಇಲಾಖೆಯು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ದೇಶದ ಆಹಾರೋತ್ಪಾದನೆಯ ಬೆನ್ನೆಲುಬಾಗಿರುವ ರೈತರ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸುವುದು ಭೀಕರ ಬರಗಾಲದಿಂದ ತತ್ತರಿಸಿರುವ ರೈತರನ್ನು ಮತ್ತಷ್ಟು ಸಂಕಷ್ಟಕ್ಕೆ ತಳ್ಳಿದಂತಾಗುವುದಿಲ್ಲವೇ ;

(ಇ) ರೈತರಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಸರ್ಕಾರ ಯಾವ ಪರ್ಯಾಯ ವ್ಯವಸ್ಥೆ ಕಲ್ಪಿಸಲಿದೆ ; ಇದರಿಂದ ರೈತರಿಗೆ ಯಾವ ರೀತಿ ಪ್ರಯೋಜನವಾಗಲಿದೆ ;

(ಈ) ರಾಜ್ಯದಲ್ಲಿ ಒಟ್ಟು ಎಷ್ಟು ಜನ ರೈತರು ಪಂಪ್‌ಸೆಟ್ ಆಧಾರಿತ ಕೃಷಿಯಲ್ಲಿ ತೊಡಗಿದ್ದಾರೆ ; ಇದರಲ್ಲಿ ಚಾಲ್ತಿಯಲ್ಲಿರುವ ಪಂಪ್‌ಸೆಟ್‌ಗಳು ಎಷ್ಟು ; ನೀರಿಲ್ಲದೆ ಬತ್ತಿಹೋಗಿರುವ ಪಂಪ್‌ಸೆಟ್‌ಗಳು ಎಷ್ಟು ;

(ಉ) ರೈತರ ಪಂಪ್‌ಸೆಟ್‌ಗಳಿಗೆ ಒಟ್ಟು ಎಷ್ಟು ಪ್ರಮಾಣದ ವಿದ್ಯುತ್ ಬಳಕೆಯಾಗುತ್ತಿದೆ ; ಬೃಹತ್ ಕೈಗಾರಿಕೆಗಳಿಗೆ, ಸಣ್ಣ ಕೈಗಾರಿಕೆಗಳಿಗೆ,

ಇತರೆ ಸಾರ್ವಜನಿಕ ಬಳಕೆಗಳಿಗೆ ಎಷ್ಟೆಷ್ಟು ಪ್ರಮಾಣದ ವಿದ್ಯುತ್ ಬಳಕೆಯಾಗುತ್ತಿದೆ ; ಎಷ್ಟು ಪ್ರಮಾಣದ ವಿದ್ಯುತ್ ಅವಶ್ಯಕತೆಯಿದೆ; ಎಷ್ಟು ಕೊರತೆಯಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಪೌರಕಾರ್ಮಿಕರು ಸುರಕ್ಷಾ ಸೌಲಭ್ಯವಿಲ್ಲದೆ ಅಪಾಯಕಾರಿ ಸ್ವಚ್ಛತಾ ಕಾರ್ಯ ಮಾಡುವಾಗ ಸಾವಿಗೀಡಾಗುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೮೮ (೨೧೦೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಪೌರ ಕಾರ್ಮಿಕರು ಮೂಲ ಸುರಕ್ಷಾ ಸೌಲಭ್ಯವಿಲ್ಲದೆ ಅಭದ್ರತೆಯಲ್ಲಿ ಅಪಾಯಕಾರಿ ಸ್ವಚ್ಛತಾ ಕಾರ್ಯದಲ್ಲಿ ತೊಡಗಿ ಸಾವಿಗೀಡಾಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಾದರೆ, ಅಭದ್ರತೆಯಲ್ಲಿ ಅಪಾಯಕಾರಿ ಸ್ವಚ್ಛತಾ ಕಾರ್ಯದಲ್ಲಿ ತೊಡಗಿರುವ ಪೌರ ಕಾರ್ಮಿಕರಿಗೆ ಯಾವ ಯಾವ ಸುರಕ್ಷಾ ಸೌಲಭ್ಯಗಳನ್ನು ಸರ್ಕಾರದಿಂದ ಒದಗಿಸಲಾಗಿದೆ ; (ವಿವರ ನೀಡುವುದು)

(ಇ) ಹೆಚ್ಚಾಗಿ ಅಶಿಕ್ಷಿತರೇ ತುಂಬಿರುವ ಪೌರ ಕಾರ್ಮಿಕರಿಗೆ ಅಪಾಯಕಾರಿ ಸ್ವಚ್ಛತಾ ಕಾರ್ಯದ ಬಗ್ಗೆ ಯಾವ ಮುಂಜಾಗ್ರತಾ ಅರಿವಿನ ತರಬೇತಿ ನೀಡಲಾಗುವುದು ; ಇದರ ಬಗ್ಗೆ ಅವರಿಗೆ ಸ್ಪಷ್ಟ ಜಾಗೃತಿ ಮೂಡಿಲಾಗಿದೆಯೇ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಒಟ್ಟು ಎಷ್ಟು ಮಂದಿ ಪೌರಕಾರ್ಮಿಕರು ದುಡಿಯುತ್ತಿದ್ದಾರೆ; ೨೦೧೪–೧೫, ೨೦೧೫–೧೬ ಹಾಗೂ

೨೦೧೬-೧೭ನೇ ಸಾಲಿಗೆ ಒಟ್ಟು ಎಷ್ಟು ಪೌರಕಾರ್ಮಿಕರು ಅಪಾಯಕಾರಿ ಸ್ವಚ್ಛತೆ ಮಾಡುವಾಗ ಪ್ರಾಣ ಕಳೆದುಕೊಂಡಿದ್ದಾರೆ; (ಪಾಲಿಕೆವಾರು ವಿವರ ನೀಡುವುದು)

(ಉ) ೨೦೧೪-೧೫, ೨೦೧೫-೧೬ ಹಾಗೂ ೨೦೧೬-೧೭ನೇ ಸಾಲಿಗೆ ಪೌರಕಾರ್ಮಿಕರ ಭದ್ರತೆಗೆ, ಅವರ ಕ್ಷೇಮಾಭಿವೃದ್ಧಿಗೆ ಸರ್ಕಾರ ಒಟ್ಟು ಎಷ್ಟು ಅನುದಾನ ವ್ಯಯಿಸಿದೆ ? (ಪಾಲಿಕೆವಾರು ವಿವರ ನೀಡುವುದು)

## ಪಶುವೈದ್ಯ ಆಸ್ಪತ್ರೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೮೯ (೨೮೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮಹಾನಗರದ ಮೈಸೂರು ರಸ್ತೆಯಲ್ಲಿರುವ ಪಶು ವೈದ್ಯ ಆಸ್ಪತ್ರೆಯು ಮಾದಕ ವ್ಯಸನಿಗಳ ತಾಣವಾಗಿ ಪರಿವರ್ತನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ಈ ಪಶು ವೈದ್ಯ ಆಸ್ಪತ್ರೆಯನ್ನು ದುರಸ್ಥಿ ಮಾಡಿ ಇಲ್ಲಿಗೆ ಮೂಲ ಸೌಲಭ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಪಶುವೈದ್ಯ ಆಸ್ಪತ್ರೆಗಳಿವೆ ; ಅವು ಯಾವುವು ; ಅವುಗಳಿಗೆ ಅತ್ಯಗತ್ಯ ಅವಶ್ಯವಿರುವ ಮೂಲಸೌಲಭ್ಯಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ ; (ವಿವರ ನೀಡುವುದು)

(ಈ) ೨೦೧೪-೧೫, ೨೦೧೫-೧೬, ೨೦೧೬-೧೭ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಗೆ ಪಶುವೈದ್ಯ ಆಸ್ಪತ್ರೆಗಳ ಮೂಲ ಸೌಕರ್ಯಾಭಿವೃದ್ಧಿಗೆ ಸರ್ಕಾರ ಒದಗಿಸಿದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಾಕಿ ಇರುವ ಅನುದಾನವೆಷ್ಟು; (ವಿವರ ನೀಡುವುದು)

(ಉ) ಸದರಿ ಅನುದಾನದಲ್ಲಿ ಜಿಲ್ಲೆಯಲ್ಲಿ ಯಾವ ಯಾವ ಮೂಲ ಸೌಲಭ್ಯಗಳ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ನಗರ ಸ್ಥಳೀಯ ಸಂಸ್ಥೆಗಳಲ್ಲಿನ ನೌಕರರ ಖಾಯಂಯಾತಿ ಮತ್ತು ಸಮಾನ ಕೆಲಸಕ್ಕೆ ಸಮಾನ ವೇತನ ಜಾರಿಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೧೯೦ (೨೧೧೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಮಂಜೂರಾದ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ರಾಜ್ಯದ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳ ವಿವಿಧ ಸ್ತರದಲ್ಲಿ ದುಡಿಯುತ್ತಿರುವ ಗುತ್ತಿಗೆ ಮತ್ತು ಹೊರ ಗುತ್ತಿಗೆ ನೌಕರರ ಸಂಖ್ಯೆ ಎಷ್ಟು ; ಸದರಿ ನೌಕರರಿಗೆ ಪ್ರಸಕ್ತ ನೀಡುತ್ತಿರುವ ವೇತನ ಎಷ್ಟು ;

(ಇ) ರಾಜ್ಯದ ವಿವಿಧ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ದುಡಿಯುತ್ತಿರುವ ಪೌರ ಕಾರ್ಮಿಕರ ಸಂಖ್ಯೆ

ಎಷ್ಟು ; ಅವರಿಗೆ ನೀಡುತ್ತಿರುವ ವೇತನ ಮತ್ತು ಇತರ ಸೌಲಭ್ಯಗಳೇನು ;

(ಈ) ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳ ಪ್ರತಿಯೊಬ್ಬ ಪೌರ ಕಾರ್ಮಿಕರು ಮತ್ತು ಗುತ್ತಿಗೆ ನೌಕರರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ಪಾವತಿಸಲಾಗುತ್ತಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ;

(ಉ) ಪೌರ ಕಾರ್ಮಿಕರು ಸೇರಿದಂತೆ ಗುತ್ತಿಗೆ ನೌಕರರನ್ನು ಖಾಯಂ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಈ ಬಗ್ಗೆ ಸರ್ಕಾರ ಯಾವ ಹಂತದಲ್ಲಿ ಯಾವ ಯಾವ ಕ್ರಮ ಕೈಗೊಳ್ಳಲಿದೆ?

## ಬಂದರು, ಜೆಟ್ಟಿ ನಿರ್ಮಾಣ, ಹೂಳೆತ್ತುವ ಕಾಮಗಾರಿಗಳು ನೆನೆಗುದಿಗೆ ಬಿದ್ದಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೧ (೨೧೧೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರವಾಳಿ ಜಿಲ್ಲೆಗಳ ವಿವಿಧ ಬಂದರು ಮತ್ತು ಜೆಟ್ಟಿ ನಿರ್ಮಾಣ, ಹೂಳೆತ್ತುವುದು ಮತ್ತು ಬ್ರೇಕ್ ವಾಟರ್ ಕಾಮಗಾರಿಗಳ ಪ್ರಗತಿ ಕುಂಠಿತವಾಗಿದ್ದು. ಕಾಮಗಾರಿಗಳು ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕಾಮಗಾರಿಗಳ ವಿಳಂಬಕ್ಕೆ ಕಾರಣಗಳೇನು;

(ಆ) ಕಳೆದ ನಾಲ್ಕು ವರ್ಷಗಳಲ್ಲಿ ಮಂಜೂರಾದ ವಿವಿಧ ಬಂದರು ಮತ್ತು ಜೆಟ್ಟಿ ನಿರ್ಮಾಣ, ಹೂಳೆತ್ತುವ ಮತ್ತು ಬ್ರೇಕ್ ವಾಟರ್

ಕಾಮಗಾರಿಗಳು ಯಾವುವು; (ವರ್ಷವಾರು-ಮಂಜೂರು ಅನುದಾನದ ವಿವರ ನೀಡುವುದು)

(ಇ) ಮಂಜೂರಾದ ಕಾಮಗಾರಿಗಳಲ್ಲಿ ಪ್ರಾರಂಭಿಸಲಾದ, ಪ್ರಗತಿಯಲ್ಲಿರುವ ಮುಕ್ತಾಯಗೊಳಿಸಲಾದ ಕಾಮಗಾರಿಗಳಾವುವು; ಗುತ್ತಿಗೆ ಪಡೆದ ಸಂಸ್ಥೆಗಳಾವುವು; (ಕಾಮಗಾರಿವಾರು, ವರ್ಷವಾರು ಮುಕ್ತಾಯಗೊಳಿಸಿದ ವರ್ಷದ ವಿವರ ನೀಡುವುದು)

(ಈ) ಟೆಂಡರ್ ನಿಯಮ ಉಲ್ಲಂಘಿಸಿ ಅನಗತ್ಯ ವಿಳಂಬ ಮಾಡುವ ಗುತ್ತಿಗೆದಾರರು/ಸಂಸ್ಥೆಯನ್ನು ಕಪ್ಪು ಪಟ್ಟಿಗೆ ಸೇರಿಸಲು ಕ್ರಮ ಕೈಗೊಳ್ಳಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಉ) ಬಂದರು ಜೆಟ್ಟಿ ನಿರ್ಮಾಣ ಹೂಳೆತ್ತುವುದು ಬ್ರೇಕ್‌ವಾಟರ್, ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಹತ್ತಾರು ವರ್ಷಗಳಿಂದ ಸರ್ಕಾರಿ ಭೂಮಿಯಲ್ಲಿ ಮನೆ ಕಟ್ಟಿಕೊಂಡಿರುವ ಮನೆಗಳಿಗೆ ವಿದ್ಯುತ್ ಸಂಪರ್ಕ ನೀಡುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೨೯೨ (೨೧೧೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಸತಿ ವಾಣಿಜ್ಯ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸ್ಥಳೀಯ ಸಂಸ್ಥೆಗಳ ನಿರಾಕ್ಷೇಪಣಾ ಪತ್ರ ಸಲ್ಲಿಸುವುದು ಕಡ್ಡಾಯವಾಗಿದೆ ;

(ಆ) ಹೌದಾದಲ್ಲಿ ಯಾವ ಕಾಯಿದೆ, ಪ್ರಕರಣದಂತೆ ವಿದ್ಯುತ್ ಸಂಪರ್ಕಕ್ಕೆ ನಿರಾಕ್ಷೇಪಣಾ ಪತ್ರ ಕಡ್ಡಾಯಗೊಳಿಸಲಾಗಿದೆ; (ಪ್ರತಿ ಒದಗಿಸುವುದು)

(ಇ) ಫಾರ್ಮ್ ಹೌಸ್ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕಕ್ಕೆ ನಿರಾಕ್ಷೇಪಣಾ ಪತ್ರ ಅಗತ್ಯವೇ;

(ಈ) ಹತ್ತಾರು ವರ್ಷಗಳಿಂದ ಸರ್ಕಾರಿ ಜಾಗದಲ್ಲಿ ಮನೆ ಕಟ್ಟಿಕೊಂಡು ಜನ ವಾಸಿಸುತ್ತಿರುವ ಹಾಗೂ ೯೪ಸಿಯಡಿ ಅರ್ಜಿ ಸಲ್ಲಿಸುತ್ತಿದ್ದು. ಹಕ್ಕು ಪತ್ರಕ್ಕಾಗಿ ಕಾಯುತ್ತಿರುವ ಮೂಲಭೂತ ಸೌಕರ್ಯ ಒದಗಿಸುವ ಉದ್ದೇಶದಿಂದ ನಿರಾಕ್ಷೇಪಣಾ ಪತ್ರವಿಲ್ಲದೆ ವಿದ್ಯುತ್ ಸಂಪರ್ಕ ನೀಡಲು ಇಲಾಖೆಗಿರುವ ತೊಡಕುಗಳೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳಬೇಕು.

## ಸೌರ ವಿದ್ಯುತ್ ಯೋಜನೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೧೯೩ (೨೧೨೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) "ಭಾವಣಿಯಲ್ಲಿ ಸೌರ ವಿದ್ಯುತ್" ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ ಯೋಜನೆಯ ಮಾನದಂಡವೇನು; (ವಿವರ ನೀಡುವುದು)

(ಆ) ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಕಳೆದ ನಾಲ್ಕು ವರ್ಷಗಳಲ್ಲಿ ಇದ್ದ ಗುರಿ ಎಷ್ಟು;

(ಇ) ಉತ್ಪಾದನೆ ಪ್ರಾರಂಭವಾಗಿದೆಯೇ; ಎಲ್ಲೆಲ್ಲಿ ಪ್ರಾರಂಭವಾಗಿದೆ; ಉತ್ಪಾದನೆಯ ಪ್ರಮಾಣವೆಷ್ಟು;

(ಈ) ಹೊಸದಾಗಿ ಪ್ರಾರಂಭಿಸಲು ಇರುವ ಮಾನದಂಡಗಳೇನು?

## ತೆಂಗು ಬೆಳೆ ಕುರಿತು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೧೯೪ (೨೧೨೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೆಂಗು ಬೆಳೆಯುವ ಪ್ರದೇಶ ಎಷ್ಟು ಹೆಕ್ಟರ್ ಇದೆ; (ಜಿಲ್ಲಾವಾರು ವಿವರ ನೀಡುವುದು)

(ಆ) ದೇಶದ ಒಟ್ಟು ತೆಂಗು ಉತ್ಪಾದನೆಯಲ್ಲಿ ರಾಜ್ಯ ಎಷ್ಟನೇ ಸ್ಥಾನದಲ್ಲಿದೆ;

(ಇ) ತೆಂಗು ಬೆಳೆಗಾರರ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ದರ ಕುಸಿತಕ್ಕೆ ತೆಗೆದುಕೊಂಡಿರುವ ಕ್ರಮಗಳೇನು;

(ಉ) ಬೆಂಬಲ ಬೆಲೆ ನೀಡಿ ರೈತರನ್ನು ಉಳಿಸಲಾಗುವುದೇ?

## ಮೂನಿಯೂರು–ಸಂಪಿಗೆ ರಸ್ತೆ ಅಭಿವೃದ್ಧಿ ಬಗ್ಗೆ.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೧೯೫ (೨೧೨೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುರುವೇಕೆರೆಯಿಂದ ಮುನಿಯೂರು ಸಂಪಿಗೆ, ಕೊಂಡಜ್ಜಿ ಕ್ರಾಸ್‌ನಿಂದ ಕಲ್ಲೂರ್ ಕ್ರಾಸ್ ರಸ್ತೆ ತುಂಬಾ ಹಾಳಾಗಿ ಸಂಚಾರಕ್ಕೆ ತೊಂದರೆಯಾಗಿರುವುದು ನಿಜವೇ;

(ಆ) ಹಾಗಿದ್ದಲ್ಲಿ, ಹಲವಾರು ವರ್ಷಗಳಿಂದ ಹಾಳಾಗಿರುವ ಈ ರಸ್ತೆಗಳನ್ನು ಮರು ಡಾಂಬರೀಕರಣ ಮಾಡಲು ಈ ವರ್ಷ ಎಷ್ಟು ಅನುದಾನ ನೀಡಲಾಗಿದೆ;

(ಇ) ಯಾವ್ಯಾವ ಕಾಮಗಾರಿಗಳಿಗೆ ಈ ಅನುದಾನವನ್ನು ವಿನಿಯೋಗಿಸಲಾಗಿದೆ.

(ಈ) ಎಷ್ಟು ದಿನಗಳಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗುವುದು;

## ಕೃಷಿ ಮಾರುಕಟ್ಟೆಯಲ್ಲಿ ಸೆಸ್ ಬಾಪ್ತು ಇರುವ ಹಣದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೨೯೯೬ (೨೧೨೫) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಮಾರುಕಟ್ಟೆಯಲ್ಲಿ ಪ್ರಾರಂಭದಿಂದ ಇದುವರೆಗೆ ಇಲಾಖೆಗೆ ಬಂದಿರುವ ಸುಂಕ ಎಷ್ಟು; (ಮಾರುಕಟ್ಟೆವಾರು ಮಾಹಿತಿ ನೀಡುವುದು)

(ಆ) ಈ ಹಣದಿಂದ ಮಾರುಕಟ್ಟೆಗಳಿಗೆ ಅಭಿವೃದ್ಧಿಗೆ ಕೆಲಸ ಮಾಡಲಾಗುವುದೇ;

(ಇ) ಈ ಹಣವನ್ನು ಆವರ್ತ ನಿಧಿಗೆ ನೀಡಲಾಗುವುದೇ; ಹಾಗಿದ್ದಲ್ಲಿ, ಇದುವರೆಗೆ ಎಷ್ಟು ನೀಡಲಾಗಿದೆ?

## ಮೂಡಿಗೆರೆ ತಾಲ್ಲೂಕಿನಲ್ಲಿ ತೋಟಗಾರಿಕೆ ವಿಶ್ವವಿದ್ಯಾಲಯ ಸ್ಥಾಪಿಸುವ ವಿಚಾರದ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೯೭ (೯೯೦೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ

ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನ "ತೋಟಗಾರಿಕೆ ವಿಶ್ವವಿದ್ಯಾಲಯ" ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಈ ವಿಚಾರವಾಗಿ ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ವಿತರಿಸಲಾಗಿರುವ ಬೀಜ ಮತ್ತು ಗೊಬ್ಬರಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೯೮ (೨೧೪೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭, ೨೦೧೭–೧೮ರಲ್ಲಿ ರೈತರಿಗೆ ವಿತರಿಸಲಾಗಿರುವ ಗೊಬ್ಬರಗಳನ್ನು ಮತ್ತು ಬೀಜಗಳನ್ನು ಯಾವ ಪ್ರಮಾಣದಲ್ಲಿ ವಿತರಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಬೆಳೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ;

(ಇ) ೨೦೧೬–೧೭ರೈತರಿಗೆ ಯಾವ ಯಾವ ಬೆಳೆಗಳಿಗೆ ಬೆಂಬಲ ಬೆಲೆಯನ್ನು ಘೋಷಿಸಲಾಗಿದೆ?

## ಕೃಷಿ ಸಲಕರಣೆಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೯೮ (ಎ)(೨೧೪೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ರೈತರಿಗೆ ಕೃಷಿ ಸಲಕರಣೆಗಳನ್ನು ವಿತರಿಸಲಾಗಿದೆಯೇ;

(ಆ) ವಿತರಿಸಿದ್ದಲ್ಲಿ, ಯಾವ ಯಾವ ಸಲಕರಣೆಗಳನ್ನು ವಿತರಿಸಲಾಗಿದೆ;

(ಇ) ಕೃಷಿ ಸಲಕರಣೆಗಳನ್ನು ವಿತರಿಸಲು ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ?

## ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯ (೨೧೪೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಪಂಪ್‌ಸೆಟ್‌ಗಳಿಗೆ ಗಂಗಾಕಲ್ಯಾಣ ಯೋಜನೆಯಡಿ ವಿದ್ಯುತ್ ಸಂಪರ್ಕ ನೀಡಲು ಸೂಕ್ತ ಸಮಯದಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ;

(ಆ) ೨೦೧೭–೧೮ರಲ್ಲಿ ಗಂಗಾಕಲ್ಯಾಣ ಯೋಜನೆಯಡಿ ವಿದ್ಯುತ್ ಸಂಪರ್ಕ ನೀಡಲಾದ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು;

(ಇ) ಎಷ್ಟು ಸಮಯ ೩ ಫೇಸ್‌ನಲ್ಲಿ ಕೃಷಿ ಚಟುವಟಿಕೆಗಳಿಗೆ ವಿದ್ಯುತ್ ನೀಡಲಾಗುತ್ತಿದೆ?

## ಕಾಮಗಾರಿಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦ (೨೧೩೯) ಮಾನ್ಯ ಪೌರಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಪುರಸಭೆ, ನಗರಸಭೆ ಹಾಗೂ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ೧೦ ಲಕ್ಷ ರೂಪಾಯಿಗಳಿಗೆ ಮೇಲ್ಪಟ್ಟು ನಡೆದಿರುವ ಕಾಮಗಾರಿಗಳು ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆ ಕಾಮಗಾರಿಗಳು ಪೂರ್ಣ ವಿವರಗಳನ್ನು ನೀಡುವುದು?

## ಸಾರ್ವಜನಿಕ ವಲಯದ ಉದ್ದಿಮೆಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೧ (೧೯೦೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಾರ್ವಜನಿಕ ವಲಯದ ಹಾಗೂ ಉದ್ದಿಮೆಗಳು ಯಾವುವು; ಅವುಗಳ ಅಧ್ಯಕ್ಷರು ಮತ್ತು ನಿರ್ದೇಶಕರು ಮಂಡಳಿಯ ವಿವರ ನೀಡುವುದು;

(ಆ) ಈ ಉದ್ದಿಮೆಗಳಲ್ಲಿ ಲಾಭದಲ್ಲಿರುವ ಮತ್ತು ಲಾಭದಾಯಕವಲ್ಲದ ಉದ್ದಿಮೆಗಳು ಯಾವುವು; ಲಾಭದಾಯಕವಲ್ಲದ ಉದ್ದಿಮೆಯನ್ನು ಲಾಭದೆಡೆಗೆ ತರಲು ಸರ್ಕಾರದ ಕ್ರಮವೇನು;

(ಇ) ಸಾರ್ವಜನಿಕ ವಲಯದ ಉದ್ದಿಮೆಗಳ ಅಧ್ಯಕ್ಷರು ಮತ್ತು ನಿರ್ದೇಶಕರಿಗೆ ಸರ್ಕಾರದಿಂದ ದೊರೆಯುವ ಸವಲತ್ತುಗಳಾವುವು?

## ಎ.ಪಿ.ಎಂ.ಸಿ ಗಳ ತೆರಿಗೆ ಸಂಗ್ರಹ ಹಾಗೂ ಕಾಮಗಾರಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೨ (೨೦೧೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎ.ಪಿ.ಎಂ.ಸಿ ಗಳು ಯಾವ ಯಾವ ಮೂಲಗಳಿಂದ ತೆರಿಗೆ ಹಣ ಸಂಗ್ರಹಿಸಲು ಅಧಿಕಾರವನ್ನು ಹೊಂದಿದೆ; ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ ಎ.ಪಿ.ಎಂ.ಸಿ ಗಳು ಕಳೆದ ೩ ವರ್ಷಗಳಲ್ಲಿ ಸಂಗ್ರಹಿಸಿದ ಮೊತ್ತವೆಷ್ಟು;

(ಆ) ಎ.ಪಿ.ಎಂ.ಸಿ ಗಳು ಸಂಗ್ರಹಿಸಿದ ತೆರಿಗೆ ಹಣವನ್ನು ಯಾವ ಲೆಕ್ಕ ಶೀರ್ಷಿಕೆಗೆ ಪಾವತಿಸಲಾಗುತ್ತದೆ; ಈ ಸಂಗ್ರಹಿತ ತೆರಿಗೆ ಹಣವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗುತ್ತಿದೆ;

(ಇ) ಎ.ಪಿ.ಎಂ.ಸಿ ಕ್ಷೇತ್ರ ವ್ಯಾಪ್ತಿಯಲ್ಲಿ ಸ್ಥಳೀಯ ಅಗತ್ಯಗಳಿಗೆ ಅನುಗುಣವಾಗಿ ಕಾರ್ಯಕ್ರಮ ಆಯೋಜಿಸಲು ಕಾಮಗಾರಿ ನಡೆಸಲು ಮಂಡಳಿಗೆ ಅಧಿಕಾರವಿದೆಯೇ; ಇಲ್ಲವಾದಲ್ಲಿ, ಮಂಡಳಿಯ ತೆರಿಗೆ ಸಂಗ್ರಹಣಾ ಅವಶ್ಯಕತೆಯು ಕಡಿಮೆಯಾಗುವುದನ್ನು ಸರ್ಕಾರವು ಗಮನಿಸಿದೆಯೇ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು; ಇದರಿಂದ ಅಭಿವೃದ್ಧಿ ಕಾರ್ಯ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

## ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಕ್ರಮದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೩ (೨೦೧೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಮುಖ್ಯ ರಸ್ತೆಯಿಂದ ರಾಜ್ಯ ಹೆದ್ದಾರಿಗೆ, ರಾಜ್ಯ ಹೆದ್ದಾರಿಯಿಂದ ರಾಷ್ಟ್ರೀಯ ಹೆದ್ದಾರಿಗೆ ಮೇಲ್ದರ್ಜೆಗೇರಿಸಲ್ಪಟ್ಟ ರಸ್ತೆಗಳ ಸಂಖ್ಯೆ ಎಷ್ಟು. (ವರ್ಷವಾರು, ರಸ್ತೆವಾರು ಕಿ.ಮೀ. ವಾರು ವಿವರ ನೀಡುವುದು)

(ಆ) ರಸ್ತೆಯನ್ನು ಮೇಲ್ದರ್ಜೆಗೇರಿಸಲು ಇರುವ ಮಾನದಂಡವೇನು; (ಪ್ರತಿ ಒದಗಿಸುವುದು) ಇತ್ತೀಚಿನ ದಿನಗಳಲ್ಲಿ ರಾಜಕೀಯ ತೀರ್ಮಾನಗಳ ಮೇರೆಗೆ ರಸ್ತೆಗಳನ್ನು ಮೇಲ್ದರ್ಜೆಗೇರಿಸುತ್ತಿರುವುದು ನಿಜವೇ;

(ಇ) ಸಾರ್ವಜನಿಕ ಹಿತದೃಷ್ಟಿಯಿಂದ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಅವಕಾಶವಿದೆಯೇ; ಅವಕಾಶವಿದ್ದಲ್ಲಿ, ಕಳೆದ ೨೫ ವರ್ಷಗಳಿಂದ ಕುಂದಾಪುರ ತಾಲ್ಲೂಕಿನ ಹೆಂಗವಳ್ಳಿ ಗ್ರಾಮದ ನಂದಿಕೋಣವನ್ನು ಸಂಪರ್ಕಿಸುವ ಉಳಿದ ಭಾಗದ ರಸ್ತೆಯನ್ನು ಮೇಲ್ದರ್ಜೆಗೇರಿಸದಿರಲು ಕಾರಣವೇನು?

## ಪಶು ಆಹಾರ ಉತ್ಪಾದಕ ಘಟಕ ಸ್ಥಾಪನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೪ (೨೦೧೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಪಶು ಆಹಾರ ಉತ್ಪಾದಕ ಘಟಕಗಳು ಯಾವುವು; ಅವುಗಳು ಉತ್ಪಾದಿಸುವ ಪಶು ಆಹಾರದ ಪ್ರಮಾಣವೆಷ್ಟು;

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪಶು ಆಹಾರದ ಪೂರೈಕೆಗೆ ಇರುವ ಬೇಡಿಕೆ ಎಷ್ಟು; ಪೂರೈಕೆಯಾಗುವ ಪ್ರಮಾಣವೆಷ್ಟು; ಕೊರತೆಯಾಗುವ ಪ್ರಮಾಣವೆಷ್ಟು; ಕೊರತೆಯನ್ನು ನೀಗಿಸಲು ಸರ್ಕಾರದ ಕ್ರಮವೇನು;

(ಇ) ಕೆ.ಎಂ.ಎಫ್ ನಿಂದ ಈ ಜಿಲ್ಲೆಗೆ ಅವಶ್ಯಕತೆಯಿರುವ ಪಶು ಆಹಾರ ಉತ್ಪಾದನಾ ಘಟಕವನ್ನು ಪ್ರಾರಂಭಿಸುವ ಯೋಜನೆಯಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಈ) ಪಶು ಆಹಾರ ಪದಾರ್ಥಗಳ ಮಾರಾಟ ದರದ ಮೇಲೆ ಸರ್ಕಾರವು ನಿಯಂತ್ರಣವನ್ನು ಹೊಂದಿದೆಯೇ; ಹೌದಾದಲ್ಲಿ, ಸರ್ಕಾರದಿಂದ ನಿಗಧಿಪಡಿಸಲಾದ ದರವೇನು?

## ಉಡುಪಿ ಜಿಲ್ಲೆಯ ರೈತರ ಅಗತ್ಯಕ್ಕೆ ಅನುಗುಣವಾಗಿ ಭತ್ತದ ಬೀಜ ಪೂರೈಕೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೫ (೨೦೧೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ೨೦೧೬–೧೭ನೇ ಸಾಲಿನಲ್ಲಿ ವಿತರಿಸಲಾದ ವಿವಿಧ ಭತ್ತದ ಬೀಜಗಳ ಪ್ರಮಾಣವೆಷ್ಟು ; (ತಾಲ್ಲೂಕುವಾರು ಭತ್ತದ ಬೀಜ ಮಾದರಿವಾರು ವಿವರ ನೀಡುವುದು)

(ಆ) ೨೦೧೭–೧೮ನೇ ಸಾಲಿನಲ್ಲಿ ಇಲಾಖೆಯು ರೈತರಿಂದ ನಿರೀಕ್ಷಿಸಿದ ಬೇಡಿಕೆಯ ಗುರಿ ಎಷ್ಟು ; ಪೂರೈಕೆಗೆ ದಾಸ್ತಾನು ಮಾಡಿದ ಭತ್ತದ ಬೀಜದ ಪ್ರಮಾಣವೆಷ್ಟು ; (ತಾಲ್ಲೂಕುವಾರು ಭತ್ತದ ಬೀಜದ ಮಾದರಿವಾರು ವಿವರ ನೀಡುವುದು)

(ಇ) ರೈತರ ಅಗತ್ಯಕ್ಕೆ ಅನುಗುಣವಾಗಿ ಭತ್ತದ ಬೀಜವನ್ನು ಪೂರೈಸಲು ಸರ್ಕಾರದಿಂದ ಹಮ್ಮಿಕೊಳ್ಳಲಾದ ಕಾರ್ಯ ಯೋಜನೆ ಯಾವುದು ;

(ಈ) ಭತ್ತದ ಎಂ.–೪ ಬಿತ್ತನೆ ಬೀಜವು ಕೊರತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಕಾಲದಲ್ಲಿ ಪೂರೈಕೆಗೆ ಸರ್ಕಾರದ ಕ್ರಮವೇನು ?

## ಟ್ರಾನ್ಸ್‌ಫಾರ್ಮರ್‌ಗಳು ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೬ (೨೦೪೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಕಳೆದ ೦೪ ವರ್ಷಗಳಲ್ಲಿ ಎಷ್ಟು ಟ್ರಾನ್ಸ್‌ಫಾರ್ಮರ್ ಬಾಕ್ಸ್‌ಗಳನ್ನು ಅಳವಡಿಸಲಾಗಿದೆ ; ಟ್ರಾನ್ಸ್‌ಫಾರ್ಮರ್ ಬಾಕ್ಸ್‌ಗಳನ್ನು ಅಳವಡಿಸಲು ಹೊಸದಾಗಿ ಬಂದ ಪ್ರಸ್ತಾವನೆಗಳೆಷ್ಟು ; (ತಾಲ್ಲೂಕುವಾರು ಗ್ರಾಮವಾರು ವಿವರ ನೀಡುವುದು)

(ಆ) ಚಿಕ್ಕಮಗಳೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಟ್ರಾನ್ಸ್‌ಫಾರ್ಮರ್ ಬಾಕ್ಸ್‌ಗಳು ಸ್ಟಾಕ್ ಇಲ್ಲದೇ ತುರ್ತು ಪರಿಸ್ಥಿತಿಗಳಲ್ಲಿ ಟ್ರಾನ್ಸ್‌ಫಾರ್ಮರ್‌ಗಳನ್ನು ಸರಿಪಡಿಸಲು ಯೂನಿಟ್‌ಗಳಿಲ್ಲದೇ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

## ಕಸಾಯಿ ಖಾನೆಗಳ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೭ (೨೦೫೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಅಧಿಕೃತ ಹಾಗೂ ಅನಧಿಕೃತ ಕಸಾಯಿ ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ೦೪ ವರ್ಷದಿಂದ ರಾಜ್ಯದಲ್ಲಿ ಎಷ್ಟು ಕಸಾಯಿ ಖಾನೆಗಳನ್ನು ಪ್ರಾರಂಭಿಸಲು ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಇ) ಅನಧಿಕೃತ ಕಸಾಯಿ ಖಾನೆಗಳನ್ನು ಮುಚ್ಚಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ಕಳೆದ ೦೪ ವರ್ಷಗಳಿಂದ ಎಷ್ಟು ಅನಧಿಕೃತ

ಕಸಾಯಿ ಖಾನೆಗಳನ್ನು ಮುಚ್ಚಲಾಗಿದೆ ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರ ನೀಡುವುದು)

(ಈ) ಅನಧಿಕೃತ ಕಸಾಯಿ ಖಾನೆಗಳನ್ನು ಮುಚ್ಚಲು ಕ್ರಮ ಕೈಗೊಳ್ಳದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಕೆ.ಸಿ.ಎಸ್. ಆರ್. ನಿಯಮ ಮೀರಿ ಮುಂಬಡ್ತಿ ನೀಡಿರುವ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೮ (೨೦೪೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಕೆ.ಸಿ.ಎಸ್.ಆರ್. ನಿಯಮ ೩೨ರಡಿಯಲ್ಲಿ ಸ್ವತಂತ್ರ ಪ್ರಭಾರದಲ್ಲಿರಿಸಿ ನೌಕರರುಗಳಿಗೆ ಮುಂಬಡ್ತಿ ನೀಡುತ್ತಿರುವುದು ಕಾನೂನು ಬಾಹಿರ ಎಂದು ಮಾನ್ಯ ಸರ್ವೋಚ್ಚ ನ್ಯಾಯಾಲಯವು ಜ್ಯೇಷ್ಠತಾ ಪಟ್ಟಿಯನ್ನು ಸರಿಪಡಿಸುವಂತೆ ಆದೇಶ ನೀಡಿದ್ದರೂ ಇದುವರೆಗೂ ಪಾಲನೆಯಾಗದೇ ಇರುವುದಕ್ಕೆ ಕಾರಣಗಳೇನು ;

(ಆ) ಸರ್ವೋಚ್ಚ ನ್ಯಾಯಾಲಯದ ಆದೇಶದ ಪ್ರಕಾರ ಜ್ಯೇಷ್ಠತಾ ಪಟ್ಟಿಯನ್ನು ಸರಿಪಡಿಸಲು ಇರುವ ತೊಂದರೆಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಯಾವ ಯಾವ ನೌಕರರ ವರ್ಗದವರೆಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದ ನಂತರ ಮುಂಬಡ್ತಿ ನೀಡಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ವಿದ್ಯುತ್ ಕೊರತೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೦೯ (೨೦೫೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಬರುವ ಗ್ರಾಮ ಹಾಗೂ ಪಟ್ಟಣಗಳಲ್ಲಿ ವಿದ್ಯುತ್ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಮೂರು ಜಿಲ್ಲೆಗಳಲ್ಲಿ ವಿದ್ಯುತ್ ಕೊರತೆಯಿಂದ ನಾಡಕಚೇರಿ, ಅಟಲ್ ಜನಸ್ನೇಹಿ ಕೇಂದ್ರಗಳಿಗೆ ಬರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ನಿವಾರಿಸಲು ನಾಡಕಚೇರಿ, ಅಟಲ್ ಜನಸ್ನೇಹಿ ಕೇಂದ್ರಗಳಿಗೆ ನಿರಂತರ ವಿದ್ಯುತ್ ಒದಗಿಸಲು ಯಾವ ರೀತಿಯ ಪರ್ಯಾಯ ವ್ಯವಸ್ಥೆ ಕಲ್ಪಿಸಿಕೊಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಗಾಳಿ ವಿದ್ಯುತ್ ಯಂತ್ರಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೧೦ (೨೦೫೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ಗುಡ್ಡದ ಪ್ರದೇಶಗಳಲ್ಲಿ ಗಾಳಿ ವಿದ್ಯುತ್ ಯಂತ್ರಗಳನ್ನು ನಿರ್ಮಿಸಿ ವಿದ್ಯುತ್ ಉತ್ಪಾದನೆ ಮಾಡಲು ಅವಕಾಶವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅಂತಹ ಸ್ಥಳಗಳನ್ನು ಗುರುತಿಸಲಾಗಿದೆಯೇ ;

(ಆ) ಬಂದಿದ್ದಲ್ಲಿ ಹಾಗೂ ಗುರುತಿಸಿದ್ದಲ್ಲಿ, ಯಾವ ಯಾವ ಪ್ರದೇಶಗಳಲ್ಲಿ ಎಷ್ಟು ಗಾಳಿ ವಿದ್ಯುತ್ ಯಂತ್ರಗಳನ್ನು ಅಳವಡಿಸಲು ಉದ್ದೇಶಿಸಲಾಗಿದೆ ;

(ಇ) ಗಾಳಿ ವಿದ್ಯುತ್ ಯಂತ್ರಗಳಿಂದ ಉತ್ಪಾದಿಸುವ ವಿದ್ಯುತ್‌ನ್ನು ಅಲ್ಲಿಯ ರೈತರಿಗೆ ಪೂರೈಸಲು ಸಾಧ್ಯವಾಗುತ್ತದೆಯೇ ; ಇಲ್ಲವಾದಲ್ಲಿ, ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಈ) ಪ್ರಸ್ತುತ ಈ ಮೂರು ಜಿಲ್ಲೆಗಳಲ್ಲಿ ಎಷ್ಟು ಗಾಳಿ ಯಂತ್ರಗಳು ಇವೆ ; ಇದರಿಂದ ಎಷ್ಟು ವಿದ್ಯುತ್ ಉತ್ಪಾದನೆಯಾಗುತ್ತಿದೆ ? (ತಾಲ್ಲೂಕುವಾರು, ಸ್ಥಳವಾರು ವಿವರ ನೀಡುವುದು)

## ವಿದ್ಯುತ್ ಕ್ಷೇತ್ರದಲ್ಲಿ ಸಾಧಿಸಿದ ಗುರಿ ಮತ್ತು ಸಾಧನೆ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೧೧ (೨೦೫೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ವಿದ್ಯುತ್ ಕ್ಷೇತ್ರದಲ್ಲಿ ಸಾಧಿಸಿದ ಗುರಿ ಮತ್ತು ಸಾಧನೆಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ಹೆಚ್ಚುತ್ತಿರುವ ವಿದ್ಯುತ್ ಅವಶ್ಯಕತೆಗಳನ್ನು ಪೂರೈಸಲು ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ವಿದ್ಯುತ್ ಉತ್ಪಾದನಾ ಘಟಕಗಳಿಂದ ಪಡೆದುಕೊಂಡ ವಿದ್ಯುತ್‌ನ ಪ್ರಮಾಣವೆಷ್ಟು ; (ವರ್ಷಾವಾರು, ಮೂಲವಾರು ಸಂಪೂರ್ಣ ವಿವರ ನೀಡುವುದು)

(ಇ) ಯಾವ ಯಾವ ರಾಜ್ಯಗಳಿಂದ ದ್ವಿಪಕ್ಷೀಯ ಒಪ್ಪಂದ, ಖರೀದಿ ಮತ್ತು ಇಂಧನ ವಿನಿಮಯಗಳ ಮೂಲಕ ಎಷ್ಟು ಪ್ರಮಾಣದ ವಿದ್ಯುತ್‌ನ್ನು ಪಡೆದುಕೊಳ್ಳಲಾಗಿದೆ ?

## ಕಾಮಗಾರಿಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೧೨ (೨೦೫೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಒಂದು ಕೋಟಿ ರೂಪಾಯಿಗಳಿಗೂ ಮೀರಿದ ಮೊತ್ತದ ಅಂದಾಜಿನ ಕೆಲಸಗಳಿಗೆ ಗುತ್ತಿಗೆದಾರರು ನಿಗದಿತ ಅಂದಾಜು ದರಕ್ಕಿಂತಲೂ ಕಡಿಮೆ ದರದಲ್ಲಿ ಕಾರ್ಯನಿರ್ವಹಿಸಲು ಗುತ್ತಿಗೆ ಪಡೆದುಕೊಂಡ ಪ್ರಕರಣಗಳು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಇಂತಹ ಪ್ರಕರಣಗಳಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕೆಲಸದ ಗುಣಮಟ್ಟವನ್ನು ಸರ್ಕಾರದ ಅಥವಾ ಖಾಸಗಿ ವತಿಯಿಂದ ದೃಢೀಕರಿಸಲಾಗಿದೆಯೇ ; (ವಿವರ ನೀಡುವುದು)

(ಇ) ನಿರೀಕ್ಷಿತ ಗುಣಮಟ್ಟವನ್ನು ಕಾಪಾಡದಿದ್ದ ಪ್ರಕರಣಗಳಲ್ಲಿ ಸಂಬಂಧಿಸಿದ ಗುತ್ತಿಗೆದಾರರು ಮತ್ತು ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಜರುಗಿಸಿದೆ ? (ಅಂತಹ ಪ್ರಕರಣಗಳ ಸಂಪೂರ್ಣ ವಿವರ ನೀಡುವುದು)

## ಪ್ರಧಾನಮಂತ್ರಿ ಕೃಷಿ ಸಂಚಾಯಿ ಯೋಜನೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೧೩ (೨೦೬೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಧಾನ ಮಂತ್ರಿ ಕೃಷಿ ಸಂಚಾಯಿ ಯೋಜನೆ ಅಡಿಯಲ್ಲಿ ಕೇಂದ್ರ ಸರ್ಕಾರದಿಂದ ಅನುದಾನ ರಾಜ್ಯ ಸರ್ಕಾರಕ್ಕೆ ಬರುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ಯೋಜನೆ ಪ್ರಾರಂಭವಾದಾಗಿನಿಂದ ಇದುವರೆಗೆ ಎಷ್ಟು ಹಣ ಬಿಡುಗಡೆಯಾಗಿದೆ ; ರೈತರಿಗೆ ಎಷ್ಟು ವಿತರಣೆಯಾಗಿದೆ ? (ಜಿಲ್ಲಾವಾರು ಬಿಡುಗಡೆ ಮತ್ತು ವಿತರಣೆ ವಿವರ ಒದಗಿಸುವುದು)

## ಸಾರ್ವಜನಿಕ ಉದ್ದಿಮೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೧೪ (೨೦೬೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರದಿಂದ ಸಾರ್ವಜನಿಕ ಉದ್ದಿಮೆಗಳನ್ನು ನಿರ್ವಹಿಸುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಉದ್ದಿಮೆಗಳ ಸಂಖ್ಯೆ ಎಷ್ಟು ; ಲಾಭಾಂಶದಲ್ಲಿರುವ ಉದ್ದಿಮೆಗಳು ಎಷ್ಟು ; ನಷ್ಟದಲ್ಲಿರುವ ಉದ್ದಿಮೆಗಳು ಎಷ್ಟಿವೆ ;

(ಆ) ಪ್ರತಿ ಉದ್ದಿಮೆಗಳಲ್ಲಿರುವ ನೌಕರರ ಸಂಖ್ಯೆ ಎಷ್ಟು ? (ಪೂರ್ಣ ವಿವರಗಳನ್ನು ಉದ್ದಿಮೆವಾರು ನೀಡುವುದು)

## ಕುಡಿಯುವ ನೀರಿನ ಯೋಜನೆಗಳಿಗೆ ಕೇಂದ್ರ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೧೫ (೨೧೦೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಗರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಕುಡಿಯುವ ನೀರಿನ ಯೋಜನೆಗೆ ಕೇಂದ್ರ ಸರ್ಕಾರ ಅನುದಾನ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದರೆ, ೨೦೧೩-೧೪ ರಿಂದ ಇದುವರೆವಿಗೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಂದಿರುವ ಅನುದಾನ ಎಷ್ಟು ; ಎಷ್ಟು ಶುದ್ಧ ನೀರಿನ ಘಟಕಗಳನ್ನು ೪ ವರ್ಷದಲ್ಲಿ ಪ್ರಾರಂಭಿಸಲಾಗಿದೆ ; ಎಷ್ಟು ಘಟಕಗಳು ಪೂರ್ಣಗೊಂಡಿವೆ ; ಪೂರ್ಣಗೊಂಡ ಘಟಕಗಳಲ್ಲಿ ಎಷ್ಟು ಘಟಕಗಳು ಕೆಲಸ ನಿರ್ವಹಿಸುತ್ತವೆ ; ಎಷ್ಟು ಘಟಕಗಳ ಕಾಮಗಾರಿ ಪೂರ್ಣಗೊಳ್ಳಲು ಬಾಕಿ ಇದೆ ; ಎಷ್ಟು ಘಟಕಗಳು ದುಸ್ಥಿತಿಯಲ್ಲಿವೆ ? (ಪೂರ್ಣ ವಿವರ ನೀಡುವುದು)

## ಹಾಲಿನ ಭಾಗ್ಯ ಯೋಜನೆಯ ಪ್ರೋತ್ಸಾಹ ಧನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೧೬ (೨೧೦೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಲಿನ ಭಾಗ್ಯ ಯೋಜನೆ ಅಡಿ ಸರ್ಕಾರ ರೈತರಿಗೆ ಪ್ರೋತ್ಸಾಹ ಧನ ನೀಡುತ್ತಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ೨೦೧೩-೧೪ ರಿಂದ ಇದುವರೆವಿಗೆ ಒಟ್ಟು ಎಷ್ಟು ಹಣ ಪಾವತಿಸಲಾಗಿದೆ ; ವಿತರಿಸಲು ಬಾಕಿ ಇರುವ ತಿಂಗಳುವಾರು ಹಣ ಎಷ್ಟು ?

## ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯ ಅನುದಾನದ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೧೭ (೨೦೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಅಡಿ ಕೇಂದ್ರ ಸರ್ಕಾರ ರೈತರ ಬೆಳೆ ನಷ್ಟ/ ಹಾನಿಯನ್ನು ಭರಿಸುವ ಬೆಳೆ ವಿಮೆಗೆ ರಾಜ್ಯ ಸರ್ಕಾರಕ್ಕೆ ಅನುದಾನ ನೀಡುತ್ತಿರುವುದು ನಿಜವೆ ;

(ಆ) ಹಾಗಿದ್ದರೆ ಈ ಯೋಜನೆ ಜಾರಿಗೆ ಬಂದ ಮೇಲೆ ಕೇಂದ್ರ ಸರ್ಕಾರದಿಂದ ಇದುವರೆವಿಗೆ ಬಂದಿರುವ ಅನುದಾನ ಎಷ್ಟು ; ರೈತರಿಗೆ ಬೆಳೆ ಹಾನಿ ಪರಿಹಾರ ಭರಿಸುವಲ್ಲಿ ಕೇಂದ್ರ ಸರ್ಕಾರದ ಪಾಲು ಎಷ್ಟು ; ರಾಜ್ಯ ಸರ್ಕಾರದ ಪಾಲು ಎಷ್ಟು ? (ವರ್ಷವಾರು ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರ ನೀಡಿರುವ ಅನುದಾನದ ಪೂರ್ಣ ವಿವರವನ್ನು ನೀಡುವುದು)

## ರಾಮನಗರ ಜಿಲ್ಲೆ, ಮಾಗಡಿ ಪುರಸಭೆ ವ್ಯಾಪ್ತಿಯಲ್ಲಿ ಐ.ಡಿ.ಎಸ್.ಎಂ.ಟಿ ಬಡಾವಣೆ ನಿರ್ಮಾಣ ಮಾಡಿರುವ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೧೮ (೧೯೫೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆ ಮಾಗಡಿ ಪುರಸಭೆ ವ್ಯಾಪ್ತಿಯಲ್ಲಿ ರೈತರಿಂದ ಜಮೀನು ಪಡೆದು ೧೯೮೪–೮೫ನೇ ಸಾಲಿನಲ್ಲಿ ಐ.ಡಿ.ಎಸ್.ಎಂ.ಟಿ ಬಡಾವಣೆ ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಲ್ಲಿ ಎಷ್ಟು ನಿವೇಶನಗಳನ್ನು ಯಾವ ಯಾವ ಅಳತೆಗಳಲ್ಲಿ ನಿವೇಶನಗಳನ್ನು ನಿರ್ಮಾಣ ಮಾಡಲಾಗಿದೆ ;

(ಇ) ೫೧ ಮೂಲೆ ನಿವೇಶನಗಳನ್ನು ಹರಾಜಿನಲ್ಲಿ ಹಂಚಿಕೆ ಮಾಡಲಾಗಿದ್ದು, ಹಾಗೂ ಕಡುಬಡವರಿಗೆ ೨೦X೩೦ ಅಳತೆಯ ೧೧೬ ನಿವೇಶನಗಳನ್ನು ₹. ೪.೫೦೦ ರಂತೆ ನಿವೇಶನಕ್ಕೆ ಹಣ

ಕಟ್ಟಿಸಿಕೊಂಡು ಹಂಚಿಕೆ ಮಾಡಿದ್ದು, ಇನ್ನೂ ಉಳಿಕೆ ೨೦೦–೨೫೦ ನಿವೇಶನಗಳನ್ನು ೪೦X೬೦ ಮತ್ತು ೩೦X೪೦ ಹಂಚಿಕೆ ಮಾಡದೇ ಉಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ನಿವೇಶನಗಳನ್ನು ನಿರ್ಮಾಣ ಮಾಡಿ ೩೦ ವರ್ಷಗಳು ಕಳೆದರೂ ಇಲ್ಲಿಯವರೆಗೂ ನಿವೇಶನಗಳನ್ನು ಉಳಿಸಿಕೊಂಡು ಬಂದಿದ್ದು, ಇನ್ನಾದರೂ ಸರ್ಕಾರ ಉಳಿಕೆ ನಿವೇಶನಗಳನ್ನು ಹಂಚಿಕೆ ಮಾಡಲು ಕ್ರಮ ಕೈಗೊಳ್ಳುವುದೇ ?

## ಗುತ್ತಿಗೆ ವಾಹನಗಳ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೯ (೨೦೬೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಸರ್ಕಾರಿ/ಖಾಸಗಿ ಗುತ್ತಿಗೆಯಾಗಿ ಬಳಸುತ್ತಿರುವ ವಾಹನಗಳ ಸಂಖ್ಯೆಗಳೆಷ್ಟು ; (ತಾಲ್ಲೂಕುವಾರು, ಕಛೇರಿವಾರು ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಸರ್ಕಾರದ ನಿಯಮದಂತೆ ಈ ವಾಹನಗಳನ್ನು ಬಳಸುತ್ತಿರುವ ಅಧಿಕಾರಿ/ನೌಕರರುಗಳ ಸ್ಪಷ್ಟ ಮಾಹಿತಿ ಒದಗಿಸುವುದು ;

(ಇ) ಕೆ.ಟಿ.ಪಿ.ಪಿ ಕಾಯ್ದೆ ೨೦೦೫ರ ಪ್ರಕಾರ ಟೆಂಡರ್ ಕರೆದು, ಗುತ್ತಿಗೆದಾರರಿಗೆ ಸರಬರಾಜು ಆದೇಶ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಅವುಗಳನ್ನು ದೃಢೀಕರಿಸಿದ ಪ್ರತಿಗಳನ್ನು ಒದಗಿಸುವುದು ;

(ಈ) ಅಧಿಕಾರಿ/ನೌಕರರು ಗುತ್ತಿಗೆ ವಾಹನಗಳನ್ನು ಉಪಯೋಗಿಸುತ್ತಿದ್ದಲ್ಲಿ ಆಯಾ ವಾಹನಗಳ ಏಜೆನ್ಸಿ ಮಾಲೀಕರ ಪೂರ್ಣ ವಿಳಾಸ

ಹಾಗೂ ಮಾಲೀಕರ ಭಾವಚಿತ್ತ, ವಾಹನಗಳ ಅಂಕಿ ಸಂಖ್ಯೆಗಳೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು ;

(ಉ) ಈ ಸರ್ಕಾರಿ / ಗುತ್ತಿಗೆ ವಾಹನಗಳು ಯಾವ ಯಾವ ಕೆಲಸಗಳಿಗೆ ಉಪಯೋಗಿಸಿಕೊಳ್ಳಲಾಗುತ್ತಿದೆ. ಹಾಗೂ ಸದರಿ ವಾಹನಗಳ ಚಾಲಕರು/ಖಾಯಂ/ಗುತ್ತಿಗೆ ನೌಕರರಾಗಿದ್ದರೆಯೇ ; ಗುತ್ತಿಗೆ ನೌಕರರಾಗಿದ್ದಲ್ಲಿ, ಅವರಿಗೆ ಮಾಸಿಕವಾಗಿ ಪಾವತಿಸುತ್ತಿರುವ ಗೌರವಧನವನ್ನು ಯಾವ ಯಾವ ಲೆಕ್ಕಶೀರ್ಷಿಕೆ ಅಡಿಯಲ್ಲಿ ಎಷ್ಟು ಪಾವತಿಸಲಾಗುತ್ತಿದೆ ? ಮಾಸಿಕವಾರು ವಿವರವಾದ ಪಟ್ಟಿಯೊಂದಿಗೆ ಮಾಹಿತಿ ನೀಡುವುದು)

## ಲೋಕೋಪಯೋಗಿ ಇಲಾಖೆಯಿಂದ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೨೦ (೨೦೨೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಈ ಪೈಕಿ ಖರ್ಚು ಮಾಡಲಾದ ಹಣವೆಷ್ಟು ; (ತಾಲ್ಲೂಕುವಾರು, ವರ್ಷಾವಾರು ಸ್ಪಷ್ಟ ಮಾಹಿತಿಯೊಂದಿಗೆ ವಿವರ ನೀಡುವುದು)

(ಆ) ಈ ಅನುದಾನದಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳಾವುವು ; (ಕಾಮಗಾರಿಗಳ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆಗೂ ಪೂರ್ಣಗೊಂಡಿರುವ ಮತ್ತು

ಅಪೂರ್ಣಗೊಂಡಿರುವ ಕಾಮಗಾರಿಗಳಾವುವು ; (ವರ್ಷಾವಾರು, ಕಾಮಗಾರಿಗಳವಾರು ಸಂಪೂರ್ಣ ಮಾಹಿತಿ ಒದಗಿಸುವುದು)

(ಈ) ಈ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಇರುವ ಕಾಲಮಿತಿ ಏನು ? (ಸ್ಪಷ್ಟ ಮಾಹಿತಿ ನೀಡುವುದು)

## ಜಿಲ್ಲೆಯಲ್ಲಿರುವ ಕೃಷಿ ಭೂಮಿ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೨೧ (೨೦೧೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಕೃಷಿ ಭೂಮಿಯ ವಿಸ್ತೀರ್ಣವೆಷ್ಟು ;

(ಆ) ಜಿಲ್ಲೆಯಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರದೇಶಗಳಲ್ಲಿ (ಹೆಕ್ಟೇರ್‌ಗಳಲ್ಲಿ) ಬೆಳೆಯಲಾಗುತ್ತಿದೆ ; (೨೦೧೦ ರಿಂದ ಇಲ್ಲಿಯವರೆಗೆ ಸ್ಪಷ್ಟ ಮಾಹಿತಿಯ ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ವರ್ಷದಿಂದ ವರ್ಷಕ್ಕೆ ಕೃಷಿ ಭೂಮಿ ವಿಸ್ತೀರ್ಣ ಕಡಿಮೆಯಾಗುತ್ತಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ; (ಮಾಹಿತಿ ಒದಗಿಸುವುದು)

(ಈ) ಕೃಷಿ ಭೂಮಿಯ ವಿಸ್ತೀರ್ಣವನ್ನು ಹೆಚ್ಚಿಸಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ? (ಮಾಹಿತಿ ಒದಗಿಸುವುದು)

## ಸರ್ಕಾರಿ ಸ್ವತ್ತುಗಳನ್ನು ಗುತ್ತಿಗೆ ನೀಡಿರುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೨೨ (೨೦೧೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ನಗರ / ಸ್ಥಳೀಯ ಸಂಸ್ಥೆಗಳಲ್ಲಿ ಸರ್ಕಾರಿ ಬೆಲೆ ಬಾಳುವ ಎಷ್ಟು ಸ್ವತ್ತುಗಳನ್ನು ಖಾಲಿ ನಿವೇಶನ ಹಾಗೂ ಕಟ್ಟಡ ಸೇರಿದಂತೆ ಇದುವರೆಗೂ ಗುತ್ತಿಗೆ ಆಧಾರದ ಮೇಲೆ ನೀಡಲಾಗಿದೆ ;

(ಆ) ಈ ಸ್ವತ್ತುಗಳನ್ನು ಯಾರಿಗೆ ಹಾಗೂ ಎಷ್ಟು ಅವಧಿಗೆ ಗುತ್ತಿಗೆ ನೀಡಲಾಗಿದೆ ; (ವಿಳಾಸ ಮತ್ತು ಅಳತೆಯೊಂದಿಗೆ ಸ್ಪಷ್ಟ ಮಾಹಿತಿ ನೀಡುವುದು)

(ಇ) ಸ್ವತ್ತುಗಳನ್ನು ಗುತ್ತಿಗೆ ನೀಡಿದ್ದಲ್ಲಿ, ಯಾವ ಯಾವ ವರ್ಷದಲ್ಲಿ ನೀಡಲಾಗಿತ್ತು ; ಹಾಗೂ ಗುತ್ತಿಗೆ ಉದ್ದೇಶ ಮತ್ತು ಗುತ್ತಿಗೆಗೆ ನೀಡುತ್ತಿರುವ ವಾರ್ಷಿಕ ಅಥವಾ ಮಾಸಿಕ ಹಣ ಎಷ್ಟು ; ಹಾಗೂ ಗುತ್ತಿಗೆ ಅವಧಿ ಎಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಈ) ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸರ್ಕಾರಿ ಸ್ವತ್ತುಗಳ ಗುತ್ತಿಗೆ ಅವಧಿ ಮುಗಿದಿದ್ದರೂ ಸಹ, ಮರಳಿ ಸರ್ಕಾರದ ವಶಕ್ಕೆ ನೀಡದೆ ಇರುವ ಪ್ರಕರಣಗಳೆಷ್ಟು ; ಅವುಗಳು ಯಾವುವು ; (ಗುತ್ತಿಗೆದಾರರ ಹೆಸರು, ವಿಳಾಸ, ಸ್ವತ್ತಿನ ವಿಳಾಸದೊಂದಿಗೆ ವಿವರ ನೀಡುವುದು)

(ಉ) ಈ ಸರ್ಕಾರಿ ಸ್ವತ್ತುಗಳನ್ನು ಯಾವ ಯಾವ ಉದ್ದೇಶಕ್ಕಾಗಿ ಗುತ್ತಿಗೆ ಆಧಾರದಲ್ಲಿ ನೀಡಲಾಗುತ್ತಿದೆ ; ಅರ್ಜಿ ಸಲ್ಲಿಸಲು ಇರುವ ಅರ್ಹತೆಗಳೇನು ; ಆ ಪೈಕಿ, ಆಯ್ಕೆ ಮಾಡಲು ಅನುಸರಿಸುವ ಮಾನದಂಡಗಳೇನು ? (ವಿವರವಾದ ಮಾಹಿತಿ ನೀಡುವುದು)

## ಪಶುಸಂಗೋಪನೆ ಯೋಜನೆಗಳ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೨೩ (೨೦೧೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನಾ ಇಲಾಖೆಯಲ್ಲಿರುವ ವಿವಿಧ ಯೋಜನೆಗಳು ಯಾವುವು ;

(ಆ) ರಾಜ್ಯ / ಕೇಂದ್ರ ಸರ್ಕಾರದ ಯೋಜನೆಗಳು ಯಾವುವು ; ಈ ಯೋಜನೆಗಳನ್ನು ಪಡೆಯಲು ಫಲಾನುಭವಿಗಳು ಅನುಸರಿಸಬೇಕಾದ ಮಾನದಂಡಗಳೇನು ; (ಯೋಜನೆಗಳವಾರು ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಆಯವ್ಯಯದ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ? (ಬೀದರ್ ಜಿಲ್ಲೆಯ ತಾಲ್ಲೂಕುವಾರು ಮತ್ತು ಯೋಜನಾವಾರು, ಫಲಾನುಭವಿಗಳವಾರು ಸಂಪೂರ್ಣ ಮಾಹಿತಿ ಒದಗಿಸುವುದು)

## ದೃಢೀಕೃತವಲ್ಲದ ಕಳಪೆ ಮಟ್ಟದ ಹಾಗೂ ಕಲಬೆರಕೆ ಆಲೂಗಡ್ಡೆ ಬೀಜ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೨೨೪ (೨೦೩೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ದೃಢೀಕೃತವಲ್ಲದ ಆಲೂಗಡ್ಡೆ ಬೀಜವನ್ನು ಮಾರಾಟ ಮಾಡುವುದು, ವರ್ತಕರುಗಳು ರೈತರಿಗೆ ರಸೀದಿ ನೀಡದೆ ಮಾರಾಟ ಮಾಡುವುದು, ಕಲಬೆರಕೆ ಆಲೂಗಡ್ಡೆ ಬೀಜವನ್ನು ನೀಡುವುದು ಮುಂತಾದ ಆರೋಪಗಳು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ವಿದ್ಯುತ್ ನಿಗಮವು ನಷ್ಟದಲ್ಲಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೨೨೫ (೨೦೩೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಗೃಹ ಬಳಕೆ ಹಾಗೂ ಕೈಗಾರಿಕೆಗಳಿಗೆ ಯಾವ ದರದಲ್ಲಿ ವಿದ್ಯುತ್ ಪೂರೈಕೆ ಮಾಡಲಾಗುತ್ತಿದೆ ; ಮೂರು ವರ್ಷಗಳಿಂದ ಯಾವ ಯಾವ ಪ್ರಮಾಣದಲ್ಲಿ ವಿದ್ಯುತ್ ದರವನ್ನು ಹೆಚ್ಚಿಸಲಾಗಿದೆ ; (ವಿವರ ನೀಡುವುದು)

(ಆ) ಪ್ರಸ್ತುತ ವಿದ್ಯುತ್ ನಿಗಮವು ನಷ್ಟದಲ್ಲಿರುವುದು ನಿಜವೇ ; ಅಥವಾ ಆದಾಯ ಕೊರತೆ ಉಂಟಾಗಿದೆಯೇ ; (ವಿವರ ನೀಡುವುದು)

(ಇ) ನಷ್ಟವುಂಟಾಗಿದ್ದಲ್ಲಿ, ನಷ್ಟವನ್ನು ಅಥವಾ ಆದಾಯ ಕೊರತೆಯನ್ನು ಹೇಗೆ ಭರಿಸಲಾಗುವುದು ? (ವಿವರ ನೀಡುವುದು)

## ರೇಷ್ಮೆ ಮಾರುಕಟ್ಟೆಯಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೨೨೬ (೨೦೩೪) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇವನಹಳ್ಳಿ ತಾಲ್ಲೂಕು, ವಿಜಯಪುರದಲ್ಲಿ ರೇಷ್ಮೆಗೂಡು ಮಾರುಕಟ್ಟೆ ಇರುವುದು ನಿಜವೇ ;

(ಆ) ಇಲ್ಲಿ ಎಷ್ಟು ಜನ ರೈತರು ಮಾರುಕಟ್ಟೆಯ ಪ್ರಯೋಜನ ಪಡೆಯುತ್ತಾರೆ ;

(ಇ) ಸದರಿ ರೇಷ್ಮೆಗೂಡು ಮಾರುಕಟ್ಟೆಗೆ ಬರುವ ರೈತರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ರೈತರು ಮಧ್ಯಾಹ್ನದ ಭೋಜನ ಸೇವಿಸಲು ಸ್ಥಳದ ವ್ಯವಸ್ಥೆ ಹಾಗೂ ಶೌಚಾಲಯದ ವ್ಯವಸ್ಥೆ ಕಲ್ಪಿಸಲಾಗಿದೆಯೇ ; (ವಿವರ ನೀಡುವುದು)

(ಈ) ಸದರಿ ಮೂಲಭೂತ ಸೌಕರ್ಯಗಳ ಸಮರ್ಪಕ ವ್ಯವಸ್ಥೆ ಮತ್ತು ನಿರ್ವಹಣೆಗೆ ಸರ್ಕಾರ ಮುಂದಾಗುವುದೇ ?

## ಪಶು ಆಸ್ಪತ್ರೆಗಳಲ್ಲಿ ಜಾನುವಾರುಗಳಿಗೆ ಕುಡಿಯಲು ನೀರಿನ ತೊಟ್ಟಿಯನ್ನು ನಿರ್ಮಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೨೨೨೭ (೨೦೩೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪಶು ಆಸ್ಪತ್ರೆಗಳಿವೆ ;

(ಆ) ಎಷ್ಟು ಪಶು ಆಸ್ಪತ್ರೆಗಳಲ್ಲಿ ಹಸು ಕರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಇದೆ ;

(ಇ) ಎಷ್ಟು ಆಸ್ಪತ್ರೆಗಳ ಮುಂದೆ ಹಸುಗಳಿಗೆ ಕುಡಿಯಲು ನೀರಿನ ತೊಟ್ಟಿಗಳನ್ನು ಕಟ್ಟಿಸಲಾಗಿದೆ ?

## ಕೇಂದ್ರಿಯ ರಸ್ತೆ ನಿಧಿಯಿಂದ ಹಣ ಬಿಡುಗಡೆ ಆಗಿರುವ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):–**

೨೨೨೮ (೨೧೧೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ೨೦೧೪-೧೫, ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಕೇಂದ್ರಿಯ ರಸ್ತೆ ನಿಧಿಯಿಂದ ಕರ್ನಾಟಕ ರಾಜ್ಯ

ಸರ್ಕಾರವು ಎಷ್ಟು ಹಣವನ್ನು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತದೆ ; ಈ ಸಾಲಿನಲ್ಲಿ ಎಷ್ಟು ಹಣ ಬಿಡುಗಡೆಯಾಗಿರುತ್ತದೆ ;

(ಆ) ಕರ್ನಾಟಕ ಲೋಕೋಪಯೋಗಿ ಇಲಾಖೆಯು ೨೦೧೪-೧೫, ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿಗೆ ರಸ್ತೆ ನಿರ್ವಹಣೆಯ ಯೋಜನಾ ವರದಿಯನ್ನು ತಯಾರಿಸಿದೆಯೇ ;

(ಇ) ರಾಜ್ಯ ಲೋಕೋಪಯೋಗಿ ಇಲಾಖೆಯಲ್ಲಿ ಕರ್ನಾಟಕ ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳ, ರಾಜ್ಯ ಹೆದ್ದಾರಿಗಳ, ಜಿಲ್ಲಾ ರಸ್ತೆಗಳ, ಸೇತುವೆಗಳ ಹಾಗೂ ನಷ್ಟವಾದ ಸೇತುವೆಗಳ ರಸ್ತೆಯ ಇತಿಹಾಸ ಮತ್ತು ಪ್ರಸ್ತುತ ಸ್ಥಿತಿಯ ವರದಿ ಸಿದ್ಧವಿದೆಯೇ ;

(ಈ) ಲೋಕೋಪಯೋಗಿ ಇಲಾಖೆಯು ಮೂರು ವರ್ಷಗಳಲ್ಲಿ ಕೇಂದ್ರಿಯ ರಸ್ತೆ ನಿಧಿ ನಿಯಮಗಳಡಿ ರಾಜ್ಯದ ಎಷ್ಟು ರಸ್ತೆಗಳಲ್ಲಿ ಸುಧಾರಣಾ ಕಾಮಗಾರಿಗಳನ್ನು ಕೈಗೊಂಡಿರುತ್ತದೆ ; ಇವುಗಳ ಮೇಲೆ ವರ್ಷಾವಾರು ಕಾಮಗಾರಿಗೆ ಖರ್ಚು ಮಾಡಿರುವ ಹಣವೆಷ್ಟು ;

(ಉ) ಕೇಂದ್ರಿಯ ರಸ್ತೆ ನಿಧಿ ಹಣದಲ್ಲಿ ರಾಜ್ಯ ಸರ್ಕಾರವು ತುಮಕೂರು ಜಿಲ್ಲೆಯಲ್ಲಿ ೨೦೧೪-೧೫, ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಂಡಿರುತ್ತದೆ ಮತ್ತು ಖರ್ಚು ಮಾಡಿರುವ ಒಟ್ಟು ಹಣವೆಷ್ಟು ?

## ವಾಣಿಜ್ಯ ಬೆಳೆ ಬೆಳೆಯುತ್ತಿರುವ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ):-**

೨೨೨೯ (೨೧೨೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಎಷ್ಟು ವಾಣಿಜ್ಯ ಬೆಳೆಗಳನ್ನು ಎಷ್ಟು ಹೆಕ್ಟೇರ್‌ಗಳಲ್ಲಿ ಬೆಳೆಯಲಾಗುತ್ತಿದೆ ; ರಾಜ್ಯದಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ತಾಳೆ ಎಣ್ಣೆ ವ್ಯವಸಾಯ ಮಾಡಲಾಗುತ್ತಿದೆ ;

(ಆ) ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನದಡಿಯಲ್ಲಿ ಕಳೆದ ಸಾಲಿನಲ್ಲಿ ಬಿಡುಗಡೆಯಾಗಿರುವ ಜಿಲ್ಲಾವಾರು ಹಣವೆಷ್ಟು ; ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿಗೆ ಈ ಯೋಜನೆಯಡಿ ಒಟ್ಟು ಎಷ್ಟು ಹಣ ಬಿಡುಗಡೆಯಾಗಿದೆ ; ಬಿಡುಗಡೆಯಾಗಿದ್ದಲ್ಲಿ, ಫಲಾನುಭವಿಗಳ ಮಾಹಿತಿ ನೀಡುವುದು ;

(ಇ) ತುಮಕೂರು ಜಿಲ್ಲೆಯಲ್ಲಿ ಕಪ್ಪು ತಲೆ ಹುಳ ಮತ್ತು ನುಸಿ ರೋಗದ ನಿಯಂತ್ರಣಕ್ಕೆ ಕಳೆದ ಸಾಲಿನಲ್ಲಿ ತೋಟಗಾರಿಕೆ ಇಲಾಖೆ ಎಷ್ಟು ಹಣ ಖರ್ಚು ಮಾಡಿರುತ್ತದೆ ;

(ಈ) ಬರಗಾಲದಿಂದ ತೆಂಗಿನ ಮರ ಹಾಗೂ ಅಡಿಕೆ ಮರಗಳನ್ನು ಕಳೆದುಕೊಂಡಿರುವ ರಾಜ್ಯದ ರೈತರಿಗೆ ಪರಿಹಾರ ನೀಡಲಾಗಿದೆಯೇ ; ನೀಡಿದ್ದಲ್ಲಿ, ಒಟ್ಟು ಎಷ್ಟು ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ ಮತ್ತು ಪ್ರತಿ ಮರಕ್ಕೆ ಎಷ್ಟು ಹಣ ಸಹಾಯಧನವಾಗಿ ನೀಡಲಾಗಿದೆ ;

(ಉ) ಬರಗಾಲದ ಹಿನ್ನೆಲೆಯಲ್ಲಿ ಮಾನ್ಯ ತೋಟಗಾರಿಕಾ ಸಚಿವರು ರಾಜ್ಯದ ಎಷ್ಟು ಜಿಲ್ಲೆಯಲ್ಲಿ ರೈತರ ತೋಟಗಳಿಗೆ ಯಾವ ಯಾವ ದಿನಾಂಕದಂದು ಭೇಟಿ ನೀಡಿರುತ್ತಾರೆ ;

(ಊ) ಸರ್ಕಾರವು ತೋಟಗಾರಿಕೆ ಮತ್ತು ತರಕಾರಿ ಬೆಳೆಗಾರ ಸಂರಕ್ಷಣೆಗೆ ಯಾವ ಯಾವ ಯೋಜನೆಗಳನ್ನು ಕೈಗೊಂಡಿರುತ್ತದೆ ?

## ಪಶು ಆರೋಗ್ಯ ಮತ್ತು ವಿಸ್ತರಣಾ ಯೋಜನೆಯಡಿ ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೩೦ (೨೧೨೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪಶು ಆರೋಗ್ಯ ಮತ್ತು ವಿಸ್ತರಣಾ ಯೋಜನೆಯಡಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು ಎಷ್ಟು ಅನುದಾನ ಜಿಲ್ಲಾವಾರು ಬಿಡುಗಡೆ ಮಾಡಲಾಗಿರುತ್ತದೆ ; ಸದರಿ ಅನುದಾನವನ್ನು ಯೋಜನೆಯ ಅನುಷ್ಠಾನಕ್ಕೆ ಮಾತ್ರ ಬಳಸಿಕೊಳ್ಳಲಾಗಿದೆಯೇ ;

(ಆ) ಪಶುಸಂಗೋಪನಾ ಇಲಾಖೆಯಲ್ಲಿ ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ಒಟ್ಟು ಎಷ್ಟು ಯೋಜನೆಗಳನ್ನು ಜಾರಿಗೊಳಿಸಲಾಗಿದೆ ಮತ್ತು ಈ ಯೋಜನೆಗಳಲ್ಲಿ ಒಟ್ಟು ಎಷ್ಟು ಯೋಜನೆಗಳು ಪೂರ್ಣಗೊಂಡಿರುತ್ತವೆ ;

(ಇ) ಪಶುಸಂಗೋಪನಾ ಇಲಾಖೆಯಲ್ಲಿ ರೈತರ ಮನೆ ಬಾಗಿಲ ಬಳಿ ಪ್ರಾಣಿಗಳಿಗೆ ಚಿಕಿತ್ಸೆ ನೀಡುವ ಸಂಚಾರಿ ಪಶು ಚಿಕಿತ್ಸಾ ಯೋಜನೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು ಎಷ್ಟು ಜೀಪುಗಳನ್ನು ಖರೀದಿಸಲಾಗಿದೆ ; ಇವುಗಳ ದುರುಪಯೋಗವಾಗಿದೆಯೇ ; ಹಾಗಿದ್ದಲ್ಲಿ, ಮಾಹಿತಿ ನೀಡುವುದು;

(ಈ) ಪಶುಸಂಗೋಪನಾ ಇಲಾಖೆಯಲ್ಲಿ ಲ್ಯಾಬ್ ತೆರೆಯಲು ಹಾಗೂ ಉಪಕರಣ ಸರಬರಾಜಿಗಾಗಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು ಎಷ್ಟು ಟೆಂಡರ್‌ಗಳನ್ನು ಕರೆಯಲಾಗಿದೆ ; ಗುತ್ತಿಗೆದಾರರಿಗೆ ಒಟ್ಟು ಎಷ್ಟು ಮೊತ್ತ ಬಿಡುಗಡೆ ಮಾಡಲಾಗಿದೆ ; ಈ ಯೋಜನೆಯಲ್ಲಿ ಇಲಾಖೆಗೆ ಕಳೆದ ಮೂರು ವರ್ಷಗಳಲ್ಲಿ ಆಗಿರುವ ನಷ್ಟ ಎಷ್ಟು?

## ಕೃಷಿ ಯೋಜನೆಗಳನ್ನು ರೂಪಿಸುವ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :–**

೨೨೩೧ (೨೧೨೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಿಲ್ಲಾ ಕೃಷಿ ಯೋಜನೆಗಳನ್ನು ರೂಪಿಸಲಾಗಿದೆಯೇ ; ರೂಪಿಸಿದ್ದಲ್ಲಿ, ಎಷ್ಟು ಜಿಲ್ಲೆಗಳಲ್ಲಿ ಜಿಲ್ಲಾ ಕೃಷಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ;

(ಆ) ರಾಜ್ಯ ಸರ್ಕಾರದ ಕೃಷಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಲ್ಲಿ ಕಳೆದ ಸಾಲಿನಲ್ಲಿ ಎಷ್ಟು ಸಭೆಗಳನ್ನು ನಡೆಸಲಾಗಿದೆ ; ಸಭೆಗಳನ್ನು ನಡೆಸಿದ್ದಲ್ಲಿ, ಸಭೆಯ ತೀರ್ಮಾನಗಳನ್ನು ಅನುಷ್ಠಾನಗೊಳಿಸಲಾಗಿದೆಯೇ ;

(ಇ) ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಧಾರವಾಡ ಕೃಷಿ ವಿಶ್ವವಿದ್ಯಾನಿಲಯ ಹಾಗೂ ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನ ವಿಶ್ವವಿದ್ಯಾನಿಲಯಗಳು ರಾಜ್ಯ ಸರ್ಕಾರದ ಯೋಜನಾ ಹಣವನ್ನು ಉಳಿತಾಯ ಖಾತೆಯ ಬದಲಾಗಿ ಚಾಲ್ತಿ ಖಾತೆಗಳಲ್ಲಿ ನಿರ್ವಹಣೆ ಮಾಡಿ ನಷ್ಟವುಂಟಾಗಿದೆಯೇ ; ಉಂಟಾಗಿದ್ದಲ್ಲಿ, ತಪ್ಪಿತಸ್ಥರ ಮೇಲೆ ಕ್ರಮ ಜರುಗಿಸಲಾಗಿದೆಯೇ ;

(ಈ) ಕೃಷಿ ಇಲಾಖೆಯು ೨೦೧೪–೧೫ ಮತ್ತು ೨೦೧೫–೧೬ನೇ ಸಾಲಿನಲ್ಲಿ ತುಮಕೂರು ಜಿಲ್ಲೆಯಲ್ಲಿ ಭೂಸಾರ ಮತ್ತು ಜನ ಸಂರಕ್ಷಣೆಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ ; (ತುಮಕೂರು ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು)

(ಉ) ಪ್ರಸಕ್ತ ಸಾಲಿನಲ್ಲಿ ತುಮಕೂರು ಜಿಲ್ಲೆಯ ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕೃಷಿ ಇಲಾಖೆಯು ಎಷ್ಟು ರೈತರಿಗೆ ಬರ ಪರಿಹಾರ ವಿತರಣೆ ಮಾಡಲಾಗಿದೆ ; (ಫಲಾನುಭವಿಗಳ ಮಾಹಿತಿಯನ್ನು ನೀಡುವುದು)

(ಊ) ೨೦೧೬-೧೭ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಕೃಷಿ ಭಾಗ್ಯದಡಿಯಲ್ಲಿ ಒಟ್ಟು ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಕೃಷಿ ಭಾಗ್ಯದ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ?

## ಪೌರ ಕಾರ್ಮಿಕರ ಗೃಹ ಭಾಗ್ಯ ಯೋಜನೆಗಾಗಿ ಹಣ ಬಿಡುಗಡೆ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) :-**

೨೨೩೨ (೨೧೧೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪೌರ ಕಾರ್ಮಿಕರ ಗೃಹ ಭಾಗ್ಯ ಯೋಜನೆಯಡಿಯಲ್ಲಿ ತುಮಕೂರು ಜಿಲ್ಲೆಗೆ ತಾಲ್ಲೂಕುವಾರು ಒಟ್ಟು ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ; ಈ ಜಿಲ್ಲೆಯ ಚಿಕ್ಕನಾಯಕನಹಳ್ಳಿ ಪುರಸಭೆಯಲ್ಲಿ ಎಷ್ಟು ಪೌರ ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದಾರೆ ;

(ಆ) ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆಯಡಿಯಲ್ಲಿ ರಾಜ್ಯದ ಪ್ರತಿ ಜಿಲ್ಲೆಗೆ ಹಂಚಿಕೆಯಾಗಿರುವ ಹಣವೆಷ್ಟು ;

(ಇ) ರಾಜೀವ್ ಆವಾಜ್ ಯೋಜನೆಯಡಿಯಲ್ಲಿ ಕಳೆದ ಸಾಲಿನಲ್ಲಿ ಜಿಲ್ಲಾವಾರು ನಗರ ಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಒಟ್ಟು ಎಷ್ಟು ನಿವೇಶನ ಮತ್ತು ಮನೆಗಳನ್ನು ಹಂಚಿಕೆ ಮಾಡಲಾಗಿರುತ್ತದೆ ;

(ಈ) ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಖಾಸಗಿ ವಸತಿ ಲೇಔಟ್‌ಗಳನ್ನು ರಚನೆ ಮಾಡಿದಾಗ ಸದರಿ ರಸ್ತೆಗಳನ್ನು ಯಾರು ಅಭಿವೃದ್ಧಿ ಪಡಿಸಬೇಕು ; ಖಾಸಗಿ ಲೇಔಟ್‌ಗಳಲ್ಲಿರುವ ರಸ್ತೆಯನ್ನು ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದ ಹೆಸರಿನಲ್ಲಿ ನೋಂದಣಿ ಮಾಡಬೇಕೆ ?

## ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೩೩ (೨೧೩೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಈ ವರ್ಷ ರಾಜ್ಯದಲ್ಲಿ ಎಷ್ಟು ಮೆಗಾವ್ಯಾಟ್ ವಿದ್ಯುತ್ ಬೇಡಿಕೆಯಿದೆ; ಎಲ್ಲೆಲ್ಲಿ ಎಷ್ಟು ಮೆಗಾವ್ಯಾಟ್ ವಿದ್ಯುತ್‌ನ್ನು ಉತ್ಪಾದಿಸಲಾಗುತ್ತಿದೆ;

(ಆ) ರಾಜ್ಯದ ಯಾವ ಯಾವ ಭಾಗದಿಂದ ಮತ್ತು ಮೂಲದಿಂದ ಎಷ್ಟೆಷ್ಟು ವಿದ್ಯುತ್‌ನ್ನು ಉತ್ಪಾದನೆ ಮಾಡಲಾಗುತ್ತದೆ ; (ಪೂರ್ಣ ವಿವರ ನೀಡುವುದು)

(ಇ) ಸೋಲಾರ್ ಪಾರ್ಕ್ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ ; ಅವುಗಳಿಗಾಗಿ ಎಷ್ಟು ಹಣವನ್ನು ಮೀಸಲಿರಿಸಲಾಗಿದೆ ; ಅದರಲ್ಲಿ ಎಷ್ಟು ಖರ್ಚು ಮಾಡಲಾಗಿದೆ ; ಹಾಗೂ ಈವರೆಗಿನ ಪ್ರಗತಿ ಏನು ? (ವಿವರ ನೀಡುವುದು)

## ತ್ಯಾಜ್ಯದಿಂದ ಉತ್ಪಾದಿಸಿದ ಗೊಬ್ಬರ ವಿತರಣೆ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೩೪ (೨೧೩೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸಂಗ್ರಹವಾಗುತ್ತಿರುವ ತ್ಯಾಜ್ಯದಿಂದ ಗೊಬ್ಬರ ತಯಾರಿಸಲಾಗುತ್ತಿದ್ದು, ಗೊಬ್ಬರ ಪಡೆಯಲು ಈವರೆಗೆ ರೈತ ಸಂಪರ್ಕ ಕೇಂದ್ರಗಳಲ್ಲಿ ಎಷ್ಟು ರೈತರು ಹೆಸರು ನೋಂದಣಿ ಮಾಡಿಸಿರುತ್ತಾರೆ ;

(ಆ) ೨೦೧೩ರಿಂದ ಈವರೆಗೆ ಎಷ್ಟು ಹಸಿ ಗೊಬ್ಬರವನ್ನು ವಿತರಿಸಲಾಗಿದೆ; ಅದಕ್ಕೆ ನಿಗಧಿಪಡಿಸಿದ ದರವೆಷ್ಟು ; ಹಾಗೂ ಸರಬರಾಜಿನ ಬಗ್ಗೆ ಪೂರ್ಣ ವಿವರ ನೀಡುವುದು ;

(ಇ) ಸಾವಯುವ ಗೊಬ್ಬರದ ಪ್ರಯೋಜನವನ್ನು ಹೆಚ್ಚು ರೈತರು ಪಡೆಯುವಂತಾಗಲು ಸರ್ಕಾರ ಕೈಗೊಂಡಿರುವ ಸುಧಾರಣಾ ಕ್ರಮಗಳಾವುವು ;

(ಈ) ನೋಂದಣಿ ಮಾಡಿಕೊಂಡಂತಹ ರೈತರಿಗೆ ಹಸಿ ಕಸದಿಂದ ಉತ್ಪಾದಿಸಿದ ಗೊಬ್ಬರವನ್ನು ಪಡೆಯಲು ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ? (ವಿವರ ನೀಡುವುದು)

## ಹಾಪ್‌ಕಾಮ್ಸ್‌ನಲ್ಲಿ ಮಾರಾಟ ಮಾಡಲಾಗುತ್ತಿರುವ ಹಣ್ಣುಗಳನ್ನು ಮಾಗಿಸಲು ರಾಸಾಯನಿಕಗಳನ್ನು ಬಳಸುತ್ತಿರುವ ಬಗ್ಗೆ

**ಶ್ರೀ ಎಂ.ಪಿ.ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೩೫ (೧೯೦೬) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇಲಾಖೆಯ ಅಂಗ ಸಂಸ್ಥೆಯಾದ ಹಾಪ್‌ಕಾಮ್ಸ್‌ನಲ್ಲಿ ಮಾರಾಟ ಮಾಡುವ ಹಣ್ಣುಗಳ ಗುಣಮಟ್ಟಕ್ಕೆ ಕೈಗೊಂಡಿರುವ ಕ್ರಮಗಳೇನು;

(ಆ) ಹಾಪ್‌ಕಾಮ್ಸ್‌ನಲ್ಲಿ ಮಾರಾಟ ಮಾಡಲಾಗುತ್ತಿರುವ ಮಾವಿನ ಹಣ್ಣುಗಳನ್ನು ಮಾಗಿಸಲು ರಾಸಾಯನಿಕಗಳನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಯಲು ಕೈಗೊಂಡ ಕ್ರಮಗಳೇನು ;

(ಇ) ಸರ್ಕಾರಿ ಸಂಸ್ಥೆಯಾದ ಹಾಪ್‌ಕಾಮ್ಸ್‌ನಲ್ಲಿಯೇ ಗುಣಮಟ್ಟದ ಹಣ್ಣುಗಳನ್ನು ನೀಡದಿರುವುದು ಸಂಸ್ಥೆಯ ಮೇಲಿನ ಗೌರವಕ್ಕೆ ಚುಕ್ಕೆಯಲ್ಲವೇ ಈ ರೀತಿಯ ಗ್ರಾಹಕರ ನಂಬಿಕೆಯನ್ನು ಹಾಳುಗೆಡವಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ಕೃಷಿ ಭೂಮಿಯನ್ನು ವಿಂಗಡಿಸಿ ಬೆಳೆಗಳನ್ನು ನಿರ್ದಿಷ್ಟ ಪಡಿಸುವ ಬಗ್ಗೆ

**ಶ್ರೀ ಎಂ.ಪಿ.ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೩೬ (೧೯೦೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಇಲಾಖೆ ನೆರವೇರಿಸುತ್ತಿರುವ ಕಾರ್ಯಗಳೇನು; (ವಿವರ ನೀಡುವುದು) ರೈತರಿಗೆ ಕೃಷಿಯಲ್ಲಿ ನಷ್ಟವಾಗದಂತೆ ನೋಡಿಕೊಳ್ಳಲು ಇಲಾಖೆಯ ಪಾತ್ರವೇನು ;

(ಆ) ಕೃಷಿ ಇಲಾಖೆ ವತಿಯಿಂದ ರೈತರಿಗೆ ಸಿಗುತ್ತಿರುವ ಯೋಜನೆಗಳೇನು; ಮತ್ತು ಯಾವ ಮಟ್ಟದ ರೈತರಿಗೆ ಸಹಾಯಧನಗಳನ್ನು ನೀಡಲಾಗುತ್ತಿದೆ ;

(ಇ) ರಾಜ್ಯದ ಭೂ ಪ್ರದೇಶಗಳನ್ನು ರೈತರಿಗೆ ಸಹಾಯವಾಗುವಂತೆ ಈ ಪ್ರದೇಶದಲ್ಲಿ ಇಂತಹ ಬೆಳೆಗಳಿಗೆ ಅವಕಾಶ ಮತ್ತು ಸೂಕ್ತ ಎಂದು ವಿಂಗಡಿಸಲಾಗಿದೆಯೇ ; ಇದ್ದಲ್ಲಿ, ತಾಲ್ಲೂಕುವಾರು ವಿವರ ನೀಡುವುದು ಇದರ ಬಗ್ಗೆ ರೈತರಿಗೆ ಅರಿವು ಮೂಡಿಸಲು ಇಲಾಖೆಯ ಕಾರ್ಯಗಳೇನು ?

## ಕೃಷಿ ಬದುಗಳು ಹಾಗೂ ಕೃಷಿ ಹೊಂಡಗಳ ನಿರ್ಮಾಣದ ಬಗ್ಗೆ

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೩೭ (೨೦೨೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಹಾವೇರಿ ಜಿಲ್ಲೆ, ಶಿಗ್ಗಾಂವ ತಾಲ್ಲೂಕಿನಲ್ಲಿ ಮಳೆ ನೀರು ತುಂಬಿಸುವ ಎಷ್ಟು ಕೃಷಿ ಬದುಗಳನ್ನು ನಿರ್ಮಾಣ ಮಾಡಲಾಗಿದೆ ; ಇದಕ್ಕಾಗಿ ಸರ್ಕಾರ ಖರ್ಚು ಮಾಡಿರುವ ಅನುದಾನವೆಷ್ಟು ; (ಪೂರ್ಣ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಈ ತಾಲ್ಲೂಕಿನಲ್ಲಿ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಲಾಗಿದೆ ; ಇದಕ್ಕಾಗಿ ಸರ್ಕಾರ ಖರ್ಚು ಮಾಡಿದ ಅನುದಾನವೆಷ್ಟು ; (ಫಲಾನುಭವಿಗಳ ಪೂರ್ಣ ವಿವರ ನೀಡುವುದು)

(ಇ) ಈ ತಾಲ್ಲೂಕಿನಲ್ಲಿ ಕೃಷಿ ಭಾಗ್ಯ ಯೋಜನೆಯಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಫಲಾನುಭವಿಗಳ ಹೆಸರು ಮತ್ತು ಗ್ರಾಮದ ಪೂರ್ಣ ವಿವರ ನೀಡುವುದು)

(ಈ) ಹಾವೇರಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ರೈತರು ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ ; ಈ ರೈತರ ಕುಟುಂಬಕ್ಕೆ ಒದಿಗಿಸಿರುವ ಪರಿಹಾರ ಎಷ್ಟು ? (ರೈತರ ಹೆಸರು, ಗ್ರಾಮವಾರು ಪರಿಹಾರದ ಮೊತ್ತಗಳ ಸಂಪೂರ್ಣ ವಿವರ ನೀಡುವುದು)

## ೨೦೧೬-೧೭ರ ಮುಂಗಾರು ಹಿಂಗಾರುಗಳಲ್ಲಿ ಎಷ್ಟು ಹೆಕ್ಟೇರ್ ಬಿತ್ತನೆ ಬಗ್ಗೆ

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೨೨೩೮ (೨೦೨೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೬-೧೭ರಲ್ಲಿ ಮುಂಗಾರು ಮತ್ತು ಹಿಂಗಾರುಗಳಲ್ಲಿ ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿ ಹೊಂದಲಾಗಿತ್ತು;

ಬಿತ್ತನೆ ಮಾಡಿದ ಪ್ರದೇಶವೆಷ್ಟು ; ಮುಂಗಾರು ಮತ್ತು ಹಿಂಗಾರು ಮಳೆ ಕೊರತೆಯಿಂದ ಒಟ್ಟು ಎಷ್ಟು ಪ್ರದೇಶದಲ್ಲಿ ಬೆಳೆ ನಷ್ಟವಾಗಿದೆ;

(ಆ) ಬೆಳೆ ನಷ್ಟಕ್ಕೆ ಸಂಬಂಧಿಸಿದಂತೆ ಕೇಂದ್ರಕ್ಕೆ ರಾಜ್ಯ ಸರ್ಕಾರ ಕೋರಿದ ಪರಿಹಾರ ಮೊತ್ತವೆಷ್ಟು ; ಕೇಂದ್ರ ಸರ್ಕಾರ ೨೦೧೭ರ ಫೆಬ್ರವರಿ ಅಂತ್ಯಕ್ಕೆ ಮಂಜೂರು ಮಾಡಿ ಬಿಡುಗಡೆ ಮಾಡಿದ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ಸಾಲಬಾಧೆಯಿಂದ ರೈತರು ಆತ್ಮಹತ್ಯೆ ಮಾಡಿಕೊಂಡ ಪ್ರಕರಣಗಳ ಸಂಖ್ಯೆ ಎಷ್ಟು ; ಆತ್ಮಹತ್ಯೆ ಮಾಡಿಕೊಂಡ ಒಟ್ಟು ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಿಗೆ ಪರಿಹಾರ ನೀಡಲಾಗಿದೆ ; ಬಾಕಿ ಪರಿಹಾರ ನೀಡಬೇಕಾದ ಪ್ರಕರಣಗಳು ಹಾಗೂ ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ಪ್ರತಿ ಕುಟುಂಬಕ್ಕೆ ನೀಡುವ ಪರಿಹಾರ ಮೊತ್ತವೆಷ್ಟು ? (ವಾರ್ಷಿಕವಾರು ಮತ್ತು ಜಿಲ್ಲಾವಾರು ಪರಿಹಾರ ನೀಡಿದ, ತಿರಸ್ಕೃತವಾದ ಮತ್ತು ಬಾಕಿ ಇರುವ ಅರ್ಜಿಗಳ ಸಂಖ್ಯೆ ಒಟ್ಟು ಮಾಹಿತಿಯೊಂದಿಗೆ ಹಾವೇರಿ ಜಿಲ್ಲೆಯ ಪ್ರತ್ಯೇಕ ಮಾಹಿತಿ ನೀಡುವುದು)

## ಪಶುಸಂಗೋಪನೆ ಇಲಾಖೆಯ ವಿವಿಧ ಯೋಜನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ.ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೫ (೨೦೨೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶುಸಂಗೋಪನೆ ಇಲಾಖೆಯ ವಿವಿಧ ಯೋಜನೆಗಳಾವುವು ; (ವಿವರ ನೀಡುವುದು)

(ಆ) ಹಾವೇರಿ ಜಿಲ್ಲೆ ಶಿಗ್ಗಾಂವ ತಾಲ್ಲೂಕಿಗೆ ಇಲಾಖೆಯ ವಿವಿಧ ಯೋಜನೆ ಮತ್ತು ಲೆಕ್ಕಶೀರ್ಷಿಕೆಗಳ ಅಡಿಯಲ್ಲಿ ಕಳೆದ ಮೂರು

ವರ್ಷಗಳಿಂದ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ವರ್ಷಾವಾರು, ಯೋಜನೆವಾರು, ಲೆಕ್ಕಶೀರ್ಷಿಕೆಗಳವಾರು ಅನುದಾನದೊಂದಿಗೆ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಈ ತಾಲ್ಲೂಕಿನಲ್ಲಿ ವಿವಿಧ ಯೋಜನೆಗಳ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ವರ್ಷಾವಾರು, ಯೋಜನೆವಾರು, ಫಲಾನುಭವಿಯ ಪೂರ್ಣ ವಿಳಾಸದೊಂದಿಗೆ ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಿಂದ ವಿವಿಧ ಯೋಜನೆ ಮತ್ತು ಲೆಕ್ಕಶೀರ್ಷಿಕೆಗಳ ಅಡಿಯಲ್ಲಿ ತೆಗೆದುಕೊಂಡ ಕಾಮಗಾರಿಗಳು ಯಾವುವು ; (ವರ್ಷಾವಾರು, ಯೋಜನೆವಾರು, ಕಾಮಗಾರಿವಾರು ಅನುದಾನದೊಂದಿಗೆ ವಿವರ ನೀಡುವುದು)

(ಉ) ಇಲಾಖೆಯ ವಿವಿಧ ಯೋಜನೆಗಳಿಗೆ ಹೆಚ್ಚುವರಿಯಾಗಿ ಅನುದಾನವನ್ನು ಬಿಡುಗಡೆ ಮಾಡಲಾಗುವುದೆ ? (ವಿವರ ನೀಡುವುದು)

## ಭಾಗ್ಯಜ್ಯೋತಿ ಮತ್ತು ಕುಟೀರ ಯೋಜನೆಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನ ಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೪೦ (೨೦೨೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಹಾವೇರಿ ಜಿಲ್ಲೆಯ ರೈತರ ಪಂಪ್‌ಸೆಟ್‌ಗಳಿಗೆ ಭಾಗ್ಯಜ್ಯೋತಿ/ಕುಟೀರ ಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಪೂರೈಸಲು ಖರ್ಚು ಮಾಡಲಾಗುತ್ತಿರುವ ವಿದ್ಯುತ್ತಿನ ಪ್ರಮಾಣವೆಷ್ಟು ; ಹಾಗೂ ಇದಕ್ಕೆ ತಗುಲಿರುವ ಅನುದಾನವೆಷ್ಟು ; (ವರ್ಷಾವಾರು, ತಾಲ್ಲೂಕುವಾರು, ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಯಡಿ ವಿದ್ಯುತ್ ಯಾವ ಮೂಲ ಉತ್ಪಾದನೆಯಿಂದ ನೀಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರೈತರಿಗೆ ನೀಡಲಾಗುತ್ತಿರುವ ಉಚಿತ ವಿದ್ಯುತ್‌ನ್ನು ಉತ್ಪಾದನೆಯನ್ನು ಸೋಲಾರ್ ಮುಖಾಂತರ ಉತ್ಪಾದಿಸುವ ಯೋಜನೆಯು ಸರ್ಕಾರದ ಮುಂದಿದೆಯೇ ;

(ಈ) ಹಾಗಿಲ್ಲದಿದ್ದಲ್ಲಿ, ಪ್ರತಿ ವರ್ಷ ಹೂಡಿಕೆಯಾಗುತ್ತಿರುವ ಅನುದಾನದಲ್ಲಿ ಶಾಶ್ವತ ವಿದ್ಯುತ್ ಪೂರೈಕೆಯ ಯೋಜನೆಯನ್ನು ರೂಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ತೊಗರಿ ಬೆಳೆಗೆ ಬೆಂಬಲ ಬೆಲೆ ಮತ್ತು ಸರ್ಕಾರದ ಕ್ರಮ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೪೧ (೨೦೪೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಬಲ ಬೆಲೆಯೊಂದಿಗೆ ತೊಗರಿ ಖರೀದಿಗೆ ರಾಜ್ಯ ಸರ್ಕಾರ ಅನುಸರಿಸುವ ಕ್ರಮಗಳೇನು ; ಇದನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದೇ ; ಇಲ್ಲದಿದ್ದಲ್ಲಿ ಕಾರಣಗಳೇನು ;

(ಆ) ಖರೀದಿಗೆ ವಿಧಿಸಿದ್ದ ದಿನಾಂಕ ವಿಸ್ತಿರಿಸಲು ರಾಜ್ಯ ಸರ್ಕಾರಕ್ಕಿರುವ ತೊಂದರೆಗಳೇನು ; ಇದರಿಂದಾಗಿ ಎಷ್ಟು ಕ್ವಿಂಟಾಲ್ ತೊಗರಿಯು ಖರೀದಿಗೆ ಬಾಕಿ ಇರುತ್ತದೆ ;

(ಇ) ಈ ಮುಂಗಾರು ಸಾಲಿನಲ್ಲಿ ಈವರೆಗೆ ಎಷ್ಟು ತೊಗರಿಯನ್ನು ಎಷ್ಟು ಜನ ರೈತರಿಂದ ಖರೀದಿಸಲಾಗಿದೆ ; ಎಷ್ಟು ಕೋಟಿ ಮೊತ್ತದ ಖರೀದಿ ಮಾಡಲಾಗಿರುತ್ತದೆ ;

(ಈ) ಸಂಕಷ್ಟದಲ್ಲಿರುವ ರೈತರ ನೆರವಿಗೆ ಸರ್ಕಾರ ಬರುವುದೇ ಈ ಬಗ್ಗೆ ಸರ್ಕಾರ ಯಾವ ಕ್ರಮ ಜರುಗಿಸಲಾಗಿದೆ ; (ವಿವರ ಒದಗಿಸುವುದು)

(ಉ) ರಾಜ್ಯ ಸರ್ಕಾರವೇ ತೊಗರಿ ಖರೀದಿ ಮಾಡಿ ಗೋದಾಮುಗಳಲ್ಲಿ ದಾಸ್ತಾನು ಮಾಡಲು ಇರುವ ತೊಂದರೆಗಳೇನು ? (ವಿವರ ಒದಗಿಸುವುದು)

## ರಾಜ್ಯದಲ್ಲಿ ಕೃಷಿ ಹೊಂಡ ನಿರ್ಮಾಣದ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೨೨೪೨ (೨೦೭೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಸರ್ಕಾರ ಎಷ್ಟು ಕೃಷಿ ಹೊಂಡ ನಿರ್ಮಾಣ ಮಾಡುವ ಗುರಿ ಇಟ್ಟುಕೊಳ್ಳಲಾಗಿತ್ತು ; ಅದರಲ್ಲಿ ನಿರ್ಮಾಣ ಮಾಡಿದ್ದೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೃಷಿ ಹೊಂದ ನಿರ್ವಾಣ ಮಾಡಲು ರೈತರ ಬೇಡಿಕೆಗೆ ಅನುಗುಣವಾಗಿ ಇಲಾಖೆಯಿಂದ ಮಂಜೂರಾತಿ ನೀಡಲಾಗುತ್ತಿದೆಯೇ ; ಕೃಷಿ ಹೊಂಡ ನಿರ್ಮಾಣ ಮಾಡಲು ಇಲಾಖೆಯಿಂದ ಅನುಮತಿ ನೀಡುವಲ್ಲಿ ಯಾವ ಮಾನದಂಡವನ್ನು ಅನುಸರಿಸಲಾಗುತ್ತಿದೆ ; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಕೃಷಿ ಹೊಂಡ ನಿರ್ಮಾಣಕ್ಕಾಗಿ ಎಷ್ಟು ಹಣ ನಿಗದಿ ಮಾಡಲಾಗಿದೆ ; ಅದರಲ್ಲಿ ಖರ್ಚು ಮಾಡಿದ್ದು ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಕೃಷಿ ಹೊಂಡ ನಿರ್ಮಾಣ ಮಾಡಿದ ರೈತರಿಗೆ ಸರ್ಕಾರದ ಧನ ಸಹಾಯ ಸರಿಯಾದ ಸಮಯದಲ್ಲಿ ವಿತರಣೆ ಆಗಿಲ್ಲ ಎಂಬ ಆರೋಪಗಳು ಇರುವುದು ನಿಜವೇ ; ಹಾಗಿದ್ದಲ್ಲಿ, ವಿಳಂಬವಾಗಲು ಕಾರಣಗಳೇನು ?

## ವಿದ್ಯುತ್ ದರದ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೪೩ (೨೦೮೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್ ದರ ಯೂನಿಟ್‌ಗೆ ಎಷ್ಟು ಹೆಚ್ಚಿಸಲಾಗಿದೆ ; (ಪರಿಷ್ಕೃತ ದರದ ವಿವರ ನೀಡುವುದು)

(ಆ) ಕಳೆದ ನಾಲ್ಕು ವರ್ಷ ಎಷ್ಟು ಬಾರಿ ವಿದ್ಯುತ್ ದರವನ್ನು ಪರಿಷ್ಕರಿಸಲಾಗಿದೆ ; ಮತ್ತು ಎಷ್ಟು ಹೆಚ್ಚಿಸಲಾಗಿದೆ ; (ವಿವರ ನೀಡುವುದು)

(ಇ) ಕಳೆದ ವರ್ಷಕ್ಕೆ ಹೋಲಿಸಿದರೆ ಈ ಬಾರಿ ತೀವ್ರ ಬರ ಪರಿಸ್ಥಿತಿಯ ನಡುವೆಯೂ ಗ್ರಾಹಕರ ಮೇಲೆ ದರದ ಭಾರ ಹೊರಿಸಿರುವುದು ಸರಿಯೇ ;

(ಈ) ಭೀಕರ ಬರದ ಬೇಗೆಯಲ್ಲಿ ಬಳಲುತ್ತಿರುವ ರಾಜ್ಯದ ಜನತೆಗೆ ಇದೀಗ ವಿದ್ಯುತ್ ದರ ಹೆಚ್ಚಳದ ಶಾಖ ತಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕಾರ್ಬೈಡ್‌ಯುಕ್ತ ಹಣ್ಣುಗಳನ್ನು ಹಾಪ್‌ಕಾಮ್ಸ್‌ನಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು):–**

೨೨೪೪ (೧೯೦೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಹಾಪ್‌ಕಾಮ್ಸ್‌ನಲ್ಲಿ ರಾಸಾಯನಿಕ ಮಿಶ್ರಿತ ಮಾವಿನ ಹಣ್ಣುಗಳ ಮಾರಾಟ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಕಾರ್ಬೈಡ್‌ಯುಕ್ತ ಹಣ್ಣುಗಳನ್ನು ಹಾಪ್‌ಕಾಮ್ಸ್‌ನಲ್ಲಿ ಮಾರಾಟ ಮಾಡದಿರುವ ಬಗ್ಗೆ ಜಾಗೃತ ದಳದ ಸಿಬ್ಬಂದಿ ಪರಿಶೀಲಿಸಿ ಪ್ರಕರಣಗಳನ್ನು ದಾಖಲಿಸಿದ್ದಾರೆಯೇ ; ಅಂತಹ ಪ್ರಕರಣಗಳ ಸಂಖ್ಯೆ ಎಷ್ಟು ; ತಪ್ಪಿತಸ್ಥರಿಗೆ ಸದರಿ ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ೨೦೧೫ರ ಆಹಾರ ಸುರಕ್ಷತಾ ಕಾಯ್ದೆಯಡಿ ಕ್ಯಾಲ್ಷಿಯಂ ಕಾರ್ಬೈಡ್ ಮಾರಾಟ ಸಂಪೂರ್ಣ ನಿಷೇಧಿಸಿದ್ದರೂ, ಇದರ ಉಲ್ಲಂಘನೆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೃತಕ ಮೊಟ್ಟೆಗಳ ಮಾರಾಟ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು):–**

೨೨೪೫ (೨೦೧೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃತಕ ಮೊಟ್ಟೆಗಳ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಇಂತಹ ಕೃತಕ ಮೊಟ್ಟೆಗಳ ಸೇವನೆಯಿಂದ ಉಂಟಾಗುವ ಪರಿಣಾಮಗಳ ಬಗ್ಗೆ ಅಧ್ಯಯನ ನಡೆದಿದೆಯೇ ; (ವಿವರ ನೀಡುವುದು)

(ಇ) ಈ ಬಗ್ಗೆ ಸಾರ್ವಜನಿಕರಿಗೆ ತಿಳುವಳಿಕೆ ನೀಡುವ ಕೆಲಸವನ್ನು ಸರ್ಕಾರ ಮಾಡುವುದೇ ?

## ಘನತ್ಯಾಜ್ಯ ಸಂಸ್ಕರಣಾ ಘಟಕಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೨೪೬ (೨೧೦೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಘನತ್ಯಾಜ್ಯ ಸಂಸ್ಕರಣಾ ಘಟಕಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಸರ್ಕಾರದವತಿಯಿಂದ ಮತ್ತು ಖಾಸಗಿಯವರಿಂದ ನಡೆಸಲಾಗುತ್ತಿರುವ ಘಟಕಗಳು ಯಾವುವು ; ಅವು ಎಷ್ಟು ಪ್ರಮಾಣದ ಘನತ್ಯಾಜ್ಯವನ್ನು ಸಂಸ್ಕರಣೆ ಮಾಡುತ್ತಿವೆ ;

(ಇ) ಸರ್ಕಾರ ಪ್ರತಿ ವರ್ಷ ಘನತ್ಯಾಜ್ಯ ವಿಲೇವಾರಿಗಾಗಿ ಎಷ್ಟು ಹಣವನ್ನು ಮೀಸಲಿಟ್ಟಿದೆ ;

(ಈ) ಆ ಹಣದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಖರ್ಚು ಮಾಡಿರುವ ಮತ್ತು ಖರ್ಚಾಗದೆ ಉಳಿದಿರುವ ಹಣವೆಷ್ಟು ? (ವಿವರ ಒದಗಿಸುವುದು)

# ಬೆಂಗಳೂರು–ಮೈಸೂರು ಕಾರಿಡಾರ್ ರಸ್ತೆ ನಿರ್ಮಾಣ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೨೨೪೭ (೨೦೩೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೧೯೯೭ರ Frame Work Agreement ರೀತ್ಯಾ, ನೈಸ್ ಕಂಪನಿಯವರು ಬೆಂಗಳೂರು–ಮೈಸೂರು ಕಾರಿಡಾರ್ ರಸ್ತೆಯನ್ನು ಎಷ್ಟು ಕಿ.ಮೀ ವರೆಗೆ ನಿರ್ವಹಿಸಿಕೊಡಬೇಕೆಂದು ಒಪ್ಪಂದ ಮಾಡಿಕೊಳ್ಳಲಾಗಿತ್ತು ;

(ಆ) ಸದರಿ ಒಪ್ಪಂದಲ್ಲಿ ಯಾವ ಯಾವ ನಿಬಂಧನೆಗಳನ್ನು ನೈಸ್ ಕಂಪನಿಯವರು ಪಾಲಿಸಬೇಕೆಂದು ವಿಧಿಸಲಾಗಿತ್ತು ;

(ಇ) ಸರ್ಕಾರದ ಎಷ್ಟು ಭೂಮಿಯನ್ನು ರಸ್ತೆ ನಿರ್ಮಾಣಕ್ಕಾಗಿ ನೈಸ್ ಕಂಪನಿಯವರಿಗೆ ನೀಡಲಾಗಿದೆ ; ಭೂಮಿಯ ಜೊತೆಗೆ ಇನ್ನಿತರೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ; ಹಾಗೆ ನೀಡಿರುವ ಭೂಮಿಯನ್ನು ಯಾವ ಯಾವ ಉದ್ದೇಶಕ್ಕಾಗಿ ನೈಸ್ ಕಂಪನಿಯವರು ಬಳಕೆ ಮಾಡಿಕೊಂಡಿರುತ್ತಾರೆ ; (ವಿವರ ನೀಡುವುದು)

(ಈ) ಮೇಲ್ಕಂಡ ಕರಾರಿನ ರೀತ್ಯಾ ಇದುವರೆಗೆ ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ ; ಯಾವ ಯಾವ ಕಾಮಗಾರಿಗಳು ಪೂರ್ಣಗೊಳ್ಳದೆ ಬಾಕಿಯಿರುತ್ತವೆ ; ಯಾವ ಯಾವ ಕಾಮಗಾರಿಗಳು ನಿಬಂಧನೆಗಳನ್ನು ಪಾಲನೆ ಮಾಡಿರುವುದಿಲ್ಲ ; (ವಿವರ ನೀಡುವುದು)

(ಉ) ಪ್ರಸ್ತುತ ರಸ್ತೆ ನಿರ್ಮಾಣ ಯೋಜನೆಯು ೨೦ ವರ್ಷಗಳಾದರೂ ಪೂರ್ಣಗೊಳ್ಳದಿರಲು ಕಾರಣಗಳೇನು ; ಇದಕ್ಕೆ ಕಾರಣೀಕರ್ತರ್‍ಯಾರು ; ಅಂತಹವರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## SCP/TSP ಅಡಿಯಲ್ಲಿ ನಿಗದಿಪಡಿಸಿದ ಅನುದಾನದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೪೮ (೨೦೮೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ SCP/TSP ಅಡಿಯಲ್ಲಿ ತೋಟಗಾರಿಕಾ ಇಲಾಖೆಗೆ ಹಂಚಿಕೆಯಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚು ಮಾಡಲಾದ ಅನುದಾನ ಎಷ್ಟು ;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾಗಿದೆ ; ಕಾರ್ಯಕ್ರಮಗಳ ಹೆಸರು ಖರ್ಚಾದ ಹಣದ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು ?

## SCP/TSP ಅಡಿಯಲ್ಲಿ ನಿಗದಿಪಡಿಸಿದ ಅನುದಾನದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೪೯ (೨೦೮೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ SCP/TSP ಅಡಿಯಲ್ಲಿ ಕೃಷಿ ಇಲಾಖೆಗೆ ಹಂಚಿಕೆಯಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚು ಮಾಡಲಾದ ಅನುದಾನ ಎಷ್ಟು ;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾಗಿದೆ ; ಕಾರ್ಯಕ್ರಮಗಳ ಹೆಸರು ಖರ್ಚಾದ ಹಣದ ಬಗ್ಗೆ ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ?

## ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ನಿಗಧಿಪಡಿಸಿದ ಅನುದಾನದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೫೦ (೨೦೮೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಎಸ್.ಸಿ.ಪಿ/ಟಿ.ಎಸ್.ಪಿ.ಅಡಿಯಲ್ಲಿ ಇಂಧನ ಇಲಾಖೆಗೆ ಹಂಚಿಕೆಯಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚಾದ ಅನುದಾನ ಎಷ್ಟು ;

(ಆ) ಈ ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ಬಳಕೆ ಮಾಡಲಾಗಿದೆ ;

(ಇ) ಹಾಗಿದ್ದಲ್ಲಿ, ಬಳಕೆ ಮಾಡಿಕೊಳ್ಳಲಾದ ಹಣಕ್ಕೆ ನಿರೂಪಿಸಿದ ಕಾರ್ಯಕ್ರಮಗಳು ಯಾವುವು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ನಿಗಧಿಪಡಿಸಿದ ಅನುದಾನದ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೫೧ (೨೦೭೮) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ಇಲಾಖೆಗೆ ಹಂಚಿಕೆಯಾದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚು ಮಾಡಲಾದ ಅನುದಾನ ಎಷ್ಟು;

(ಆ) ಯಾವ ಯಾವ ಕಾರ್ಯಕ್ರಮಗಳಿಗೆ ಖರ್ಚು ಮಾಡಲಾಗಿದೆ ? (ಕಾರ್ಯಕ್ರಮಗಳ ಹೆಸರು, ಖರ್ಚಾದ ಹಣದ ಬಗ್ಗೆ ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

## ಕೊಡಗು ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳಿಗೆ ಸಹಾಯಧನದ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೫೨ (೨೮೯೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ತೋಟಗಾರಿಕೆ ಇಲಾಖೆಯಿಂದ ಸಹಾಯಧನ/ ಪ್ರೋತ್ಸಾಹಧನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; (೨೦೧೨–೧೩ ರಿಂದ ಇಲ್ಲಿಯವರೆಗೆ ವರ್ಷಾವಾರು, ತಾಲ್ಲೂಕುವಾರು ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು) ಹಾಗೂ ಸಹಾಯಧನ ಪಡೆಯಲು ನಿಗಧಿಪಡಿಸಿರುವ ಮಾನದಂಡಗಳೇನು; (ವಿವರ ನೀಡುವುದು)

(ಆ) ರಾಷ್ಟ್ರೀಯ ತೋಟಗಾರಿಕಾ ಮಿಷನ್‌ನಡಿ ಜಿಲ್ಲೆಯಲ್ಲಿ ತೋಟಗಾರಿಕಾ ಬೆಳೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ರೈತರಿಗೆ ನೀಡುವ ಸಹಾಯಧನ/ಸೌಲಭ್ಯಗಳು ಯಾವುವು ; (೨೦೧೨–೧೩ ರಿಂದ ಇಲ್ಲಿಯವರೆಗೆ ತಾಲ್ಲೂಕುವಾರು ವಿವರ ನೀಡುವುದು)

(ಇ) NHM ಯೋಜನೆಯಡಿ ಸಾಲಸೌಲಭ್ಯ/ ಸಹಾಯಧನ ಪಡೆದ ರೈತರು ಅನುಷ್ಠಾನಗೊಳಿಸಿರುವ ಕಾರ್ಯಕ್ರಮಗಳೇನು ? (ಕಳೆದ ೫ ವರ್ಷಗಳ ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿ ಸಾವಯವ ಕೃಷಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೫೩ (೨೮೯೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ೨೦೧೨-೧೩ ರಿಂದ ಇಲ್ಲಿಯವರೆಗೆ ಸಾವಯವ ಕೃಷಿ ಪದ್ಧತಿಗೆ ಒಳಪಟ್ಟಿರುವ ಜಮೀನಿನ ವಿಸ್ತೀರ್ಣ ಎಷ್ಟು ; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಇದುವರೆಗೆ ನೋಂದಾಯಿತರಾದ ಸಾವಯವ ಕೃಷಿಕರ ಸಂಖ್ಯೆ ಎಷ್ಟು ; ಹಾಗೂ ಅವರುಗಳು ಸಾವಯವ ಕೃಷಿ ಪದ್ಧತಿಗೆ ಒಳಪಡಿಸಿರುವ ಜಮೀನೆಷ್ಟು ; ಹಾಗೂ ಸದರಿ ಪದ್ಧತಿಯಲ್ಲಿ ಬೆಳೆಯುತ್ತಿರುವ ಬೆಳೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ನೋಂದಾಯಿತ ಸಾವಯವ ಕೃಷಿ ಸಂಘ/ಸಂಸ್ಥೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಹೆಸರು, ವಿಳಾಸ ಮತ್ತು ಅವುಗಳ ಚಟುವಟಿಕೆಗಳ ಸಂಪೂರ್ಣ ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹುದ್ದೆಗಳು ಖಾಲಿ ಇರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೫೪ (೨೮೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಿಗೆ ಮಂಜೂರಾದ ವಿವಿಧ ಶ್ರೇಣಿಯ ಹುದ್ದೆಗಳು ಎಷ್ಟು ; (ಪ್ರತ್ಯೇಕ ವಿವರ ನೀಡುವುದು)

(ಆ) ಸದರಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು :

(ಈ) ಯಾವ ಕಾಲಮಿತಿಯೊಳಗೆ ಸದರಿ ಹುದ್ದೆಗಳನ್ನು ತುಂಬಲಾಗುವುದು ?

## ರಾಜ್ಯದಲ್ಲಿರುವ ನಗರ ಪಂಚಾಯಿತಿ, ಪುರಸಭೆ ಹಾಗೂ ನಗರಸಭೆಗಳಲ್ಲಿರುವ ಪೌರಕಾರ್ಮಿಕರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೨೨೫೫ (೨೦೪೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ನಗರ ಪಂಚಾಯಿತಿ, ಪುರಸಭೆ, ಮತ್ತು ನಗರಸಭೆಗಳಲ್ಲಿರುವ ಒಟ್ಟು ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ನಗರಸಭೆ ಪುರಸಭೆ ಮತ್ತು ನಗರ ಪಂಚಾಯಿತಿಗಳಿಗೆ ಯಾವ ಉದ್ದೇಶಗಳಿಗೆ ಅನುದಾನ ನೀಡಲಾಗುತ್ತಿದೆ ; ವಾರ್ಷಿಕವಾಗಿ ನೀಡುವ ಅನುದಾನವೆಷ್ಟು ; (ವಿವರ ಒದಗಿಸುವುದು)

(ಇ) ನಗರಸಭೆ ಪುರಸಭೆ ಮತ್ತು ನಗರ ಪಂಚಾಯಿತಿಗಳಿಗೆ ಕುಡಿಯುವ ನೀರಿಗಾಗಿ ೨೦೧೫–೧೬, ೨೦೧೬–೧೭ ರಲ್ಲಿ ಬಿಡುಗಡೆ ಮಾಡಿದ ಅನುದಾನವೆಷ್ಟು ; (ವಿವರ ಒದಗಿಸುವುದು)

(ಈ) ನಗರ ಪಂಚಾಯಿತಿ ರಾಜ್ಯದಲ್ಲಿರುವ ಎಷ್ಟು ಗ್ರಾಮ ಪಂಚಾಯಿತಿಗಳನ್ನು ನಗರ ಸಭೆಗಳನ್ನು ಪುರಸಭೆಗಳನ್ನಾಗಿ ಉನ್ನತೀಕರಿಸಲು ಇಲಾಖೆಯ ಮುಂದಿರುವ ಪ್ರಸ್ತಾವನೆಗಳು ಯಾವುವು ? (ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಿಂದ ಬಿಡುಗಡೆ ಮಾಡಿದ ಅನುದಾನದ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೨೨೫೬ (೨೦೪೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ ದಕ್ಷಿಣ ಕನ್ನಡ ಜಿಲ್ಲೆಗೆ ಬಿಡುಗಡೆ ಮಾಡಿದ ಒಟ್ಟು ಅನುದಾನವೆಷ್ಟು; (ಕ್ಷೇತ್ರವಾರು ವಿವರ ನೀಡುವುದು)

(ಆ) ರಾಜ್ಯದ ದಕ್ಷಿಣ ಕನ್ನಡ ಜಿಲ್ಲೆಯ ಯಾವ ರಸ್ತೆಗಳನ್ನು ಜಿಲ್ಲಾ ರಸ್ತೆಯಿಂದ ಮತ್ತು ರಾಜ್ಯ ಹೆದ್ದಾರಿಯಿಂದ ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಉನ್ನತೀಕರಿಸಲು ಇಲಾಖೆಯ ಮುಂದಿರುವ ಪ್ರಸ್ತಾವನೆಗಳು ಯಾವುವು ; (ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ೨೦೧೬–೧೭ ನೇ ಸಾಲಿನಲ್ಲಿ ಎಷ್ಟು ಕಿಲೋ ಮೀಟರ್ ರಾಜ್ಯ ಹೆದ್ದಾರಿ ಮತ್ತು ಎಷ್ಟು ಕಿಲೋ ಮೀಟರ್ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲಾಗಿದೆ ; ಹಾಗೂ ತಗುಲಿದ ವೆಚ್ಚವೆಷ್ಟು? (ವಿವರ ಒದಗಿಸುವುದು)

## ರಾಜ್ಯದಲ್ಲಿ ಉತ್ಪಾದಿಸುವ ಮಾವಿನಹಣ್ಣುಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು):–**

೨೨೫೭ (೨೦೪೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಉತ್ಪಾದಿಸುವ ಒಟ್ಟು ಎಷ್ಟು ಟನ್ ಮಾವಿನಹಣ್ಣು ಉಪಯೋಗಿಸಲಾಗುತ್ತಿದೆ ; ಮತ್ತು ರೈತರಿಗೆ ನೀಡುತ್ತಿರುವ ಪ್ರೋತ್ಸಾಹಗಳೇನು ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಇತರ ರಾಜ್ಯಗಳಿಂದ ಮಾವಿನಹಣ್ಣನ್ನು ಮಾರಾಟಕ್ಕೆ ತರಲಾಗುತ್ತಿದೆಯೇ ; ತರಲಾಗುತ್ತಿದ್ದರೆ, ನಮ್ಮ ರಾಜ್ಯದ ರೈತರ ಹಿತ ಕಾಪಾಡಲು ಇಲಾಖೆಯ ಮುಂದಿಡುವ ಪ್ರಸ್ತಾವನೆಗಳು ಯಾವುವು ; (ವಿವರ ಒದಗಿಸುವುದು)

(ಇ) ಮಾವಿನಹಣ್ಣಿಗೆ ಮಾರುಕಟ್ಟೆ ಒದಗಿಸಲು ಇಲಾಖೆ ಮಾವು ಮೇಳಗಳನ್ನು ಸಂಘಟಿಸುತ್ತಿದೆಯೇ ; ಇದ್ದರೆ, ವಿವರ ಒದಗಿಸುವುದು ;

(ಈ) ಮನೆಯ ಮೇಲಿನ ತಾರಸಿ ಕೃಷಿಯನ್ನು ಪ್ರೋತ್ಸಾಹಿಸಲಾಗುತ್ತಿದೆಯೇ ; ರಾಜ್ಯದಲ್ಲಿರುವ ಒಟ್ಟು ತಾರಸಿ ಕೃಷಿಗಳ ಸಂಖ್ಯೆ ಎಷ್ಟು ; ರಾಜ್ಯದ ಯಾವ ಭಾಗದಲ್ಲಿ ತಾರಸಿ ಕೃಷಿಗೆ ಉತ್ತೇಜಿಸಲಾಗುತ್ತಿದೆ ? (ವಿವರ ಒದಗಿಸುವುದು)

## ರೂಫ್ ಟಾಪ್ ಸೋಲಾರ್ ವಿದ್ಯುತ್ ಉತ್ಪಾದಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೨೨೫೮ (೨೦೪೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೂಪ್ ಟಾಪ್ ಸೋಲಾರ್ ವಿದ್ಯುತ್ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು ; ಬ್ಯಾಂಕ್‌ಗಳು ಸೋಲಾರ್ ಅಳವಡಿಸಲು ಸಾಲ ನೀಡಲು ಸಹಕರಿಸದಿರುವ ಬಗ್ಗೆ ಇಲಾಖೆಯ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಕೈಗೊಂಡ ಕ್ರಮಗಳೇನು ;

(ಆ) ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಸೋಲಾರ್ ರೂಪ್ ಟಾಪ್ ಅಳವಡಿಸುವ ಬಗ್ಗೆ ಮಾಹಿತಿ ಶಿಬಿರ ಮತ್ತು ಬ್ಯಾಂಕ್‌ಗಳಿಂದ ಸಾಲ ಮೇಳಗಳನ್ನು ನಡೆಸಲು ಇಲಾಖೆಯಿಂದ ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಸೋಲಾರ್ ರೂಪ್ ಟಾಪ್ ಅಳವಡಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಸೋಲಾರ್ ಬಳಕೆ ಮಾಡುತ್ತಿರುವ ಗ್ರಾಹಕರಿಗೆ ಇಲಾಖೆಯಿಂದ ಗುರುತಿಸಿ ಗ್ರೀನ್ ಸರ್ಟಿಫಿಕೇಟ್ ನೀಡಿ ಗೌರವಿಸಲು ಇಲಾಖೆ ಕ್ರಮ ಕೈಗೊಂಡಿದೆಯೇ ?

## ಶಿರಾಡಿ ಘಾಟ್ ೨ನೇ ಹಂತದ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮ ನಿರ್ದೇಶನ ಹೊಂದಿದವರು):–**

೨೨೫ (೨೦೪೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿರಾಡಿ ಘಾಟ್ ಎರಡನೇ ಹಂತದ ಕಾಮಗಾರಿ ಇಂದಿನವರೆಗೂ ಕೈಗೊಳ್ಳದೆ ವಿಳಂಬಗೊಳ್ಳಲು ಕಾರಣವೇನು ; ಈ ವಿಳಂಬದಿಂದಾಗಿ ಸರ್ಕಾರಕ್ಕೆ ಉಂಟಾದ ನಷ್ಟವೆಷ್ಟು ; (ವಿವರ ಒದಗಿಸುವುದು)

(ಆ) ಲೋಕೋಪಯೋಗಿ ಇಲಾಖೆಯಿಂದ ರಾಜ್ಯದ ರಸ್ತೆ ಅಭಿವೃದ್ಧಿಗಾಗಿ ೨೦೧೪-೧೫, ೨೦೧೫-೧೬, ೨೦೧೬-೧೭ನೇ ಸಾಲುಗಳಲ್ಲಿ ವಿನಿಯೋಗಿಸಿದ ಹಣವೆಷ್ಟು ; (ವಿವರ ಒದಗಿಸುವುದು)

(ಇ) ಲೋಕೋಪಯೋಗಿ ಇಲಾಖೆಯಲ್ಲಿ ಇಂದಿನವರೆಗೆ ಎಷ್ಟು ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಮಾಡಲಾಗಿದೆ ; (ವಿವರ ಒದಗಿಸುವುದು) ೨೦೦೮ ರಿಂದ ೨೦೧೬-೧೭ ರವರೆಗೆ ಈ ಸಂಬಂಧ ವಿನಿಯೋಗಿಸಿದ ಅನುದಾನವೆಷ್ಟು ; (ವಿವರ ಒದಗಿಸುವುದು)

(ಈ) ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳನ್ನು ಉನ್ನತೀಕರಿಸಲು ಕೇಂದ್ರ ಸರ್ಕಾರ ಬಿಡುಗಡೆಗೊಳಿಸಿದ ಅನುದಾನವೆಷ್ಟು ? (೨೦೧೪-೧೫, ೨೦೧೫-೧೬, ೨೦೧೬-೧೭ ರವರೆಗಿನ ವಿವರ ಒದಗಿಸುವುದು)

## ಕಲಬುರಗಿ ಜಿಲ್ಲೆಯ ಇಲಾಖಾ ಕಾಮಗಾರಿಗಳಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :-**

೨೨೬೦ (೨೦೮೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೪ ವರ್ಷಗಳಲ್ಲಿ ಲೋಕೋಪಯೋಗಿ ಇಲಾಖಾ ವತಿಯಿಂದ ನಡೆಯುತ್ತಿರುವ ಯೋಜನೆಗಳಾವುವು ; (ವಿವರ ಒದಗಿಸುವುದು)

(ಆ) ಜಿಲ್ಲೆಯಲ್ಲಿ ಇಂತಹ ಕಾಮಗಾರಿಗಳಿಗೆ ತಗಲಿರುವ ವೆಚ್ಚವೆಷ್ಟು ; (ವಿವರ ಒದಗಿಸುವುದು)

(ಇ) ಇಂತಹ ಕಾಮಗಾರಿಗಳು ಪೂರ್ಣಗೊಂಡು ಲೋಕಾರ್ಪಣೆಗೊಳ್ಳಲು ಎಷ್ಟು ಸಮಯ ಬೇಕಾಗುತ್ತದೆ ; ಲೋಕಾರ್ಪಣೆಗೊಂಡಿರುವ ಕಾಮಗಾರಿಗಳು ಯಾವುವು ? (ವಿವರ ಒದಗಿಸುವುದು)

## ಕಲಬುರಗಿ ಜಿಲ್ಲೆಯಲ್ಲಿನ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಯ ಕಾಮಗಾರಿಗಳಿಗೆ ಸಂಬಂಧಿಸಿದ ಬಗ್ಗೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೨೨೬೧ (೨೯೯೦) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಜಿಲ್ಲೆಯಲ್ಲಿ ಕಳೆದ ೪ ವರ್ಷಗಳಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಗಳ ಅಡಿಯಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಕಳೆದ ೪ ವರ್ಷಗಳಲ್ಲಿ ಜಿಲ್ಲೆಯಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಗಳ ಅಡಿಯಲ್ಲಿ ತೆಗೆದುಕೊಂಡ ಕಾಮಗಾರಿಗಳಾವುವು ; ಈ ಕಾಮಗಾರಿಗಳು ಯಾವ ಯಾವ ಏಜೆನ್ಸಿಗಳಿಗೆ ನೀಡಲಾಗಿದೆ ? (ವಿವರ ಒದಗಿಸುವುದು)

## ಲೋಕೋಪಯೋಗಿ ಇಲಾಖೆ ಅಭಿಯಂತರರ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೬೨ (೨೧೧೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೬ ಮಾರ್ಚ್‌ರಂದು ಸುಮಾರು ೩೦೦ ಸಾಮಾನ್ಯ ವರ್ಗದ ಸಹಾಯಕ ಅಭಿಯಂತರರನ್ನು ಸಹಾಯಕ ಕಾರ್ಯಪಾಲಕ ಅಭಿಯಂತರರನ್ನಾಗಿ ಪದೋನ್ನತಿಯನ್ನು ನೀಡಿದ್ದು, ಸದರಿ ಪದೋನ್ನತಿಯಲ್ಲಿ ೨೦೧೭ ಲೋಕೋಪಯೋಗಿ ಇಲಾಖೆ ಬ್ಯಾಚಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಹಾಯಕ ಅಭಿಯಂತರರು ಅರ್ಹರಿದ್ದರು ಅವರನ್ನು ಪದೋನ್ನತಿಗೆ ಪರಿಗಣಿಸದಿರಲು ಕಾರಣವೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಸೋಲಾರ್ ಉತ್ಪಾದನೆ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೬೩ (೨೧೧೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ರಾಜ್ಯದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಹೆಚ್ಚಿಸಲು ಯಾವ ಯಾವ ಯೋಜನೆಗಳು ಜಾರಿಯಲ್ಲಿವೆ ; (ಮಾನದಂಡಗಳೇನು)

(ಆ) ಬಾಗಲಕೋಟೆ, ಮುಧೋಳ್ ತಾಲ್ಲೂಕಿಗೆ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆಗಳಾವುವು ; (ಸೌವಲತ್ತು ಪಡೆದವರ ವಿವರ ಒದಗಿಸುವುದು)

(ಇ) ಸರ್ಕಾರದಿಂದ ಬಾಗಲಕೋಟೆ, ಮುಧೋಳ್ ತಾಲ್ಲೂಕಿಗೆ ಸೋಲಾರ್ ಉತ್ಪಾದನೆ ಮಾಡಲು ದೊರಕಿರುವ ಯೋಜನೆಗಳಾವುವು ;

(ಈ) ಹೊಸದಾಗಿ ಆರಂಭಿಸಲು ಇರುವ ಮಾನದಂಡಗಳೇನು ?

## ಚಾಮರಾಜನಗರದ ಕರಿವರದರಾಜು ಬೆಟ್ಟದ ಮೆಟ್ಟಿಲು ಕಾಮಗಾರಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೪ (೨೧೩೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದ ಪ್ರಸಿದ್ಧ ಯಾತ್ರಾಸ್ಥಳ ಮತ್ತು ಪ್ರವಾಸಿ ತಾಣವಾದ ಕರಿವರದರಾಜ ಬೆಟ್ಟಕ್ಕೆ ಕಲ್ಲಿನ ಮೆಟ್ಟಿಲುಗಳನ್ನು ನಿರ್ಮಿಸುವ ಕಾಮಗಾರಿ ಯಾವಾಗ ಆರಂಭವಾಯಿತು ; ಇದಕ್ಕೆ ಒದಗಿಸಲಾಗಿರುವ ಆಯವ್ಯಯ ಎಷ್ಟು ; ಇದುವರೆಗೆ ಆಗಿರುವ ಕಾಮಗಾರಿಗಳು ಯಾವುವು ; ಕಾಮಗಾರಿ ಪೂರ್ಣಗೊಳ್ಳಲು ಬೇಕಾಗಿರುವ ಅನುದಾನ ಎಷ್ಟು ; ಯಾವಾಗ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ;

(ಆ) ಈ ಬೆಟ್ಟಕ್ಕೆ ನಿರ್ಮಿಸಲಾಗಿರುವ ಕಡಿದಾದ ರಸ್ತೆಯನ್ನು ಅಗಲೀಕರಣಗೊಳಿಸಿ ವಾಹನಗಳು ಬೆಟ್ಟದ ಮೇಲಕ್ಕೆ ಹೋಗಿಬರುವಂತೆ ಮಾಡಲಾಗುವುದೇ ?

## ಹೆಚ್.ಡಿ. ಕೋಟೆ ತಾಲ್ಲೂಕು, ಅಂತರಸಂತೆ–ಶೀರನಹುಂಡಿ ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೫ (೨೧೩೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೆಚ್.ಡಿ. ಕೋಟೆ ತಾಲ್ಲೂಕು, ಶೀರನಹುಂಡಿ ರಸ್ತೆ ಕಾಮಗಾರಿ ಯಾವಾಗ ಆರಂಭವಾಯಿತು ; ಇದರ ಅಂದಾಜು ವೆಚ್ಚ ಎಷ್ಟು ; ಕಾಮಗಾರಿಗಳು ಮುಕ್ತಾಯಗೊಳ್ಳುವುದು ಯಾವಾಗ ;

(ಆ) ಈ ರಸ್ತೆ ಕಾಮಗಾರಿಗಳನ್ನು ನಿಲ್ಲಿಸಿದ್ದು, ರಸ್ತೆಯ ಎರಡೂ ಬದಿ ಮಣ್ಣನ್ನು ಸುರಿದು, ಮಳೆಯಿಂದ ಮಣ್ಣು ಚರಂಡಿಗೆ ಬಿದ್ದು, ರಸ್ತೆಯೆಲ್ಲಾ ಕೆಸರಾಗಿ ಜನ ವಾಹನ ಸಂಚಾರಕ್ಕೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕಾಮಗಾರಿಯನ್ನು ಬೇಗ ಪೂರ್ಣಗೊಳಿಸಲಾಗುವುದೇ ?

## ಚಾಮರಾಜನಗರ ಜೋಡಿ ರಸ್ತೆ ಕಾಮಗಾರಿಯಲ್ಲಿ ವಿಳಂಬದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬೬ (೨೧೩೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದ ಬಿ.ರಾಮಯ್ಯ ನೂರಡಿ ಜೋಡಿ ರಸ್ತೆಯ ಕಾಮಗಾರಿಯಲ್ಲಿ ವಿಳಂಬವಾಗಿದ್ದು, ಸಾರ್ವಜನಿಕರಿಗೆ, ಅಂಗಡಿ ಮುಂಗಟ್ಟುಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕಾಮಗಾರಿಗೆ ಮಂಜೂರಾಗಿರುವ ಅನುದಾನ ಎಷ್ಟು ; ಟೆಂಡರ್ ಕರೆಯಲಾಗಿದೆಯೇ ; ಯೋಜನೆಯ ರೂಪುರೇಷೆಗಳೇನು ; ಈ ರಸ್ತೆಯನ್ನು ಎಲ್ಲಿಂದ ಎಲ್ಲಿಯವರೆಗೆ ೧೦೦ ಅಡಿ ರಸ್ತೆಯನ್ನಾಗಿ ಎಲ್ಲಿಯವರೆಗೆ ೮೦ ಅಡಿ ರಸ್ತೆಯನ್ನಾಗಿ ನಿಗಧಿಪಡಿಸಲಾಗಿದೆ ; ಸದರಿ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

## ರಾಜ್ಯದಲ್ಲಿ ಮುಂಗಾರು ಬೆಳೆಗಳಿಗೆ ಗೊಬ್ಬರದ ದಾಸ್ತಾನು ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೨೨೬೭ (೨೧೧೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಈ ಬಾರಿ ಮಳೆಗಾಲ ಬೇಗನೆ ಆಗುವ ಲಕ್ಷಣಗಳು ಇದ್ದು, ರೈತರಿಗೆ ಬೇಕಾಗುವ ವಿವಿಧ ಮಾದರಿಯ ರಸಗೊಬ್ಬರಗಳನ್ನು ಸಂಗ್ರಹಿಸಲಾಗಿದೆಯೇ ;

(ಆ) ರೈತರಿಗೆ ಬೇಕಾಗುವ ಈ ರಸಗೊಬ್ಬರಗಳನ್ನು ಯಾವ ಏಜೆನ್ಸಿಗಳ ಮುಖಾಂತರ ವಿತರಣೆ ಮಾಡಲಾಗುವುದು ;

(ಇ) ಕಳೆದ ಎರಡು ವರ್ಷಗಳಲ್ಲಿ ರೈತರು ವಿವಿಧ ಮಾದರಿಯ ರಸಗೊಬ್ಬರಗಳಿಗಾಗಿ ಹೋರಾಟ ಮಾಡಿದ ಘಟನೆಗಳನ್ನು ನೆನಪಿನಲ್ಲಿಟ್ಟು ಆ ತರಹದ ಘಟನೆಗಳು ಮರುಕಳಿಸದಂತೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಕಳೆದ ೩ ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ಉಪಯೋಗಿಸುವ ವಿವಿಧ ರಸಗೊಬ್ಬರಗಳು ಹಾಗೂ ಪ್ರಮಾಣ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ನಗರೋತ್ಥಾನ ಯೋಜನೆಗಳ ಬಗ್ಗೆ

**ಶ್ರೀ ಎನ್.ಎಸ್.ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೨೬೮ (೨೦೬೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

೨೦೧೭–೧೮ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ ವಿವಿಧ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ನಗರೋತ್ಥಾನ ಯೋಜನೆಗಳಿಂದ ಮಂಜೂರಾತಿಯಾಗಿರುವ ಕಾಮಗಾರಿಗಳನ್ನು ಕೈಗೆತ್ತಿಗೊಳ್ಳಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು ?

## ಕೃಷಿ ಹೊಂಡ ನಿರ್ಮಾಣದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೯ (೨೧೧೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ ನಿರ್ಮಾಣವು ನಿರೀಕ್ಷಿತ ಗುರಿ ತಲುಪದೇ ಕೇವಲ ಹೇಳಿಕೆಗೆ ಸೀಮಿತವಾಗಿರುವುದು ನಿಜವೇ ;

(ಆ) ಕೃಷಿ ಭಾಗ್ಯ ಯೋಜನೆಯ ಉದ್ದೇಶ ಮತ್ತು ರೂಪುರೇಷೆಗಳೇನು; ಕೃಷಿ ಹೊಂಡ ಮತ್ತು ಕೃಷಿ ಹೊಂಡ ಮುಚ್ಚಳದ ಘಟಕ ವೆಚ್ಚವೆಷ್ಟು; ಸಬ್ಸಿಡಿ ಮೊತ್ತವೆಷ್ಟು ;

(ಇ) ಕಳೆದ ೨ ವರ್ಷದಲ್ಲಿ ನಿರ್ಮಾಣ ಮಾಡಿದ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; ಗುರಿ ಮತ್ತು ಸಾಧನೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಕೃಷಿ ಹೊಂಡ ನಿರ್ಮಾಣ ಮಾಡಿಕೊಂಡ ಅನೇಕ ರೈತರಿಗೆ ಸರ್ಕಾರದಿಂದ ಸಿಗಬೇಕಾದ ಸಬ್ಸಿಡಿ ಹಣ ಸಿಗದೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಒಟ್ಟು ಎಷ್ಟು ರೈತರಿಗೆ ಸಬ್ಸಿಡಿ ಹಣ ಬಿಡುಗಡೆ ಮಾಡಲಾಗಿದೆ ; ಒಟ್ಟು ಎಷ್ಟು ರೈತರಿಗೆ ಸಬ್ಸಿಡಿ ಹಣ ಬಿಡುಗಡೆಗೆ ಬಾಕಿ ಇದೆ ;

(ಉ) ವಿಳಂಬಕ್ಕೆ ಕಾರಣಗಳೇನು ; ಕೃಷಿ ಹೊಂಡ ನಿರ್ಮಾಣ ಯೋಜನೆಯನ್ನು ಗುರಿಗೆ ತಕ್ಕಂತೆ ನಿರೀಕ್ಷಿತ ಮಟ್ಟದಲ್ಲಿ ನಿರ್ಮಾಣ ಮಾಡಲು ಮತ್ತು ಬಾಕಿ ಹಣವನ್ನು ರೈತರಿಗೆ ಶೀಘ್ರವಾಗಿ ಪಾವತಿಸಲು ಯಾವ ಕ್ರಮ ಕೈಗೊಳ್ಳಲಿದೆ ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 042/800 ಪ್ರತಿಗಳು/02–06–2017